ಸಂಪುಟ: 05 ಸಂಚಿಕೆ: 173 ಪುಟಗಳು: 08 ಶನಿವಾರ 06 ಸೆಪ್ಟೆಂಬರ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು

ನಿಮ್ಮನ್ನು ನೀವು ಕಂಡುಕೊಳ್ಳುವ ಬಗೆ ಯಾವುದಾದರೂ ಇದ್ದರೆ ಅದು ಮತ್ತೊಬ್ಬರಿಗೆ ಸೇವೆ ಮಾಡುವುದೇ ಆಗಿದೆ.

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## 18 ಸಾವಿರ ಶಿಕ್ಷಕರ ನೇಮಕ ಸಚಿವ ಮಧು ಬಂಗಾರಪ್ಪ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ 18 ಸಾವಿರ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದರು. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆ ವತಿಯಿಂದ ಹಮಿಕೊಂಡಿದ್ದ ಭಾರತರತ್ನ ಡಾ.ಸರ್ವಪಲ್ಲಿ ರಾಧಾಕೃಷ್ಣರವರ ಜನ ದಿನಾಚರಣೆ ಅಂಗವಾಗಿ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆ, ರಾಜ್ಯಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು. ಕಲಬುರಗಿ ಭಾಗದಲ್ಲಿ 5 ಸಾವಿರ ಶಿಕ್ಷಕರ ನೇಮಕಾತಿಗೆ ಅನುಮೋದನೆ ನೀಡಲಾಗಿದೆ. 800 ಕೆಪಿಎಸ್‌ಸಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ. 5 ಸಾವಿರ ದ್ವಿಭಾಷಾ ಶಾಲೆಗಳನ್ನು ಮಂಜೂರು ಮಾಡಲಾಗಿದೆ ಎಂದು ಅವರು ತಿಳಿಸಿದರು. 1 ಸಾವಿರವಿದ್ದ ಎಲ್‌ಕೆಜಿ, ಯುಕೆಜಿ ಶಾಲೆಗಳನ್ನು 4 ಸಾವಿರಕ್ಕೆ ಹೆಚ್ಚಿಸಲಾಗಿದೆ. ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೂ ಅನುಮೋದನೆ ನೀಡಲಾಗಿದೆ.

6 ದಿನಗಳ ಕಾಲ ಮಕ್ಕಳ ಭೌತಿಕತೆ ಹೆಚ್ಚಲು ಮೊಟ್ಟೆ ಇಲ್ಲವೇ ಬಾಳೆಹಣ್ಣನ್ನು ನೀಡಲಾಗುತ್ತಿದೆ ಎಂದರು. ನಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಶಾಲೆಗಳ ಮೂಲ ಸೌಕರ್ಯ ಕಲ್ಪಿಸಲಾಗುತ್ತಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಶಾಲಾ ಮಕ್ಕಳಿಂದ ಸಂವಿಧಾನ ಪೀಠಿಕೆಯನ್ನು ಶಿಕ್ಷಣ ಸಚಿವರು ಬೋಧಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಾಲಾ ಮಕ್ಕಳಿಗೆ ಶುಭ ಕೋರಿದರು.

## ಗಿರೀಶ್ ಮಟ್ಟಣ್ಣನವರ್‌ಗೆ ಎಸ್‌ಐಟಿ ಅಧಿಕಾರಿಗಳು ಗ್ರಿಲ್

• ಉದಯವಾಹಿನಿ, ಬೆಂಗಳೂರು

ಗಿರೀಶ್ ಮಟ್ಟಣ್ಣನವರ್‌ರನ್ನು ಎಸ್‌ಐಟಿ ಅಧಿಕಾರಿಗಳು ವಿಚಾರಣೆಗೆ ಒಳಪಡಿಸಿದ್ದಾರೆ. ಎಸ್‌ಐಟಿ ಕಚೇರಿಗೆ ಹಾಜರಾದ ಗಿರೀಶ್ ಅವರನ್ನು ಎಸ್‌ಐಟಿ ಅಧಿಕಾರಿಗಳು ಬುರುಡೆ ಪ್ರಕರಣ ಸಂಬಂಧ ಹಲವಾರು ಪ್ರಶ್ನೆಗಳನ್ನು ಕೇಳಿ ಕೆಲವು ಮಾಹಿತಿಗಳನ್ನು ಪಡೆದುಕೊಂಡಿದ್ದಾರೆಂದು ತಿಳಿದುಬಂದಿದೆ. ಬುರುಡೆ ಚಿನ್ನಯ್ಯ ವಿಚಾರಣೆ ಸಂದರ್ಭದಲ್ಲಿ ಆತ ಹೇಳಿರುವ ಕೆಲವು ಸೂಕ್ಷ್ಮ ವಿಷಯಗಳ ಹಿನ್ನೆಲೆಯಲ್ಲಿ ಇಂದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದ ಹಿನ್ನೆಲೆಯಲ್ಲಿ ಗಿರೀಶ್ ಹಾಜರಾಗಿದ್ದು, ಅವರ ವಿಚಾರಣೆ ನಡೆಯುತ್ತಿದೆ. ಗಿರೀಶ್ ಮಟ್ಟಣ್ಣನವರ್ ಹಾಗೂ ಮತ್ತಿತರರು ಚಿನ್ನಯ್ಯನನ್ನು ತಮಿಳುನಾಡಿನಲ್ಲಿ ಸಂಪರ್ಕಿಸಿ ಅವರನ್ನು ಕರೆತಂದು ಆಶ್ರಯ ನೀಡಿ ತಾವು ಹೇಳಿದ ಹಾಗೆ ನಡೆದುಕೊಳ್ಳಬೇಕೆಂದು ಒತ್ತಡ ಹಾಕಿದ್ದರೆಂಬುದು ತನಿಖೆ ವೇಳೆ ಗೊತ್ತಾಗಿದೆ. ಪ್ರಕರಣ ಸಂಬಂಧ ಬ್ರಹಾವರ ಠಾಣೆ ಪೊಲೀಸರು ಉಜಿರೆಯ ಮಹೇಶ್ ಶೆಟ್ಟಿ ತಿಮರೋಡಿ ಅವರನ್ನು ಬಂಧಿಸಲು ಅವರ ಮನೆಗೆ ಹೋದಾಗ ಪೊಲೀಸ್ ಕರ್ತವ್ಯಕ್ಕೆ ಗಿರೀಶ್ ಮಟ್ಟಣ್ಣನವರ್ ಅಡ್ಡಿಪಡಿಸಿದ್ದರು. ಹಾಗಾಗಿ ಗಿರೀಶ್ ಮಟ್ಟಣ್ಣನವರ್ ವಿರುದ್ಧ ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ. ಗಿರೀಶ್ ಮಟ್ಟಣ್ಣನವರ್, ಮಹೇಶ್ ಶೆಟ್ಟಿ ತಿಮರೋಡಿ, ಜಯಂತ್ ಟಿ ಮುಂತಾದವರು ಧರ್ಮಸ್ಥಳದ ವಿರುದ್ಧ ಪಿತೂರಿ ಮಾಡಿದ್ದಾರೆಂದು ಕೆಲವರು ಆರೋಪಿಸಿದ್ದರು. ಈ ಬಗ್ಗೆ ತನಿಖೆ ಪ್ರಗತಿಯಲ್ಲಿದೆ.ಸೌಜನ್ಯ ಪರ ಹೋರಾಟ ಹಾಗೂ ಪ್ರತಿಭಟನೆ ಸಂದರ್ಭದಲ್ಲಿ ಧರ್ಮಸ್ಥಳ ಹಾಗೂ ಧರ್ಮಾಧಿಕಾರಿ ವಿರುದ್ಧ ಗಿರೀಶ್ ಮಟ್ಟಣ್ಣನವರ್ ಹಲವು ಆರೋಪ ಮಾಡಿದ್ದರು.

## ಮತಪತ್ರ ಬಳಕೆ ಮಾಡುವ ಬಗ್ಗೆ ಬಿಜೆಪಿಯವರಿಗೆ ಆತಂಕವೇಕೆ

• ಉದಯವಾಹಿನಿ, ಬೆಂಗಳೂರು

ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಕೆ ಮಾಡುವ ಬಗ್ಗೆ ಬಿಜೆಪಿಯವರಿಗೆ ಏಕೆ ಆತಂಕ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದರು. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಕೆ ಜಾರಿಗೆ ತರಲು ರಾಜ್ಯ ಸರ್ಕಾರಕ್ಕೆ ಅವಕಾಶವಿದೆ. ಬಿಜೆಪಿ ಆಡಳಿತಾವಧಿಯಲ್ಲಿ ಮಾಡಿರುವ ಕಾನೂನಿನಲ್ಲಿ ಮತಪತ್ರ ಅಥವಾ ಇವಿಎಂ ಬಳಕೆ ಎಂಬುದಿದೆ. ಹೀಗಾಗಿ ನಾವು ಮತಪತ್ರ ಬಳಕೆಗೆ ತೀರ್ಮಾನಿಸಿದ್ದೇವೆ ಎಂದು ಡಿಕೆಶಿ ಸಮರ್ಥಿಸಿಕೊಂಡರು. ಮತಪತ್ರ ಬಳಕೆ ಕುರಿತಂತೆ ಬಿಜೆಪಿಯವರಿಗೆ ಗಾಬರಿ ಏಕೆ? ಕಳ್ಳನ ಮನಸ್ಸು ಹುಳ್ಳಗೆ ಎಂದ ಹಾಗೆ ಆಗಿದೆ. ಕೇಂದ್ರ ಸರ್ಕಾರ ಲೋಕಸಭೆ, ವಿಧಾನಸಭೆ ಚುನಾವಣೆ ಬಗ್ಗೆ ತೀರ್ಮಾನ ಮಾಡುತ್ತಾರೆ.

ಚುನಾವಣಾ ಆಯೋಗವು ಆ ಬಗ್ಗೆ ತೀರ್ಮಾನ ಮಾಡುತ್ತದೆ. ನಮದು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಮಾತ್ರ ಸೀಮಿತವಾಗಿದೆ ಎಂದರು. ರಾಮನಗರದ ರೈತರು ನಮ್ಮ ಜನರು. ಅವರ ಬಗ್ಗೆ ಮಾತನಾಡಲು ನನಗೆ ಹಕ್ಕಿದೆ. ಶೇ.82 ರಷ್ಟು ರೈತರು ಜಮೀನು ಕೊಡಲು ಒಪ್ಪಿದ್ದಾರೆ. ಶೇ. 18 ರಷ್ಟು ಜನರು ಮಾತ್ರ ವಿರೋಧ ಮಾಡುತ್ತಿದ್ದಾರೆ. ಈಗಾಗಲೇ ಒಳ್ಳೆಯ ಬೆಲೆ ಕೊಟ್ಟಿದ್ದು ದೇಶಕ್ಕೆ ಮಾದರಿಯಾಗುವ ಯೋಜನೆ ಮಾಡಲು ಉದ್ದೇಶಿಸಿದ್ದೇವೆ ಎಂದು ಹೇಳಿದರು. ಈಗ ಟೀಕೆ ಮಾಡುವವರು ಅವರ ಆಡಳಿತಾವಧಿಯಲ್ಲಿ ಯೋಜನೆ ಏಕೆ ಮಾಡಿಲ್ಲ? ಅವರ ಅವಧಿಯಲ್ಲೇ ಭೂಸ್ವಾಧೀನಕ್ಕೆ ಅಧಿಸೂಚನೆ ಹೊರಡಿಸಲಾಗಿತ್ತು.

## ಮಳೆ ಆರ್ಭಟಕ್ಕೆ ನಲುಗಿದ ಉತ್ತರ ಭಾರತ
## ಸಂಕಷ್ಟದಲ್ಲಿ ಜನರು



# 37 ಜೀವಗಳ ಬಲಿ
# ಮುಳುಗಿದ ದೆಹಲಿ

**ಉತ್ತರ ಭಾರತ ಭಾರಿ ಮಳೆಗೆ ತತ್ತರ**

• ಉದಯವಾಹಿನಿ, ಹೊಸದಿಲ್ಲಿ

ಹದಿನೈದು ದಿನಗಳಿಂದ ಉತ್ತರ ಭಾರತದಲ್ಲಿ ಭಾರೀ ಮಳೆಯಾಗುತ್ತಿದ್ದು, ಆಗಸ್ಟ್ 22ರಿಂದ ಸೆಪ್ಟೆಂಬರ್ 4ರವರೆಗೆ ಬಿದ್ದಿರುವ ಮಳೆ 14 ವರ್ಷಗಳಲ್ಲೇ ಅತ್ಯಧಿಕ ಎಂದು ಹವಾಮಾನ ಇಲಾಖೆ ಹೇಳಿದೆ. ಈ ಪ್ರದೇಶದಲ್ಲಿ ವಾಡಿಕೆ ಮಳೆಯ ಮೂರು ಪಟ್ಟು ಮಳೆಯಾಗಿದ್ದು, ಇಡೀ ಭಾಗದಲ್ಲಿ ಜನಜೀವನ ಅಸ್ತವ್ಯಸ್ತವಾಗಿದೆ.

ಜಮ್ಮು ಮತ್ತು ಕಾಶ್ಮೀರದ ವೈಷ್ಣೋದೇವಿ ಮಾರ್ಗದಲ್ಲಿ ಮೇಘಸ್ಫೋಟ, ಪಂಜಾಬ್‌ನಲ್ಲಿ ಪ್ರವಾಹ, ದೆಹಲಿಯಲ್ಲಿ ಯಮುನಾ ಪ್ರವಾಹ, ಹಿಮಾಚಲಪ್ರದೇಶ ಹಾಗೂ ಉತ್ತರಾಖಂಡದಲ್ಲಿ ಭೂಕುಸಿತ ಸೇರಿದಂತೆ ವ್ಯಾಪಕ ಅನಾಹುತ, ಸಾವು ನೋವು ಸಂಭವಿಸಿದೆ.ಈ 14 ದಿನಗಳ ಅವಧಿಯಲ್ಲಿ 73.1 ಮಿಲೀಮೀಟರ್ ವಾಡಿಕೆ ಮಳೆಯಾಗಬೇಕಿತ್ತು. ಆದರೆ 205.3 ಮಿಲಿಮೀಟರ್ ಮಳೆಯಾಗಿದ್ದು, ನಾಲ್ಕು ತಿಂಗಳ ಮುಂಗಾರು ಅವಧಿಯ ಒಟ್ಟು ಮಳೆಯ ಶೇ.35ರಷ್ಟು ಮಳೆ ಈ ಅವಧಿಯಲ್ಲಿ ಆಗಿದೆ. 1988ರ ಬಳಿಕ ಅತ್ಯಧಿಕ ಮಳೆ ಈ ವರ್ಷ ಈ ಭಾಗದಲ್ಲಿ ಬಿದ್ದಿದೆ ಎಂದು ಹವಾಮಾನ ಇಲಾಖೆ ಅಂಕಿ ಅಂಶಗಳು ಹೇಳಿವೆ.

ವಾಯವ್ಯ ಭಾರತದಲ್ಲಿ ಈ ವರ್ಷ ಇದುವರೆಗೆ ಜೂ.1ರಿಂದ 691.7 ಮಿಲಿಮೀಟರ್ ಮಳೆಯಾಗಿದ್ದು, ಇದು ವಾಡಿಕೆಗಿಂತ ಶೇ.37ರಷ್ಟು ಅಧಿಕ. ಸೆ.30ರವರೆಗೆ ಸಾಮಾನ್ಯ ಮಳೆ ಬಿದ್ದರೂ, ಒಟ್ಟು ಮಳೆ 750 ಮಿಲಿಮೀಟರ್ ಮೀರಲಿದೆ. ಇದು 50 ವರ್ಷಗಳಲ್ಲೇ ಎರಡನೇ ಗರಿಷ್ಠ ಮಳೆವರ್ಷವಾಗಲಿದೆ. 1988ರಲ್ಲಿ 813.5 ಮಿಲಿಮೀಟರ್ ಹಾಗೂ 1994ರಲ್ಲಿ 737 ಮಿಲಿಮೀಟರ್ ಮಳೆ ದಾಖಲಾಗಿತ್ತು. ಈ ಎರಡು ವಾರಗಳ ವ್ಯಾಪಕ ಮಳೆಯಿಂದಾಗಿ ಈ ಭಾಗದ ಅತಿವೃಷ್ಟಿ ಪ್ರಮಾಣ ಶೇ. 11.6ರಿಂದ ಶೇ.37ಕ್ಕೇರಿದೆ. ಪಶ್ಚಿಮ ಪ್ರಕ್ಷುಬ್ಧತೆಯಿಂದಾಗಿ ತೇವಾಂಶಯುಕ್ತ ಗಾಳಿಯ ಹರಿವು ಈ ಭಾಗದಿಂದ ಮೆಡಿಟರೇನಿಯನ್ ಸಾಗರದ ವರೆಗೂ ವ್ಯಾಪಿಸಿದ್ದು, ಇದು ಮುಂಗಾರು ಮಾರುತದ ಜತೆ ಸೇರಿ ವ್ಯಾಪಕ ಮಳೆಗೆ ಕಾರಣವಾಗಿದೆ ಎಂದು ಐಎಂಡಿ ಮುಖ್ಯಸ್ಥ ಮೃತ್ಯುಂಜಯ ಮಹಾಪಾತ್ರ ಹೇಳಿದ್ದಾರೆ.ಹತ್ನಿಕುಂಡ್ ಬ್ಯಾರೇಜ್‌ನಿಂದ ಯಮುನಾ ನದಿಗೆ 1,34,500 ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗಿದ್ದು, ಯಮುನಾ ನದಿಯ ನೀರಿನ ಮಟ್ಟವನ್ನು ಹೆಚ್ಚಿಸಲಾಗಿದೆ. ಯಮುನಾ ನದಿಯ ನೀರಿನ ಮಟ್ಟ ಅಪಾಯದ ಮಟ್ಟ ದಾಟುವ ಸಾಧ್ಯತೆ ಇರುವುದರಿಂದ ಸೋಮವಾರ ದೆಹಲಿ ಸರ್ಕಾರ ಪ್ರವಾಹದ ಎಚ್ಚರಿಕೆ ನೀಡಿದೆ. ತಗ್ಗು ಪ್ರದೇಶಗಳಲ್ಲಿ ಕಟ್ಟುನಿಟ್ಟಿನ ಜಾಗರೂಕತೆ ವಹಿಸಲು ಮತ್ತು ಗಸ್ತು ತಿರುಗಲು ಅಧಿಕಾರಿಗಳಿಗೆ ಸೂಚಿಸಲಾಗಿದೆ.

**ಸಂಪರ್ಕ ಕಡಿತಗೊಂಡ ಕಶ್ಮೀರ :** ತೀವ್ರ ಮಳೆ ಮತ್ತು ಭೂಕುಸಿತಗಳು ಎಲ್ಲಾ ಪ್ರಮುಖ ರಸ್ತೆ ಜಾಲಗಳನ್ನು ವಿಶ್ವಾಸಾರ್ಹವಲ್ಲದಂತೆ ಮಾಡಿರುವುದರಿಂದ ಕಾಶೀರ ಕಣಿವೆಗೆ ಭಾರತದ ಉಳಿದ ಭಾಗಗಳಿಂದ ಸಂಪರ್ಕ ಕಡಿತಗೊಂಡಿದೆ. ಜಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿ (ಎನ್‌ಹೆಚ್-44) ಆಗಸ್ಟ್ 26 ರಿಂದ ಕಾಶ್ಮೀರ ಮತ್ತು ಕಥುವಾ ನಡುವೆ 3,500 ಕ್ಕೂ ಹೆಚ್ಚು ವಾಹನಗಳು ಸಿಲುಕಿಕೊಂಡಿರುವುದರಿಂದ ಹಲವಾರು ರಸ್ತೆಗಳಲ್ಲಿ ಬಂದಾಗಿದೆ. ಹಳಿಗಳಿಗೆ ವ್ಯಾಪಕ ಹಾನಿಯಾಗಿರುವ ಕಾರಣ ಜಮ್ಮು ವಿಭಾಗದಲ್ಲಿ ರೈಲ್ವೆ ಸಂಪರ್ಕವನ್ನು ಒಂಬತ್ತು ದಿನಗಳವರೆಗೆ ಸ್ಥಗಿತಗೊಳಿಸಲಾಗಿದೆ. ಬಟೋಟ್-ದೋಡಾ-ಕಿಶ್ತ್ವಾರ್ ಮತ್ತು ಜಮ್ಮು-ರಾಜೌರಿ-ಪೂಂಚ್ ಹೆದ್ದಾರಿಗಳು ಸಹ ಮುಚ್ಚಲ್ಪಟ್ಟಿದ್ದು, ಈ ಪ್ರದೇಶದಲ್ಲಿ ಸಂವಹನ ಸ್ಥಗಿತಗೊಂಡಿದೆ.

**ರಾಜಸ್ಥಾನದ ಮಾಹಿ ಬಜಾಜ್ ಸಾಗರ್ ಡ್ಯಾಂನ ಎಲ್ಲ 16 ಗೇಟ್ ಓಪನ್:** ರಾಜಸ್ಥಾನದ ಬನ್ಸ್ವಾರದಲ್ಲಿರುವ ಮಾಹಿ ನದಿಗೆ ನಿರ್ಮಿಸಲಾಗಿರುವ ಮಾಹಿ ಬಜಾಜ್ ಸಾಗರ್ ಅಣೆಕಟ್ಟಿನ ಎಲ್ಲಾ 16 ಗೇಟ್‌ಗಳನ್ನು ತೆರೆಯಲಾಗಿದೆ. ಪಶ್ಚಿಮ ಮಧ್ಯಪ್ರದೇಶ ಮತ್ತು ಆಗ್ನೇಯ ರಾಜಸ್ಥಾನದಲ್ಲಿ ಸುರಿದ ಭಾರೀ ಮಳೆಯಿಂದಾಗಿ ಗೇಟ್‌ಗಳನ್ನು ತೆರೆಯಾಗಿದ್ದು, ರೌದ್ರಾವತಾರ ತಾಳಿ ನುಗ್ಗುತ್ತಿರುವ ನೀರಿನ ಸೌಂದರ್ಯವನ್ನು ಕಣ್ತುಂಬಿಕೊಳ್ಳಲು ಜನಸಾಗರವೇ ಹರಿದುಬರುತ್ತಿದೆ. ಈ ಅಣೆಕಟ್ಟಿನ ಒಟ್ಟು ಸಂಗ್ರಹ 72.93 ಟಿಎಂಸಿ. ಮಾಹಿ ನದಿ 580 ಕಿ.ಮೀ ಉದ್ದದ ನದಿಯಾಗಿದ್ದು, ಮಧ್ಯಪ್ರದೇಶದ ಧಾರ್ ಬಳಿ ಪ್ರಾರಂಭವಾಗಿ, ರಾಜಸ್ಥಾನ ಮತ್ತು ಗುಜರಾತ್ ಮೂಲಕ ಹರಿಯುತ್ತದೆ. ನಂತರ ಅರೇಬಿಯನ್ ಸಮುದ್ರಕ್ಕೆ ಹರಿಯುತ್ತದೆ. ಇದು ರಾಜಸ್ಥಾನ ಮತ್ತು ಮಧ್ಯಪ್ರದೇಶದ ಬುಡಕಟ್ಟು ಪ್ರದೇಶಗಳಲ್ಲಿ ನೀರಾವರಿ ಮತ್ತು ಜಲವಿದ್ಯುತ್ ಶಕ್ತಿಗೆ ಮುಖ್ಯವಾಗಿದೆ. 1972 ಮತ್ತು 1983ರ ನಡುವೆ ನಿರ್ಮಿಸಲಾದ ಈ ಅಣೆಕಟ್ಟು ಗುಜರಾತ್‌ನೊಂದಿಗೆ ಜಂಟಿ ಬಹುಪಯೋಗಿ ಯೋಜನೆಯ ಪ್ರಮುಖ ಅಂಶವಾಗಿದೆ, ಇದು ಎರಡೂ ರಾಜ್ಯಗಳಿಗೆ ಅಗತ್ಯವಾದ ನೀರಾವರಿ ಮತ್ತು ವಿದ್ಯುತ್ ಅನ್ನು ಒದಗಿಸುತ್ತದೆ. ಇದು ಉದಯಪುರ ವಿಭಾಗದ ಅತಿದೊಡ್ಡ ನೀರಿನ ಜಲಾಶಯವಾಗಿದೆ, ಕೃಷಿ ಮತ್ತು ಆರ್ಥಿಕ ಅಭಿವೃದ್ಧಿಗೆ ಅತ್ಯಗತ್ಯವಾಗಿದೆ.

**1** ಅಪಾಯದ ಮಟ್ಟ ಮೀರಿದ ಜಮ್ಮು-ಕಾಶ್ಮೀರದ ಝೀಲಂ ನದಿ, ಪ್ರವಾಹದ ಎಚ್ಚರಿಕೆ

**2** ಮಳೆಗೆ ಬೆದರಿದ ಉತ್ತರದ ರಾಜ್ಯಗಳು!

**3** ನವದೆಹಲಿಯ ಸುತ್ತಮುತ್ತ ಕಳೆದ ಒಂದು ವಾರದಿಂದ ಎಡೆಬಿಡದೆ ಸುರಿಯುತ್ತಿರುವ ಭಾರೀ ಮಳೆ

### ದೆಹಲಿಯಲ್ಲೂ ನೀರೋ ನೀರು

ದೆಹಲಿ ನಗರದ ಅಂಡರ್ ಪಾಸ್‌ಗಳು ಕೆರೆ ಕೋಡಿ ಬಿದ್ದ ರೀತಿ ಕಾಣುತ್ತಿದೆ.. ದೆಹಲಿಯ ಕಾಶ್ಮೀರಿ ಗೇಟ್ ಭಾಗದಲ್ಲಿ ಮನೆಗಳು ಯಾವ್ದು, ರಸ್ತೆಗಳು ಯಾವ್ದು, ಕೆರೆಗಳು ಯಾವ್ದು ಅಂತ ಗೊತ್ತಾಗದಂತಾಗಿದೆ. ಇತ್ತ ಸೆಕ್ರೆಟರಿಯೇಟ್‌ನಲ್ಲೂ ಮೊಣಕಾಲುದ್ದಕ್ಕೆ ನೀರು ನಿಂತು ಜನ ಪರದಾಡುವಂತಾಗಿತ್ತು. ಜಮ್ಮು ಕಾಶ್ಮೀರದಾದ್ಯಂತ ಸುರಿಯುತ್ತಿರುವ ಧಾರಾಕಾರ ಮಳೆ, ನದಿಗಳು, ತೊರೆಗಳು, ಮನೆಗಳು, ರೈಲ್ವೆ ವಿಭಾಗವನ್ನ ನುಂಗಿ ನೀರು ಕುಡಿದಿದೆ. ಜಮ್ಮು ಭಾಗದ ರೈಲು ಕಾರ್ಯಾಚರಣೆಗಳು ಸಂಪೂರ್ಣವಾಗಿ ಸ್ಥಗಿತಗೊಂಡಿವೆ. ಜಲಾಘಾತಕ್ಕೊಳಗಾಗಿರುವ ಉತ್ತರ ಭಾರತದ ರಾಜ್ಯಗಳಲ್ಲಿ ಮೇಘರಾಜ ವಿರಾಮ ಪಡೆಯದಿದ್ರೆ ದೇವರೇ ಗತಿ ಎನ್ನುವಂತಾಗಿದೆ.

### ಯಮುನೆಯ ಅಬ್ಬರ

ರಾಷ್ಟ್ರ ರಾಜಧಾನಿ ನವದೆಹಲಿಯ ಸುತ್ತಮುತ್ತ ಕಳೆದ ಒಂದು ವಾರದಿಂದ ಎಡೆಬಿಡದೆ ಸುರಿಯುತ್ತಿರುವ ಭಾರೀ ಮಳೆಯಿಂದ ಮುಖ್ಯಮಂತ್ರಿ ನಿವಾಸ ಹಾಗೂ ಸಚಿವಾಲಯಕ್ಕೂ ನೀರು ನುಗಿದ್ದು, ಅಕ್ಷರಶಃ ದೆಹಲಿ ಮುಳುಗುವ ಸ್ಥಿತಿಗೆ ತಲುಪಿದೆ. ಯಮುನಾ ನದಿ ಅಪಾಯದ ಮಟ್ಟ ಮೀರಿ ಹರಿಯುತ್ತಿರುವುದರಿಂದ ರಾಷ್ಟ್ರ ರಾಜಧಾನಿಯಲ್ಲಿ ಗಂಭೀರ ಪ್ರವಾಹ ಎದುರಾಗಿದೆ. ಪರಿಸ್ಥಿತಿಯ ಬಗ್ಗೆ ದೆಹಲಿ ಸರ್ಕಾರ 24/7 ನಿಗಾ ಇಟ್ಟಿದೆ. ಭಾರೀ ಮಳೆ ಮತ್ತು ನದಿಯ ಉಕ್ಕಿ ಹರಿಯುವಿಕೆಯಿಂದಾಗಿ ಯಮುನಾ ಬಜಾರ್, ಗೀತಾ ಕಾಲೋನಿ, ಮಜ್ನು ಕಾ ತಿಲಾ ಮತ್ತು ಮಯೂರ್ ವಿಹಾರ್ ನಂತಹ ಅನೇಕ ತಗ್ಗು ಪ್ರದೇಶಗಳು ಜಲಾವೃತಗೊಂಡಿವೆ. ಮುಖ್ಯಮಂತ್ರಿಗಳ ನಿವಾಸವಾದ ನಗರದ ಉನ್ನತ ಮಟ್ಟದ ಸಿವಿಲ್ ಲೈನ್ಸ್ ಕಾಲೋನಿಗೂ ನೀರು ತಲುಪಿದ್ದು, 14,000 ಕ್ಕೂ ಹೆಚ್ಚು ನಿವಾಸಿಗಳನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸಲಾಗಿದೆ. ಪ್ರವಾಹವು ಹಲವಾರು ಪ್ರಮುಖ ಪ್ರದೇಶಗಳನ್ನು ಸ್ತಬ್ಧಗೊಳಿಸಿದೆ.

### ಪಂಜಾಬ್ ಮತ್ತು ಹರಿಯಾಣಗಳಲ್ಲಿ ಐತಿಹಾಸಿಕ ಪ್ರವಾಹ

ಪಂಜಾಬ್ ಮೂರು ದಶಕಗಳಲ್ಲಿಯೇ ಅತ್ಯಂತ ಭೀಕರ ಪ್ರವಾಹ ದುರಂತವನ್ನು ಎದುರಿಸುತ್ತಿದೆ, ಸಟ್ಲೆಜ್, ಬಿಯಾಸ್ ಮತ್ತು ರಾವಿ ಮುಂತಾದ ನದಿಗಳು ಉಕ್ಕಿ ಹರಿಯುತ್ತಿವೆ ಮತ್ತು ವಿನಾಶವನ್ನು ಸೃಷ್ಟಿಸಿದೆ. ಪ್ರವಾಹವು 37 ಜೀವಗಳನ್ನು ಬಲಿ ತೆಗೆದುಕೊಂಡಿದೆ, 3.55 ಲಕ್ಷಕ್ಕೂ ಹೆಚ್ಚು ಜನರನ್ನು ಬಾಧಿಸಿದ್ದು, 1.75 ಲಕ್ಷ ಹೆಕ್ಟೇರ್‌ಗೂ ಹೆಚ್ಚು ಬೆಳೆಗಳನ್ನು ನಾಶಮಾಡಿದೆ. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಅಮೃತಸರ ಮತ್ತು ಗುರುದಾಸ್‌ಪುರದ ಪೀಡಿತ ಜಿಲ್ಲೆಗಳಿಗೆ ಭೇಟಿ ನೀಡಿ ಹಾನಿಯನ್ನು ಅಳೆಯಲು ತೆರಳಿದರು. ಬಿಕ್ಕಟ್ಟಿಗೆ ಪ್ರತಿಕ್ರಿಯೆಯಾಗಿ, ಪಂಜಾಬ್ ಶಾಲಾ ಮತ್ತು ಕಾಲೇಜು ರಜಾದಿನಗಳನ್ನು ಸೆಪ್ಟೆಂಬರ್ 7ರವರೆಗೆ ವಿಸ್ತರಿಸಿದೆ. ನೆರೆಯ ರಾಜ್ಯವಾದ ಹರಿಯಾಣ ಕೂಡ ಕಟ್ಟೆಚ್ಚರದಲ್ಲಿದೆ, ಅಧಿಕಾರಿಗಳಿಗೆ ತ್ವರಿತ ನೀರು ಸರಬರಾಜು ಮತ್ತು ರಾಜ್ಯಾದ್ಯಂತ ಕುಡಿಯುವ ನೀರಿನ ನಿರಂತರ ಪೂರೈಕೆಯನ್ನು ಆದೇಶಿಸಲಾಗಿದೆ.



## ರಾಜ್ಯ ಸರ್ಕಾರದ ವಿರುದ್ಧ ವಿಜಯೇಂದ್ರ ವಾಗ್ದಾಳಿ
## ಇವಿಎಂ ಬದಲು ಬ್ಯಾಲಟ್ ಪೇಪರ್ ಬಳಕೆಗೆ ಮುಂದಾದ ಕಾಂಗ್ರೇಸ್

• ಉದಯವಾಹಿನಿ, ಬೆಂಗಳೂರು


ಮುಂದಿನ ಚುನಾವಣೆಗಳಲ್ಲಿ (ಸ್ಥಳೀಯ ಸಂಸ್ಥೆಗಳು) ಇವಿಎಂ ಯಂತ್ರ, ಬದಿಗಿಟ್ಟು ಮತ ಪತ್ರ, ಬ್ಯಾಲಟ್ ಪೇಪರ್ ಬಳಕೆಗೆ ನಿರ್ಧರಿಸಿರುವ ಕಾಂಗ್ರೇಸ್ ಸರ್ಕಾರದ ಸಂಪುಟದ ತೀರ್ಮಾನ ತಾವು ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವುದೇ ಮತಗಳ್ಳತನದಿಂದ ಎಂದು ಸ್ವಯಂ ಪ್ರಮಾಣೀಕರಿಸಿಕೊಂಡಂತಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರ ಸಂಶಯ ಹೊರಹಾಕಿದ್ದಾರೆ.

ಈ ಕುರಿತು ತಮ್ಮ ಅಧಿಕೃತ ಸಾಮಾಜಿಕ ಜಾಲತಾಣ Xನಲ್ಲಿ ಸರ್ಕಾರದ ವಿರುದ್ಧ ಪೋಸ್ಟ್ ಮಾಡಿರುವ ಅವರು, ಇವಿಎಂ ಮತಯಂತ್ರ ಬಳಸಿ ರಾಜ್ಯದಲ್ಲಿ 2023ರ ಚುನಾವಣೆಯಲ್ಲಿ ಆರಿಸಿ ಬಂದಿರುವ 136 ಕಾಂಗ್ರೇಸ್ ಶಾಸಕರಿಂದ ಮೊದಲು ರಾಜೀನಾಮೆ ಕೊಡಿಸಲಿ, ರಾಜ್ಯದಿಂದ ಆಯ್ಕೆಯಾದ ಒಂಬತ್ತು ಕಾಂಗ್ರೇಸ್ ಲೋಕಸಭಾ ಸದಸ್ಯರಿಂದ ರಾಜೀನಾಮೆ ಕೊಡಿಸಲಿ, ಮತಪತ್ರ ಬಳಸಿ ಮತ್ತೆ ಚುನಾವಣೆಯಿಂದ ಗೆದ್ದು ಬರಲಿ, ಇಲ್ಲದಿದ್ದರೆ ಮತಗಳ್ಳತನದಿಂದ ನಾವು ಆಯ್ಕೆಯಾಗಿ ಅಧಿಕಾರಕ್ಕೆ ಬಂದಿರುವುದು ಎಂದು ಒಪ್ಪಿಕೊಳ್ಳಲಿ ಎಂದು ಸವಾಲು ಹಾಕಿದ್ದಾರೆ.

ದೇಶದಲ್ಲಿ ಅತಿಹೆಚ್ಚು ಅಕ್ರಮ ಮತದಾನ, ಮತಗಳ್ಳತನದ ದೂರುಗಳು, ಚುನಾವಣಾ ದೌರ್ಜನ್ಯದ ಘಟನೆಗಳು, ಚುನಾವಣಾ ಅಕ್ರಮಗಳು ನಡೆದ ಬಗ್ಗೆ ನ್ಯಾಯಾಲಯಗಳಲ್ಲಿ ದೂರುಗಳು ಅತಿ ಹೆಚ್ಚು ದಾಖಲಾಗಿದ್ದರೆ ಅದು ಮತಪತ್ರ ಆಧರಿಸಿ ನಡೆಸಿದ ಚುನಾವಣೆಗಳಲ್ಲಿ, ಅದೂ ಕಾಂಗ್ರೇಸ್ಸಿಗರ ಮೇಲೇ ಹೆಚ್ಚು ಎಂಬುದನ್ನು ಕಾಂಗ್ರೇಸ್ಸಿಗರು ಇತಿಹಾಸದ ಪುಟಗಳನ್ನು ತೆರೆದು ನೋಡಲಿ. ಇಂದಿರಾ ಗಾಂಧಿಯವರು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಲು ಕಾರಣವಾಗಿದ್ದು ಅವರು ನಡೆಸಿದ ಮತಗಳ್ಳತನ ಹಾಗೂ ಅಕ್ರಮ ಚುನಾವಣೆಯ ಹಿನ್ನೆಲೆಯಲ್ಲಿ ನ್ಯಾಯಾಲಯ ನೀಡಿದ ತೀರ್ಪಿನಿಂದ ಎಂಬ ಇತಿಹಾಸವನ್ನು ದೇಶದ ಜನ ಮರೆತಿಲ್ಲ ಎಂದು ಎಚ್ಚರಿಸಿದ್ದಾರೆ. ಮತ ಪತ್ರ ಆಧರಿಸಿದ ಚುನಾವಣೆಗಳಲ್ಲಿ ಅಕ್ರಮ ಹಾಗೂ ಮತಗಳ್ಳತನ ನಡೆಸುವುದರಲ್ಲಿ ನಿಷ್ಣಾತರಾದ ಕಾಂಗ್ರೇಸ್ಸಿಗರು ಚುನಾವಣೆಗಳ ನಿರಂತರ ಸೋಲುಗಳಿಂದ ಮೂಲೆಗುಂಪಾಗುತ್ತಿರುವ ಪರಿಸ್ಥಿತಿಯಿಂದ ಕಂಗೆಟ್ಟು ಹೋಗಿದ್ದಾರೆ. ಈ ಕಾರಣದಿಂದಾಗಿ ಆಧಾರ ರಹಿತ, ಅಪ್ರಬುದ್ಧ, ವಿತಂಡ ವಾದವನ್ನು ಮುಂದಿಟ್ಟುಕೊಂಡು ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಮತಗಳ್ಳತನದ ಹೆಸರಿನಲ್ಲಿ ಬಾಲಿಶ ವಿವಾದ ಹುಟ್ಟು ಹಾಕಲು ಹೊರಟಿದ್ದಾರೆ. ಇದನ್ನು ಬೆಂಬಲಿಸಲು ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೇಸ್ ಸರ್ಕಾರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರವನ್ನು ಬಳಸಿ ನಡೆಸುವುದಾಗಿ ನಿರ್ಣಯ ಕೈಗೊಂಡಿದೆ. ಇಡೀ ದೇಶ, ಜಗತ್ತು ತಂತ್ರಜ್ಞಾನವನ್ನು ಆಧರಿಸಿ ವೇಗವಾಗಿ ನಡೆಯುತ್ತಿದ್ದರೆ, ಕರ್ನಾಟಕದ ಕಾಂಗ್ರೇಸ್ ಸರ್ಕಾರ ತಂತ್ರಜ್ಞಾನವನ್ನು ಅಪಮಾನಿಸಿ ಹೆಬ್ಬೆಟ್ಟಿನ ದಿನಗಳನ್ನು ನೆನಪಿಸಲು ಹೊರಟಿದೆ ಎಂದು ಕಿಡಿಕಾರಿದ್ದಾರೆ.

ಕಾಂಗ್ರೇಸ್ ಸರ್ಕಾರ ಅಧಿಕಾರವಿದ್ದ ಅವಧಿಯಲ್ಲಿ ಮತಪತ್ರ ಬಳಸಿ ನಡೆದ ಚುನಾವಣೆಗಳಲ್ಲಿ ಎಷ್ಟು ಅಕ್ರಮ ನಡೆದಿದೆ ಎನ್ನುವುದಕ್ಕೆ ಇವತ್ತಿಗೂ ದಾಖಲೆಗಳಿವೆ.

90ರ ದಶಕದಲ್ಲಿ ದಾವಣಗೆರೆಯಲ್ಲಿ ಜಯಗಳಿಸಿದ್ದ ಲೋಕಸಭಾ ಬಿಜೆಪಿ ಅಭ್ಯರ್ಥಿಯನ್ನು ಮರು ಎಣಿಕೆಯಲ್ಲಿ ಸೋಲಿಸಿ ಕಾಂಗ್ರೇಸ್ ಅಭ್ಯರ್ಥಿಯನ್ನು ಗೆಲ್ಲಿಸಲಾಯಿತು.



### ಪಾರದರ್ಶಕ ಚುನಾವಣೆಯನ್ನು ಧಿಕ್ಕರಿಸುವುದೇ ಕಾಂಗ್ರೇಸ್‌ನ ಅಜೆಂಡಾ

ಬಿಜೆಪಿ ಅಭ್ಯರ್ಥಿಯ ಮತ್ರ ಪತ್ರಗಳನ್ನು ಹೇಗೆ ತಿರಸ್ಕೃತಗೊಳಿಸಲಾಯಿತು ಎಂಬುದಕ್ಕೆ ಅಂದು ದಾವಣಗೆರೆಯ ಮತ ಎಣಿಕೆ ಕೇಂದ್ರದ ಶೌಚಾಲಯಗಳಲ್ಲೆಲ್ಲಾ ಬಿಜೆಪಿ ಅಭ್ಯರ್ಥಿಯ ಮತ ಪತ್ರಗಳು ಚೆಲ್ಲಾಡಿರುವುದನ್ನು ಅಂದು ಮಾಧ್ಯಮಗಳು ವರದಿ ಮಾಡಿದ್ದವು ಎಂಬುದನ್ನು ನೆನಪಿಸಿದ್ದಾರೆ. ಮತಪತ್ರಗಳ ಬಳಕೆಯಿಂದ ಚುನಾವಣಾ ಅಕ್ರಮ ಎಸಗಬಹುದು, ಮತಗಟ್ಟೆಗಳಲ್ಲಿ ದೌರ್ಜನ್ಯ ಮೆರೆಯಬಹುದು, ಎಗ್ಗಿಲ್ಲದೇ ಕಳ್ಳ ಮತದಾನವನ್ನೂ ಮಾಡಬಹುದು ಎಂಬ ಏಕೈಕ ಕಾರಣಕ್ಕಾಗಿ ಕಾಂಗ್ರೇಸ್ ಮತ ಪತ್ರ ಆಧರಿಸಿದ ಚುನಾವಣೆಯನ್ನು ರಾಹುಲ್ ಗಾಂಧಿಯವರ ನೇತೃತ್ವದಲ್ಲಿ ಬೆಂಬಲಿಸುತ್ತಿದೆ, ಅದನ್ನು ಕರ್ನಾಟಕದ ಕಾಂಗ್ರೇಸ್ ಸರ್ಕಾರ ಜಾರಿಗೊಳಿಸಲು ಮೊದಲ ಹೆಜ್ಜೆ ಇಡಲು ಹೊರಟಿದೆ, ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಪಾರದರ್ಶಕ ಚುನಾವಣೆಯನ್ನು ಧಿಕ್ಕರಿಸುವುದೇ ಕಾಂಗ್ರೇಸ್‌ನ ಅಜೆಂಡಾ ಹಾಗೂ ಗುರಿಯಾಗಿದೆ ಎಂದು ವಿಜಯೇಂದ್ರ ಸರ್ಕಾರದ ವಿರುದ್ಧ ವಾಗ್ದಳಿ ನಡೆಸಿದ್ದಾರೆ.

## ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಆರ್.ಅಶೋಕ್ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ನಾಡಿನ ಅನ್ನದಾತ ರೈತರ ಬಗ್ಗೆ ಮಾತನಾಡುವಾಗ ಸ್ವಲ್ಪ ಎಚ್ಚರ ಇರಲಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಎಚ್ಚರಿಕೆ ಕೊಟ್ಟಿದ್ದಾರೆ. ಈ ಕುರಿತು ತಮ ಅಧಿಕೃತ ಸಾಮಾಜಿಕ ಜಾಲತಾಣ Xನಲ್ಲಿ ಶಿವಕುಮಾರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿರುವ ಅವರು, ಈ ಹಿಂದೆ ರೈತರ ಸರಣಿ ಆತಹತ್ಯೆ ವಿಷಯ ಬಂದಾಗ ಎಲ್ಲಿದೆ ಆತ್ಮಹತ್ಯೆ? ಸ್ವಂತಕ್ಕೆ ಆತ್ಮಹತ್ಯೆ ಮಾಡಿಕೊಂಡವರನ್ನೆಲ್ಲಾ ರೈತರು ಅನ್ನೋಕಾಗತ್ತಾ? ಸುಳ್ಳು ಅದೆಲ್ಲಾ ಎಂದು ರೈತರ ಬಗ್ಗೆ ತುಚ್ಛವಾಗಿ ಮಾತನಾಡಿದ್ದೀರಿ. ಈಗ ರೈತರು ಧಿಕ್ಕಾರ ಕೂಗೋದು ಬಿಟ್ಟು ಬೇರೇನೂ ಮಾಡುವುದಕ್ಕಾಗುವುದಿಲ್ಲ ಎಂದು ರೈತರನ್ನು ಅಸಹಾಯಕರು ಅನ್ನುವ ರೀತಿ ಹೀಯಾಳಿಸಿ ಮಾತನಾಡಿದ್ದೀರಿ ಎಂದು ವಾಗ್ದಾಳಿ ನಡೆಸಿದ್ದಾರೆ. ಇಡೀ ದೇಶಕ್ಕೆ ಅನ್ನ ನೀಡುವ ರೈತ ಜೀವನವಿಡೀ ತಾನು ಬದುಕುವುದು, ದುಡಿಯುವುದು ಎಲ್ಲವೂ ಇನ್ನೊಬ್ಬರಿಗಾಗಿಯೇ ಹೊರತು ತನ್ನ ಸ್ವಂತಕ್ಕಾಗಿ ಅಲ್ಲ. ಕೈಗಾರಿಕೆಗಳಿಗೆ, ರೈಲು, ರಸ್ತೆ, ವಿಮಾನ ನಿಲ್ದಾಣಕ್ಕೆ ಈ ಹಿಂದೆಯೂ ರೈತರ ಬಳಿ ಜಮೀನು ಪಡೆಯಲಾಗಿದೆ. ಹೆಚ್‌ಎಂಟಿ ಕಾರ್ಖಾನೆ ಬಂದಾಗ ಸ್ವತಃ ನಮ ಕುಟುಂಬ ಕೂಡ ಜಮೀನು ನೀಡಿತ್ತು. ಆದರೆ ತಮ ಜೀವನದ ಆಧಾರ ಸ್ತಂಭವಾಗಿರುವ ಜಮೀನನ್ನು ಕಳೆದುಕೊಳ್ಳುತ್ತಿರುವ ರೈತರ ಬಳಿ ಹೇಗೆ ಮಾತನಾಡಬೇಕು, ಯಾವ ರೀತಿ ಸಂವೇದನೆಯಿಂದ ನಡೆದುಕೊಳ್ಳಬೇಕು ಎನ್ನುವ ಕನಿಷ್ಠ ಸೌಜನ್ಯವೂ ಇಲ್ಲದ ತಮಂತಹವರು ಮುಂದೊಂದು ದಿನ ಮುಖ್ಯಮಂತ್ರಿ ಆಗುವ ಕನಸು ಕಾಣುತ್ತಿರುವುದು ನಮ ನಾಡಿನ ದುರಂತ ಎಂದು ಟೀಕಾ ಪ್ರಹಾರ ನಡೆಸಿದ್ದಾರೆ.

| ಈ ದಿನದ ದರ | | | | |
|---|---|---|---|---|
| ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,762/Gram24ct | ₹9,865/Gram22ct | ಬೆಳ್ಳಿ: ₹126.00/Gram |

# ಜಯದೇವ ಆಸ್ಪತ್ರೆಗೆ ಹೊಸ ನಿರ್ದೇಶಕರ ನೇಮಕಕ್ಕೆ ಕಸರತ್ತು

• ಉದಯವಾಹಿನಿ, ಬೆಂಗಳೂರು

ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕರ ಆಯ್ಕೆ ಕಸರತ್ತು ಶುರುವಾಗಿದ್ದು, 20 ವರ್ಷಗಳ ಬಳಿಕ ವೈದ್ಯರ ಸಂದರ್ಶನ ನಡೆದಿದೆ. ಸಿದ್ದರಾಮಯ್ಯ ನೇತೃತ್ವದಲ್ಲಿ ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ವೈದ್ಯರ ಸಂದರ್ಶನ ನಡೆಸಲಾಗಿದ್ದು, ಸಂದರ್ಶನದಲ್ಲಿ ಒಟ್ಟು 10 ಮಂದಿ ವೈದ್ಯರು ಭಾಗಿಯಾಗಿದ್ದರು ಎಂದು ತಿಳಿದುಬಂದಿದೆ. ಸಿದ್ದರಾಮಯ್ಯ ನೇತೃತ್ವದ ಸಮಿತಿ ನಿರ್ದೇಶಕರನ್ನು ಆಯ್ಕೆ ಮಾಡಿದೆ ಎಂದು ಹೇಳಲಾಗುತ್ತಿದೆ. ಆದರೆ ನಿರ್ದೇಶಕರ ನೇಮಕ ವಿಚಾರ ಸಂಬಂಧ ಕೋರ್ಟ್‌ನಲ್ಲಿ ಕೇಸ್ ಇರುವುದರಿಂದ ಆಯ್ಕೆಯನ್ನು ಸರ್ಕಾರ ಇನ್ನೂ ಘೋಷಣೆ ಮಾಡಿಲ್ಲ ಎಂದು ಹೇಳಲಾಗುತ್ತಿದೆ. ಡಾ.ಸಿ.ಎನ್.ಮಂಜುನಾಥ್ ಸುದೀರ್ಘ 17 ವರ್ಷಗಳ ಅವಧಿಗೆ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಗೆ ನಿರ್ದೇಶಕರಾಗಿದ್ದರು. 2023ರ ಅಂತ್ಯದವರೆಗೂ ಡಾ.ಸಿ.ಎನ್.ಮಂಜುನಾಥ್ ಅವರು ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಗೆ ನಿರ್ದೇಶಕರಾಗಿದ್ದರು. ಬಳಿಕ ರಾಜಕೀಯ ರಂಗ ಪ್ರವೇಶಿಸಿದ ಅವರು, ಬೆಂಗಳೂರು ಗ್ರಾಮಾಂತರ ಕ್ಷೇತ್ರದಿಂದ ಲೋಕಸಭೆಗೆ ಆಯ್ಕೆಯಾಗಿದ್ದಾರೆ.

# ಶಿಕ್ಷಕರು ಮಕ್ಕಳನ್ನು ಸಮರ್ಥ ನಾಗರಿಕರನ್ನಾಗಿ ರೂಪಿಸಬೇಕು




• ಉದಯವಾಹಿನಿ, ಬೆಂಗಳೂರು

ಎಪಿಎಸ್ ಸಂಸ್ಥೆಗಳು ತನ್ನ ಸಂಸ್ಥಾಪಕರ ದಿನ ಮತ್ತು ಶಿಕ್ಷಕರ ದಿನವನ್ನು ಆಚರಿಸಿದೆ. ಇದು ಒಂದು ಉತ್ತಮ ಸಂಯೋಗವಾಗಿದೆ, ಏಕೆಂದರೆ ಸಂಸ್ಥೆಯ ಸಂಸ್ಥಾಪಕರು ಸ್ವತಃ ಶಿಕ್ಷಕರಾಗಿದ್ದರು ಮತ್ತು ಅವರ ಜನ್ಮದಿನ ಸೆಪ್ಟೆಂಬರ್ 5 ರಂದು ಬರುತ್ತದೆ, ಇದು ಶಿಕ್ಷಕರ ದಿನವೂ ಆಗಿದೆ, ಅಂದರೆ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನ. ಈ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ. ವಿಜಯಲಕ್ಷ್ಮಿ ದೇಶಮಾನೆ ಅವರು ಭಾಗವಹಿಸಿದ್ದರು. ಅವರು ಎಲ್ಲಾ ಅಧ್ಯಾಪಕ ವರ್ಗಕ್ಕೆ ಶುಭ ಹಾರೈಸಿದರು ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಅವರ ಪಾತ್ರದ ಬಗ್ಗೆ ಮಾರ್ಗದರ್ಶನ ನೀಡಿದರು. ಶಿಕ್ಷಕರು ಕಠಿಣ ಪರಿಶ್ರಮಪಟ್ಟು ಮಕ್ಕಳನ್ನು ಸಮರ್ಥ ನಾಗರಿಕರನ್ನಾಗಿ ರೂಪಿಸಬೇಕು ಎಂದು ಅವರು ಹೇಳಿದರು. ಎಪಿಎಸ್ ಟ್ರಸ್ಟ್‌ನ ಅಧ್ಯಕ್ಷರಾದ ಡಾ. ವಿಷ್ಣು ಭರತ್ ಆಲಂಪಲ್ಲಿ ಅವರು ಮಾತನಾಡಿ, ಶಿಕ್ಷಕರಾಗಿರುವುದು ಒಂದು ದೇವರು ಕೊಟ್ಟ ಉಡುಗೊರೆ ಎಂದು ಹೇಳಿದರು. ಶಿಕ್ಷಕರ ಕೆಲಸವು ಅತ್ಯುನ್ನತ ತೃಪ್ತಿಯನ್ನು ನೀಡುತ್ತದೆ ಮತ್ತು ವಿದ್ಯಾರ್ಥಿಗಳು ದೇಶದ ಪ್ರಜೆಗಳಾಗಿ ಭವಿಷ್ಯದಲ್ಲಿ ಶಿಕ್ಷಕರನ್ನು ನೆನಪಿಸಿಕೊಳ್ಳುತ್ತಾರೆ. ಎಪಿಎಸ್ ಸಂಸ್ಥೆಗಳ ಸಂಸ್ಥಾಪಕರಾದ ಪ್ರೊಫೆಸರ್ ಎನ್. ಅನಂತಾಚಾರ್ ಅವರು ಸೆಪ್ಟೆಂಬರ್ 5, 1910 ರಂದು ಜನಿಸಿದರು ಎಂದು ಸ್ಮರಿಸಿಕೊಂಡರು.

# ಭೋವಿ ನಿಗಮದಲ್ಲಿ ಭ್ರಷ್ಟಾಚಾರ ಆರೋಪ

• ಉದಯವಾಹಿನಿ, ಬೆಂಗಳೂರು

ಭ್ರಷ್ಟಾಚಾರ ಆರೋಪ ಕೇಳಿ ಬಂದ ಹಿನ್ನಲೆಯಲ್ಲಿ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ರವಿಕುಮಾರ್ ರಾಜೀನಾಮೆ ಸಲ್ಲಿಸಿದ್ದಾರೆ. ಸಿಎಂ ಸಿದ್ದರಾಮಯ್ಯನವರ ಸೂಚನೆಯ ಮೇರೆಗೆ ರವಿಕುಮಾರ್ ಅವರು ರಾಜೀನಾಮೆ ನೀಡಿದ್ದಾರೆ.

ಭೋವಿ ಸಮಾಜದ ರಾಷ್ಟ್ರೀಯ ಅಧ್ಯಕ್ಷ ವೆಂಕಟೇಶ್ ಅವರು ಸುದ್ದಿಗೋಷ್ಠಿ ನಡೆಸಿ ಭ್ರಷ್ಟಾಚಾರದ ಗಂಭೀರ ಆರೋಪ ಮಾಡಿದ ಬೆನ್ನಲ್ಲೇ ರವಿಕುಮಾರ್ ರಾಜೀನಾಮೆ ಸಲ್ಲಿಸಿದ್ದಾರೆ.

**ಆರೋಪ ಏನು?:** ಸಿದ್ದರಾಮಯ್ಯ 65 ಕೋಟಿ ರೂ.ಗಳನ್ನು ಭೋವಿ ಸಮಾಜಕ್ಕೆ ಘೋಷಣೆ ಮಾಡಿದ್ದಾರೆ. ಆದರೆ ಕೇವಲ 13 ಕೋಟಿ ರೂ. ಬಿಡುಗಡೆಯಾಗಿದೆ. ಕಾಂಗ್ರೆಸ್ ಕಾರ್ಯಕರ್ತ ರವಿಕುಮಾರ್ ಅವರನ್ನು ನಿಗಮದ ಅಧ್ಯಕ್ಷರನ್ನಾಗಿ ಮಾಡಿದ್ದಾರೆ. ಇವರು ಭೋವಿ ಸಮಾಜದ ಅಭಿವೃದ್ಧಿಗಾಗಿ ಸರ್ಕಾರದ ಮಟ್ಟದಲ್ಲಿ ಕೆಲಸ ಮಾಡಬೇಕಾಗಿತ್ತು. ಆದರೆ ನಿಗಮದ ಅಧ್ಯಕ್ಷರೇ ಬ್ರೋಕರ್ ಜೊತೆಗೆ 60% ಕಮಿಷನ್‌ಗೆ ಬೇಡಿಕೆ ಇಟ್ಟಿರುವ ವಿಡಿಯೋ ಸಿಕ್ಕಿದೆ ಎಂದು ದೂರಿದ್ದರು.

# ಸಂಚಾರ ನಿಯಮ ಉಲ್ಲಂಘನೆ: ರೂ.39,41 ಕೋಟಿ ದಂಡ ಸಂಗ್ರಹ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಶೇ 50ರ ರಿಯಾಯಿತಿ ಅಡಿ ದಂಡ ಪಾವತಿಸಲು ರಾಜ್ಯ ಸರ್ಕಾರವು ಅವಕಾಶ ಕಲ್ಪಿಸಿದ್ದು, ಆ.23ರಿಂದ ಸೆ.4ರ ವರೆಗೆ 14,02,717 ಪ್ರಕರಣಗಳು ಇತ್ಯರ್ಥಗೊಂಡಿವೆ. ರೂ.39.41 ಕೋಟಿ ದಂಡ ಸಂಗ್ರಹವಾಗಿದೆ. ಪೊಲೀಸ್ ಇಲಾಖೆಯಲ್ಲಿ ಸಂಚಾರ ಇ-ಚಲನ್‌ನಲ್ಲಿ ದಾಖಲಾದ ಪ್ರಕರಣಗಳಿಗೆ ದಂಡ ಪಾವತಿಸದೇ ಬಾಕಿ ಉಳಿಸಿಕೊಂಡಿರುವ ಪ್ರಕರಣಗಳಲ್ಲಿ ದಂಡ ಪಾವತಿಸಲು ರಿಯಾಯಿತಿ ನೀಡಿ ಆದೇಶಿಸಲಾಗಿತ್ತು. ಈ ಆದೇಶವು ಆ.23ರಿಂದ ಜಾರಿಗೆ ಬಂದಿದ್ದು, ಸೆ.12ರ ವರೆಗೆ ರಿಯಾಯಿತಿ ಇರಲಿದೆ ಎಂದು ಸಂಚಾರ ಪೊಲೀಸರು ಹೇಳಿದರು.




# ನಮ್ಮ ಮೆಟ್ರೋ ದರ ಇಳಿಕೆ ಮಾಡಲು ರಾಜ್ಯ ಸರ್ಕಾರಕ್ಕೆ ಆಗ್ರಹ

## ಬೆಂಗಳೂರಿನ ಮೆಟ್ರೋ ಪ್ರಯಾಣ ದರ ದೆಹಲಿಗಿಂತ ಕಾಸ್ಟ್ಲಿ; ಯಾಕಿಷ್ಟು ಹೊರೆ ಎಂದು ತೇಜಸ್ವಿ ಸೂರ್ಯ ಕೆಂಡ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ದರ ಏರಿಕೆ ಒಮ್ಮೆಲೆ ಶೇ.136ರಷ್ಟು ಏರಿಕೆ ಮಾಡಿದ್ದೇಕೆ. ಹತ್ತು ಲಕ್ಷ ಜನ ಸಾಮಾನ್ಯರು ಪ್ರಯಾಣಿಸುವ ಮೆಟ್ರೋ ದರ ದೇಶದಲ್ಲೇ ದುಬಾರಿ. ಜನಸಾಮಾನ್ಯರ ಮೇಲೆ ಸರ್ಕಾರ ಈ ಹೊರೆಯನ್ನು ಹೊರಿಸುತ್ತಿರುವುದಾದರೂ ಯಾಕೆ ಎಂದು ಬೆಂಗಳೂರು ಲೋಕಸಭಾ ಸಂಸದ ತೇಜಸ್ವಿ ಸೂರ್ಯ ವಾಗ್ದಾಳಿ ನಡೆಸಿದರು. ಜೊತೆಗೆ ದೆಹಲಿ, ಬೆಂಗಳೂರಿನ ಮೆಟ್ರೋ ದರ ಪಟ್ಟಿಯನ್ನು ತಮ್ಮ ಎಕ್ಸ್‌ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಇತ್ತೀಚೆಗೆ ದೆಹಲಿ ಮೆಟ್ರೋದ ಪ್ರಯಾಣದ ದರವು ಕನಿಷ್ಠ 1 ರೂಪಾಯಿಂದ ಗರಿಷ್ಠ ನಾಲ್ಕು ರೂಪಾಯಿವರೆಗೆ ಏರಿಕೆಯಾಗಿತ್ತು.

ಆದರೆ, ಬೆಂಗಳೂರಿನಲ್ಲಿ ಹಾಗಲ್ಲ ಕನಿಷ್ಠ ಐದರಿಂದ ಒಮ್ಮೆಲೆ ಮೂವತ್ತು ರೂಪಾಯಿಗೆ ಏರಿಕೆ ಮಾಡಿರುವ ಬಗ್ಗೆ ಸಂಸದರು ಕಿಡಿಕಾರಿದರು. ದೆಹಲಿಯಲ್ಲಿ ಏರಿಕೆಯಾಗದ ದರ ಬೆಂಗಳೂರಿನಲ್ಲಿ ಹೀಗ್ಯಾಕೆ ಎಂದು ಪ್ರಯಾಣಿಕರು ಎಕ್ಸ್‌ನಲ್ಲಿ ಕಿಡಿಕಾರಿದ್ದರು. ಆದರೆ, ಇದಕ್ಕೆ ಸರ್ಕಾರದ ಉತ್ತರ ಇನ್ನು ಮೌನಾಗೆ ಉಳಿದಿದೆ.

**ನಮ್ಮ ಮೆಟ್ರೋ ದುಬಾರಿ:** ಬೆಂಗಳೂರು ಮೆಟ್ರೋ ದರ ದೇಶದಲ್ಲೇ ಅತಿ ದುಬಾರಿ. ದೆಹಲಿ ಮೆಟ್ರೋ ಹಾಗೂ ನಮ್ಮ ಮೆಟ್ರೋ ದರ ಹೋಲಿಕೆ ಮಾಡಿ ಅಂಕಿ ಅಂಶಗಳನ್ನು ತೇಜಸ್ವಿ ಸೂರ್ಯರವು ಬಿಡುಗಡೆ ಮಾಡಿದರು. ಜೊತೆಗೆ ಜನಸಾಮಾನ್ಯರ ಒಳಿತಿಗಾಗಿ ಕರ್ನಾಟಕ ಸರ್ಕಾರ ದರ ಇಳಿಕೆ ಮಾಡಬೇಕು ಎಂದು



ಸುದ್ದಿಗೋಷ್ಠಿಯಲ್ಲಿ ಆಗ್ರಹಿಸಿದರು.

**ದೆಹಲಿ ಮೆಟ್ರೋದರ ಎಷ್ಟಿದೆ?:** ಬೆಂಗಳೂರು ಲೋಕಸಭಾ ಕ್ಷೇತ್ರದ ತೇಜಸ್ವಿ ಸೂರ್ಯ ಮಾತನಾಡಿ, ಮೆಟ್ರೋಗಳಲ್ಲಿ ಹತ್ತು ಲಕ್ಷ ಸಾಮಾನ್ಯ ಜನರು ಓಡಾಡುತ್ತಾರೆ. ಗಾರ್ಮೆಂಟ್ಸ್, ಕೂಲಿ ಕಾರ್ಮಿಕರು, ಐಟಿಬಿಟಿ ಕಂಪನಿಯವರು ಹೆಚ್ಚು ಬಳಕೆ ಮಾಡುತ್ತಾರೆ. ಇಂತದರಲ್ಲಿ ರಾಜ್ಯ ಸರ್ಕಾರ ಬರೋಬ್ಬರಿ ಶೇ.136ರಷ್ಟು ಮೆಟ್ರೋ ಪ್ರಯಾಣದ ದರ ಏರಿಕೆ ಮಾಡಿದ್ದಾರೆ. ಮೊನ್ನೆ ದೆಹಲಿ ಮೆಟ್ರೋದಲ್ಲಿಯೂ ದರ ಏರಿಕೆಯಾಯಿತು. 0.10ಕಿಮೀ ಇದ್ದಂತಹ ದರ 11ದಕ್ಕೆ ಏರಿಕೆ. 5-12 ಕಿ.ಮೀಗೆ 30 ರೂ.ಇತ್ತು ಅದನ್ನು 32 ರೂ.ಗೆ ಏರಿಕೆ ಮಾಡಲಾಯಿತು. ಇನ್ನು 12-21 ಕಿ.ಮೀ ಪ್ರಯಾಣಕ್ಕೆ 40 ರೂ. ಗಳಿಂದ 43 ರೂ.ಕ್ಕೆ ಏರಿಕೆ ಮಾಡಿದರು. 21-32 ಕಿ.ಮೀಗೆ 50 ರೂ. ಇದ್ದದ್ದು, 54 ರೂ.ಗೆ ಏರಿಕೆ ಮಾಡಲಾಯಿತು. ಇನ್ನು 32 ಕಿ.ಮೀ60 ರೂಪಾಯಿ ಇದ್ದದ್ದು ಪರಿಷ್ಕೃತ ದರದಡಿ 64 ರೂ. ಮಾಡಲಾಯಿತು. ಆದರೆ, ಬೆಂಗಳೂರಿನಲ್ಲಿ 6ರಿಂದ8ಕಿ.ಮೀಗೆ 40 ರೂಪಾಯಿ ಏರಿಕೆ ಮಾಡಲಾಗಿದೆ.

**ನಮ್ಮ ಮೆಟ್ರೋ ದರವೆಷ್ಟು?:** ದೆಹಲಿಯಲ್ಲಿ ಬರಿ ನಾಲ್ಕು ರೂಪಾಯಿ ಏರಿಕೆ ಮಾಡಲಾಗಿದೆ ಹೀಗೆ ಮಾಡಿದ್ರೆ ಯಾರಾದ್ರು ಪ್ರಶ್ನೆ ಮಾಡ್ತಾರ ಇಲ್ಲ. ಸರ್ಕಾರಕ್ಕೆ ಆದಾಯದ ಅಗತ್ಯವಿದೆ ಎಂಬುದನ್ನು ಜನರೇ ಅರ್ಥ ಮಾಡಿಕೊಳ್ಳುತ್ತಾರೆ. ಆದರೆ ಬೆಂಗಳೂರಿನಲ್ಲಿ ಹಾಗಿಲ್ಲ 10ರಿಂದ15ಕಿಮೀ 60ರೂಪಾಯಿ ಯಾದರೆ, 15ರಿಂದ 20ಕಿ.ಮೀಗೆ 70ರೂಪಾಯಿ ಮಾಡಿದ್ದಾರೆ 20ರಿಂದ25ಕಿ.ಮೀ ಹೋಗೋದಕ್ಕೆ 80 ರೂ ಕಟ್ಟಬೇಕು. 25ಕೀ.ಮೀ ಮೇಲಿನ ಪ್ರಯಾಣಕ್ಕೆ 90ರೂಪಾಯಿ ಕಟ್ಟಬೇಕು ಎಂದು ಕಿಡಿಕಾರಿದರು.

### ಹೈಕೋರ್ಟ್‌ಗೆ ಅರ್ಜಿ

**ಮೆಟ್ರೋ ದರ ಏರಿಕೆ ವಿಚಾರವಾಗಿ ಪ್ರಶ್ನಿಸಿ ಕರ್ನಾಟಕ ಹೈಕೋರ್ಟ್‌ನಲ್ಲಿಈಗಾಗಲೇ ಅರ್ಜಿ ಸಲ್ಲಿಸಿದ್ದೇನೆ. ಅದರ ವಿಚಾರಣೆಯೂ ಆಗುತ್ತಿದೆ. ಸೆ.22ಕ್ಕೆ ಅಂತಿಮ ವಿಚಾರಣೆ ಇದೆ. ವಿಚಾರಣೆಯಲ್ಲಿ ಶುಲ್ಕ ನಿಗದಿ ಸಮಿತಿ (ಎಫ್‌ಎಫ್‌ಸಿ) ವರದಿ ಬಹಿರಂಗಪಡಿಸುವ ಬಗ್ಗೆ ಸರ್ಕಾರ ಹೈಕೋರ್ಟ್‌ಗೆ ಸರ್ಕಾರ ಅಫಿಡವಿಟ್ ಸಲ್ಲಿಸಿದೆ. ಆದರೆ ಇಲ್ಲಿಯವರೆಗೂ ಯಾವುದೇ ವರದಿಯನ್ನು ಬೆಂಗಳೂರು ಮೆಟ್ರೋ ರೈಲು ನಿಗಮ (ಬಿಎಂಆರ್‌ಸಿಎಲ್) ಬಹಿರಂಗ ಪಡಿಸಿಲ್ಲ. ನಿಮಗಿನ್ನೂ ಸಮಯವಿದೆ. 22ರೊಳಗೆ ವರದಿ ಬಿಡುಗಡೆ ಮಾಡಿ ಎಂದು ಒತ್ತಾಯ ಮಾಡಿದರು.**

### ನಿತ್ಯ ಜನರಿಂದ ನಾಲ್ಕುನೂರು ಸುಲಿಗೆ!

**ದೇಶದ ಯಾವ ಮೆಟ್ರೋದಲ್ಲಿಯೂ ಇಂತಹ ವ್ಯವಸ್ಥೆ ಇಲ್ಲ. ವಿಜಯನಗರದಿಂದ ವೈಟ್ ಫೀಲ್ಡ್ ಗೆ 90ರೂ. ಕೊಡ್ಬೇಕು ವಾಪಸ್ ಬರೋಕೆ 90ರೂ. ಕೊಡ್ಬೇಕು. ಇನ್ನೂ ಆಫೀಸಿನಿಂದ ಮನೆಗೆ ಹೋಗೋಕೆ ಆಟೋ ಅಥವಾ ಕ್ಯಾಬ್ ಬಸ್ ಅಂದ್ರೆ ಅದರದ್ದು ಇನ್ನಷ್ಟು ಖರ್ಚು. ನಿತ್ಯ ಸರ್ಕಾರ ಐನೂರು ರೂಪಾಯಿ ಸಾರ್ವಜನಿಕ ಟ್ರಾನ್ಸ್‌ಪೋರ್ಟ್ ಬಳಕೆ ಮಾಡೋರ ಮೇಲೆ ಏರಿಕೆ ಮಾಡಿದೆ. ಮತ್ತೊಮ್ಮೆ ನಾನು ಕೇಳಿಕೊಳ್ಳುವುದು ಇಷ್ಟು ಮೆಟ್ರೋ ದರ ದಯವಿಟ್ಟು ಕಡಿಮೆ ಮಾಡಿ. ದಿನ ಇನ್ನೂರು ಕೊಟ್ಟು ಹೇಗೆ ಹೋಗಲಿಕ್ಕೆ ಆಗುತ್ತೆ ಎಂದು ತೇಜಸ್ವಿ ಸೂರ್ಯ ಹೇಳಿದರು.**

# ರಾಜ್ಯದ ಶಾಲೆಗಳಲ್ಲಿ ಶುರುವಾಗುತ್ತಾ ವಾಟರ್ ಬೆಲ್




• ಉದಯವಾಹಿನಿ, ಬೆಂಗಳೂರು

ಶಾಲಾ ಅವಧಿಯಲ್ಲಿ ಮಕ್ಕಳಿಗೆ ನೀರು ಕುಡಿಯೋಕೆ ಉತ್ತೇಜಿಸಲು ರಾಜ್ಯದ ಶಾಲೆಗಳಲ್ಲಿ ವಾಟರ್ ಬೆಲ್ ಕಾರ್ಯಕ್ರಮ ಜಾರಿಗೆ ಶಿಕ್ಷಣ ಇಲಾಖೆ ಮುಂದಾಗಿದೆ. ಕೇರಳ ಶಾಲೆಗಳಲ್ಲಿ ಈಗಾಗಲೇ ವಾಟರ್ ಬೆಲ್ ಕಾರ್ಯಕ್ರಮ ಅನುಷ್ಠಾನದಲ್ಲಿದೆ. ದಿನಕ್ಕೆ ಎರಡು ಬಾರಿ ಕೇರಳದಲ್ಲಿ ವಾಟಲ್ ಬೆಲ್ ಆಗಲಿದೆ. ಬೆಳಗ್ಗೆ 10:30 ಮತ್ತು ಮಧ್ಯಾಹ್ನ 2:30 ರ ಅವಧಿಯಲ್ಲಿ ವಾಟರ್ ಬೆಲ್ ಆಗುತ್ತದೆ. ಈ ಅವಧಿಯಲ್ಲಿ ಮಕ್ಕಳು ನೀರು ಕುಡಿಯುವುದು ಈ ಕಾರ್ಯಕ್ರಮದ ಉದ್ದೇಶ.

ಕೇರಳದಲ್ಲಿ ಶುರು ಆಗಿರುವ ವಾಟರ್ ಬೆಲ್ ಕಾರ್ಯಕ್ರಮ ಕರ್ನಾಟಕದ ಶಾಲೆಗಳಲ್ಲೂ ಅನುಷ್ಠಾನಕ್ಕೆ ಚಿಂತನೆ ನಡೆದಿದೆ. ಈಗಾಗಲೇ ಶಿಕ್ಷಣ ಇಲಾಖೆ ಹಂತದಲ್ಲಿ ವಾಟರ್ ಬೆಲ್ ಜಾರಿ ಬಗ್ಗೆ ಚರ್ಚೆಗಳು ಇವೆ ಎನ್ನಲಾಗುತ್ತಿದೆ. ಶೀಘ್ರವೇ ರಾಜ್ಯದ ಶಾಲೆಗಳಲ್ಲೂ ಈ ಕಾರ್ಯಕ್ರಮ ಅನುಷ್ಠಾನ ಆಗುವ ಸಾಧ್ಯತೆ ಇದೆ ಎನ್ನಲಾಗಿದೆ.

### ವಾಟರ್ ಬೆಲ್ ಕಾರ್ಯಕ್ರಮ ಉದ್ದೇಶವೇನು?

- **ಶಾಲೆಗಳಲ್ಲಿ ಮಕ್ಕಳು ಹೆಚ್ಚು ನೀರು ಕುಡಿಯಲು ಉತ್ತೇಜಿಸುವ ಕಾರ್ಯಕ್ರಮ ಇದು.**
- **ಮಕ್ಕಳು ಹೆಚ್ಚು ನೀರು ಕುಡಿದರೆ ಆರೋಗ್ಯಕ್ಕೆ ಒಳ್ಳೆಯದು. ಹೀಗಾಗಿ, ಶಾಲೆಗಳಲ್ಲಿ ಈ ಬಗ್ಗೆ ಜಾಗೃತಿ ಮೂಡಿಸುವುದು.**
- **ಕೇರಳದಲ್ಲಿ ದಿನಕ್ಕೆ ಎರಡು ಬಾರಿ ವಾಟರ್ ಬೆಲ್ ಮಾಡೋ ಮೂಲಕ ಮಕ್ಕಳು ನೀರು ಕುಡಿಯಲು ಉತ್ತೇಜಿಸಲಾಗುತ್ತಿದೆ.**
- **ದಿನಕ್ಕೆ 2-3 ಬಾರಿ ವಾಟರ್ ಬೆಲ್ ಹೊಡೆದು ಮಕ್ಕಳಿಗೆ ಆರೋಗ್ಯದ ಕಾಳಜಿ ಜತೆ ನೀರಿನ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವ ಬಗ್ಗೆ ಚರ್ಚೆಗಳು ನಡೆಯುತ್ತಿವೆ.**

# ವಿಭಿನ್ನವಾಗಿ ಶಿಕ್ಷಕರ ದಿನಾಚರಣೆ

• ಉದಯವಾಹಿನಿ, ಬೆಂಗಳೂರು

AVLGI ಉತ್ತರಹಳ್ಳಿ ವಿಂಗ್‌ನ ಪ್ರೆಸಿಡೆಂಟ್ ಸುಷ್ಮಾ ನಾಗೇಂದ್ರ ಹಾಗೂ AVLGI ಜೆ ಪಿ ನಗರ ವಿಂಗ್‌ನ ಪ್ರೆಸಿಡೆಂಟ್ ಶ್ರಾವಣಿ ಭಾರ್ಗವ್ ಮತ್ತು ಈ ಎರಡು ವಿಂಗ್‌ನ ಸದಸ್ಯರು ಸೇರಿ ಶಿಕ್ಷಕರ ದಿನಾಚರಣೆಯನ್ನು ವಿಭಿನ್ನವಾಗಿ ಆಚರಿಸಿದರು.

ಅವರು ಬ್ರಿಟಿಷರ ಆಳ್ವಿಕೆಯ ಕಾಲದಲ್ಲಿ 1905ರಲ್ಲಿ ಪ್ರಾರಂಭವಾಗಿರುವ ಈ ಶಾಲೆಯು 1983ರಲ್ಲಿ ಕಿರಿಯ ಮಹಾವಿದ್ಯಾಲಯ ಆಗಿ ಪರಿವರ್ತನೆಗೊಂಡು ನಡೆದುಕೊಂಡು ಬಂದಿದೆ. ಈ ಶಾಲೆ ಎಷ್ಟು ಹಳೆಯದ್ದು ಅಷ್ಟೇ ಹಳೆಯ ಇತಿಹಾಸವನ್ನು ಒಳಗೊಂಡಿದೆ ಮತ್ತು ಈ ಶಾಲೆಯು ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಗುರುತಿಸಿಕೊಂಡಿದೆ. ಇದು ಕೆ. ಆರ್ ಮಾರ್ಕೆಟ್ ಹತ್ತಿರ ಇರುವ ಹಳೆಕೋಟೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಇಲ್ಲಿ Arya Vysy

AVLGI ಫೌಂಡರ್ ಪ್ರೆಸಿಡೆಂಟ್ ಕವಿತಾ ಇರಗಂ ಅವರ ಮಾರ್ಗದರ್ಶನದಂತೆ AVLGI ಉತ್ತರಹಳ್ಳಿ ವಿಂಗ್‌ನ ಪ್ರೆಸಿಡೆಂಟ್ ಸುಷ್ಮಾ ನಾಗೇಂದ್ರ, AVLGI ಜೆ ಪಿ ನಗರ ವಿಂಗ್‌ನ ಪ್ರೆಸಿಡೆಂಟ್ ಶ್ರಾವಣಿ ಭಾರ್ಗವ್, ಈ 2 ವಿಂಗ್‌ನ ಸದಸ್ಯರು ಸೇರಿ ಶಿಕ್ಷಕರ ದಿನಾಚರಣೆಯನ್ನು ಇಲ್ಲಿನ ಶಿಕ್ಷಕ ವೃಂದಕ್ಕೆ ಗೌರವ ಸಮರ್ಪಣೆಯನ್ನು ಮಾಡಿದರು,




ಶಿಕ್ಷಕರಿಗೋಸ್ಕರ ಅನೇಕ ಕಾರ್ಯಕ್ರಮಗಳನ್ನು ಆಟಗಳನ್ನು ಆಡಿಸಿ ಬಹುಮಾನಗಳನ್ನು ಕೊಡುವುದರ ಜೊತೆಗೆ ಸಿಹಿಯನ್ನು ಹಂಚಿದರು, ಮಹಿಳಾ ಶಿಕ್ಷಕರಿಗೆ ಅರಿಶಿಣ ಕುಂಕುಮ ಬಳೆ ಹೂಗಳು ಮತ್ತು ಸೀರೆಗಳನ್ನು ಕೊಟ್ಟು ಗೌರವಿಸಿದರು. ಹಾಗೆ ಪುರುಷ ಶಿಕ್ಷಕರಿಗೆ ಸಿಹಿಯನ್ನು ಹಂಚುವುದರ ಜೊತೆಗೆ ಅವರಿಗೆ ಕಿರು ಕಾಣಿಕೆ ಕೊಟ್ಟು ಗೌರವಿಸಿದರು. ಇಲ್ಲಿನ ಶಿಕ್ಷಕರು ತುಂಬಾ ಉತ್ಸಾಹದಿಂದ ಇವರ ಜೊತೆ ಭಾಗಿಯಾಗಿ ಎಲ್ಲಾ ಆಟಗಳನ್ನು ಆಡಿ ಸಂತೋಷ ಪಟ್ಟರು.

# ಯಲಹಂಕ ಟೌನ್‌ಶಿಪ್ ಅಭಿವೃದ್ಧಿ: 50:50ರ ಅನುಪಾತದಲ್ಲಿ ಪರಿಹಾರ ನೀಡಲು ಒಪ್ಪಿಗೆ

• ಉದಯವಾಹಿನಿ, ಬೆಂಗಳೂರು

ಯಲಹಂಕದಲ್ಲಿ ರೂ.2.930 ಕೋಟಿ ವೆಚ್ಚದ ಅತ್ಯಾಧುನಿಕ ಟೌನ್‌ಶಿಪ್ ನಿರ್ಮಾಣವೂ ಸೇರಿ, ನಗರದಲ್ಲಿ ವಿವಿಧ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳಿಗೆ ರಾಜ್ಯ ಸಚಿವ ಸಂಪುಟ ಸಭೆಯು ಅನುಮೋದನೆ ನೀಡಿದೆ.ಯಲಹಂಕ ತಾಲ್ಲೂಕು ವ್ಯಾಪ್ತಿಯ ಜಾಲ-1 ಹೋಬಳಿ, ಚಿಕ್ಕಜಾಲ, ಮೀನುಕುಂಟೆ ಗ್ರಾಮದಲ್ಲಿ ಈಗಾಗಲೇ ಭೂಸ್ವಾಧೀನ ಪಡಿಸಿಕೊಂಡಿರುವ ಜಮೀನಿನಲ್ಲಿ ಟೌನ್‌ಶಿಪ್ ನಿರ್ಮಾಣ ಮಾಡಲಾಗುತ್ತದೆ. ಸದರಿ ಜಮೀನುಗಳ ಮಾಲೀಕರಿಗೆ 50:50 ಅನುಪಾತದಲ್ಲಿ ಅಭಿವೃದ್ಧಿಪಡಿಸಿದ ಜಮೀನು ನೀಡುವುದು ಮತ್ತು ಉಳಿಕೆ ಜಮೀನಿನಲ್ಲಿ ಟೌನ್‌ಶಿಪ್ ನಿರ್ಮಾಣ ಮಾಡಲು ಕರ್ನಾಟಕ ಗೃಹ ಮಂಡಳಿ ಪ್ರಸ್ತಾವ ಸಲ್ಲಿಸಿತ್ತು.

ಉದ್ದೇಶಿತ ಟೌನ್‌ಶಿಪ್ ಪ್ರದೇಶದ ವ್ಯಾಪ್ತಿಯಲ್ಲಿ



ರೈತರು 43 ಎಕರೆಯಷ್ಟು ಜಮೀನು ನೀಡಿದ್ದಾರೆ. ವಸತಿ ಯೋಜನೆಗಳಿಗೆ ಭೂಸ್ವಾಧೀನ ಪಡಿಸಿಕೊಂಡ ಜಮೀನುಗಳ ಮಾಲೀಕರಿಗೆ 50:50ರ ಅನುಪಾತದಲ್ಲಿ ಅಭಿವೃದ್ಧಿಪಡಿಸಿದ ಜಮೀನು ನೀಡಲೂ ಸಂಪುಟವು ಒಪ್ಪಿಗೆ ನೀಡಿದಂತಾಗಿದೆ.


ರೂ.2,930 ಕೋಟಿ ವೆಚ್ಚವನ್ನು ಗೃಹಮಂಡಳಿಯೇ ಭರಿಸಿ ಅಥವಾ ಖಾಸಗಿ ನಿರ್ಮಾಣ ಕಂಪನಿಗಳ ಜಂಟಿ ಸಹಭಾಗಿತ್ವದಲ್ಲಿ ಟೌನ್‌ಶಿಪ್ ಅಭಿವೃದ್ಧಿಪಡಿಸಲು, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದಿಂದ ಭೂ-ಉಪಯೋಗ ಬದಲಾವಣೆಗೆ ಅನುಮೋದನೆ ಪಡೆಯಲು ಹಾಗೂ ಈ ವ್ಯವಹಾರಗಳಿಗೆ ಸಲಹಾಧಿಕಾರಿಯನ್ನು ನೇಮಕ ಮಾಡಲು ಸಂಪುಟವು ಒಪ್ಪಿಗೆ ನೀಡಿದೆ.

### ಪ್ರಮುಖ ಯೋಜನೆಗಳು

- **ಜಲಮಂಡಳಿ ಕ್ಲೀವ್ ಲೈನ್ ಜಲಸಂಗ್ರಹಗಾರ ಠಾಣೆಯಲ್ಲಿರುವ ಕಲ್ಲಿನ ಸಂಗ್ರಹಗಾರವನ್ನು ಕೆಡವಿ, ರೂ.21.65 ಕೋಟಿ ವೆಚ್ಚದ ಆರ್‌ಸಿಸಿ ಟ್ಯಾಂಕ್ ನಿರ್ಮಾಣ**
- **ಕೆಂಗೇರಿಯಲ್ಲಿರುವ ಕೊಳಚೆ ನೀರು ಸಂಸ್ಕರಣಾ ಘಟಕದ ಸಾಮರ್ಥ್ಯವನ್ನು 60 ಎಂಎಲ್‌ಡಿಯಿಂದ 80 ಎಂಎಲ್‌ಡಿಗೆ ಹೆಚ್ಚಿಸಲು ರೂ.28.88 ಕೋಟಿ ವೆಚ್ಚದ ಕಾಮಗಾರಿಗೆ ಒಪ್ಪಿಗೆ**
- **ಒಟ್ಟು ರೂ.722.72 ಕೋಟಿ ವೆಚ್ಚದಲ್ಲಿ, ದೊಡ್ಡಬೆಲೆ ಮತ್ತು ಮೈಲಸಂದ್ರದಲ್ಲಿ ತಲಾ 100 ಎಂಎಲ್‌ಡಿ ಸಾಮರ್ಥ್ಯದ ಕೊಳಚೆ ನೀರು ಸಂಸ್ಕರಣಾ ಘಟಕಗಳ ನಿರ್ಮಾಣ**

# ಯುವತಿ ವಿಚಾರಕ್ಕೆ ಗಲಾಟೆ: ಕೊಲೆಗೆ ಯತ್ನಿಸಿದ ನಾಲ್ವರ ಸೆರೆ

• ಉದಯವಾಹಿನಿ, ಬೆಂಗಳೂರು



ಯುವತಿಯ ವಿಚಾರಕ್ಕೆ 2 ಗುಂಪುಗಳ ಮಧ್ಯೆ ಗಲಾಟೆ ನಡೆದು ಕೊಲೆಗೆ ಯತ್ನಿಸಿದ್ದ ಪ್ರಕರಣದಲ್ಲಿ ನಾಲ್ವರು ಆರೋಪಿಗಳನ್ನು ವಿಲ್ಸನ್ ಗಾರ್ಡನ್ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಮೊಹಮ್ಮದ್ ಫಾರ್ದೀನ್ (24), ಮೊಹಮ್ಮದ್ ಅಫಾನ್ (26), ಮೊಹಮ್ಮದ್ ರಾಯನ್ (21) ಎಂ.ಸಮೀರ್ (24) ಬಂಧಿತರು. ಬಾಬುರ್ ರಾಯನ್ ಎಂಬುವವರು ನೀಡಿದ ದೂರಿನ ಮೇರೆಗೆ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದರು. ಕೊಲೆ ಮಾಡುವ ಉದ್ದೇಶದಿಂದ ಮಾರಕಾಸ್ತ್ರ ಹಿಡಿದು ಬಂದಿದ್ದ ಆರೋಪಿಗಳು, ನನ್ನ ಹಾಗೂ ಅಫ್ರಿನ್ ಮೇಲೆ ಹಲ್ಲೆ ನಡೆಸಿದ್ದರು ಎಂದು ರಾಯನ್ ದೂರು ನೀಡಿದ್ದರು.

# ಸಿಎಸ್‌ಆರ್ ನಿಧಿ ಬಳಕೆಯಲ್ಲಿ ಇಡೀ ದೇಶದಲ್ಲೇ ರಾಜ್ಯಕ್ಕೆ ಮೂರನೇ ಸ್ಥಾನ

• ಉದಯವಾಹಿನಿ, ಬೆಂಗಳೂರು

ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯನ್ನು (ಸಿಎಸ್‌ಆರ್) ಶಿಕ್ಷಣ, ಆರೋಗ್ಯ ಹಾಗೂ ಮೂಲಸೌಕರ್ಯ ವಲಯದ ಪ್ರಗತಿಗೆ ಹೆಚ್ಚು ಬಳಕೆ ಮಾಡಬೇಕು ಎಂದು ಗೃಹ ಸಚಿವ ಜಿ.ಪರಮೇಶ್ವರ ಸಲಹೆ ನೀಡಿದರು.

ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ ಅಡಿಯಲ್ಲಿ ಅತಿ ಹೆಚ್ಚು ಹಣವ ಖರ್ಚು ಮಾಡುವ ರಾಜ್ಯಗಳಲ್ಲಿ ಕರ್ನಾಟಕವು ಮೂರನೇ ಸ್ಥಾನದಲ್ಲಿದೆ. ಸಿಎಸ್ ಆರ್ ನಿಧಿಯಡಿ 2023-24 ರಲ್ಲಿ 2,500 ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ. ದೇಶಾದ್ಯಂತ ಸಿಎಸ್‌ಆರ್ ಅಡಿಯಲ್ಲಿ ಒಟ್ಟು 34,000 ಕೋಟಿ ರೂ. ಬಳಕೆ ಮಾಡಲಾಗಿದೆ, ಇದು ವರ್ಷದಿಂದ ವರ್ಷಕ್ಕೆ ಏರಿಕೆಯಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಒಕ್ಕೂಟ (ಎಫ್‌ಕೆಸಿಸಿಐ) ಆಯೋಜಿಸಿದ್ದ ಭಾರತ ಸಿಎಸ್‌ಆರ್ ಮತ್ತು ಸುಸ್ಥಿರತೆ ಪ್ರಶಸ್ತಿಗಳಲ್ಲಿ ಮಾತನಾಡಿದ ಡಾ. ಪರಮೇಶ್ವರ, ರಾಜ್ಯದ ಬಹುತೇಕ ಪ್ರತಿಯೊಂದು ಹಳ್ಳಿಯಲ್ಲೂ ಶಾಲೆಗಳಿದ್ದರೂ, ಗುಣಮಟ್ಟದ ಶಿಕ್ಷಣವು ಅತ್ಯಂತ ತುರ್ತು ಅಗತ್ಯವಾಗಿದೆ ಎಂದು ಒತ್ತಿ ಹೇಳಿದರು. ಶಿಕ್ಷಣ, ಆರೋಗ್ಯ, ಕೈಗಾರಿಕೆ ಮತ್ತು ಸಾಫ್ಟ್‌ವೇರ್ ರಫ್ತಿನಲ್ಲಿ ಕರ್ನಾಟಕವು ಗಮನಾರ್ಹ ಪ್ರಗತಿ ಸಾಧಿಸಿದೆ, ದೇಶದ ಐಟಿ ರಫ್ತಿನಲ್ಲಿ ಸುಮಾರು ಶೇ. 40 ರಷ್ಟು ಕೊಡುಗೆ ನೀಡಿದೆ ಎಂದು ಅವರು ಹೇಳಿದರು.



ಗೃಹ ಸಚಿವ ಜಿ.ಪರಮೇಶ್ವರ ಸಲಹೆ

**ಹೂಡಿಕೆದಾರರಲ್ಲಿ ಕರ್ನಾಟಕದ ಹೆಚ್ಚುತ್ತಿರುವ ಆಕರ್ಷಣೆಯನ್ನು ಸೂಚಿಸಿದ ಅವರು, ಮಂಗಳೂರು ಈಗ ಹೂಡಿಕೆಗೆ ಎರಡನೇ ಅತ್ಯಂತ ಆಕರ್ಷಕ ನಗರವಾಗಿದೆ ಎಂದು ಹೇಳಿದರು. ಭಾರತದಲ್ಲಿ ಸಿಎಸ್‌ಆರ್ ನಿಧಿ ಬಳಕೆ ವಿಚಾರದಲ್ಲಿ ದಶಕದ ಹಿಂದೆಯೇ ಕಾನೂನು ಜಾರಿಗೊಂಡಿದೆ. ಕರ್ನಾಟಕವು ಮಾಹಿತಿ ತಂತ್ರಜ್ಞಾನ, ಕೃಷಿ, ಆರೋಗ್ಯ, ಶಿಕ್ಷಣ ವಲಯದಲ್ಲಿ ಮುಂಚೂಣಿಯಲ್ಲಿದೆ. ಎಸ್.ಎಂ.ಕೃಷ್ಣ ಅವರು ಮುಖ್ಯಮಂತ್ರಿ ಆಗಿದ್ದಾಗ ರೂಪಿಸಿದ ನೀತಿಗಳು ಫಲ ನೀಡಿ ಬೆಂಗಳೂರು ನಗರ ಸಾಫ್ಟ್‌ವೇರ್ ರಫ್ತು ವಲಯದಲ್ಲಿ ಪ್ರಮುಖ ನಗರವಾಗಿ ಹೊರ ಹೊಮ್ಮಿದೆ. ಕಡಿಮೆ ಖರ್ಚಿನಲ್ಲಿ ಆರೋಗ್ಯ ಸೇವೆಗಳು ಲಭಿಸುತ್ತಿವೆ ಎಂದು ಹೇಳಿದರು.**

# ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮುಖ್ಯ ಆರೋಗ್ಯಾಧಿಕಾರಿಯಾಗಿ ಡಾ.ನಿರ್ಮಲ

## ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ವೃಂದ ಮತ್ತು ನೇಮಕಾತಿ ನಿಯಮಾವಳಿಯನ್ನು ಕೂಡಲೇ ತಿದ್ದುಪಡಿ ಮಾಡಿ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಮುಖ್ಯ ಆಯುಕ್ತರಿಗೆ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಡಾ. ನಿರ್ಮಲ ಬುಗ್ಗಿ ಮುಖ್ಯ ಆರೋಗ್ಯಾಧಿಕಾರಿ (ಕ್ಲಿನಿಕಲ್) ಹುದ್ದೆಯನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಕೇಂದ್ರ ಕಛೇರಿಯಲ್ಲಿ ಮುಂದುವರಿಸಲು ಮನವಿ ಸಲ್ಲಿಸಿದರು.

ಡಾ. ನಿರ್ಮಲ ಬುಗ್ಗಿ ಮುಖ್ಯ ಆರೋಗ್ಯಾಧಿಕಾರಿ (ಕ್ಲಿನಿಕಲ್) ರವರ ಹುದ್ದೆಯು 1976ರ ವೃಂದ ಮತ್ತು ನೇಮಕಾತಿ ನಿಯಮಾವಳಿ ಮತ್ತು 2020 ರ ವೃಂದ ಮತ್ತು ನೇಮಕಾತಿ ನಿಯಮಾವಳಿಯಲ್ಲಿ ಮುಖ್ಯ ಆರೋಗ್ಯಾಧಿಕಾರಿ (ಕ್ಲಿನಿಕಲ್) ಹುದ್ದೆಯನ್ನು ಮಂಜೂರಾತಿ ಆಗಿರುತ್ತದೆ. ಆದರೆ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ 2024ರಲ್ಲಿ ಮುಖ್ಯ ಆರೋಗ್ಯಾಧಿಕಾರಿ (ಕ್ಲಿನಿಕಲ್) ಹುದ್ದೆಯನ್ನು ರದ್ದುಪಡಿಸಲಾಗಿರುತ್ತದೆ.

ಆದ್ದರಿಂದ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ




2024 ರಂತೆ ಮುಖ್ಯ ಆರೋಗ್ಯಾಧಿಕಾರಿ (ಕ್ಲಿನಿಕಲ್) ಹುದ್ದೆಯನ್ನು ಮಂಜೂರು ಮಾಡುವುದು ಅತ್ಯಂತ ಅವಶ್ಯಕತೆವಿರುತ್ತದೆ.

ಮುಖ್ಯ ಆರೋಗ್ಯಾಧಿಕಾರಿ (ಕ್ಲಿನಿಕಲ್) ವ್ಯಾಪ್ತಿಯಲ್ಲಿ ಬೆಂಗಳೂರು ನಗರದಲ್ಲಿರುವ ಹೆರಿಗೆ ಆಸ್ಪತ್ರೆಗಳು, ರೆಫರಲ್ ಆಸ್ಪತ್ರೆಗಳು, ಹಾಗೂ ನಮ್ಮ ಕ್ಲಿನಿಕ್‌ಗಳು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಇರುತ್ತದೆ.

ಮುಂದುವರೆದಂತೆ ಪಾಲಿಕೆ ಅಧಿಕಾರಿ ನೌಕರರು 5 ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಾಸವಾಗಿರುತ್ತಾರೆ. ಆದರೆ ಕೆಲಸವನ್ನು ಪೂರ್ವ ಮಹಾನಗರ ಪಾಲಿಕೆ, ದಕ್ಷಿಣ ಮಹಾನಗರ ಪಾಲಿಕೆ, ಪಶ್ಚಿಮ ಮಹಾನಗರ ಪಾಲಿಕೆ, ಉತ್ತರ ಮಹಾನಗರ ಪಾಲಿಕೆ, ಕೇಂದ್ರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸುತ್ತಿರುತ್ತಾರೆ. ತುರ್ತಾಗಿ ಆರೋಗ್ಯ ಸಮಸ್ಯೆ ಉಂಟಾದ ಸಂದರ್ಭದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯ ಬೇಕಾಗಿರುತ್ತದೆ. ಪಾಲಿಕೆ ಅಧಿಕಾರಿ/ನೌಕರರು ಮತ್ತು ಅರ್ಹ ಕುಟುಂಬ ಸದಸ್ಯರು ಕಾಯಿಲೆ/ಮಾರಣಾಂತಿಕ ಕಾಯಿಲೆ ಬಂದಂತಹ ಸಂದರ್ಭದಲ್ಲಿ ಮುಖ್ಯ ಆರೋಗ್ಯಾಧಿಕಾರಿ (ಕ್ಲಿನಿಕಲ್) ಮ್ಯಾನೇಜಡ್ ಹೆಲ್ತ್‌ಕೇರ್ ರವರ ಮಾರ್ಗದರ್ಶನ ಪಡೆದು ಚಿಕಿತ್ಸೆಯನ್ನು ಪಡೆಯುವುದು ಅತ್ಯಂತ ಅವಶ್ಯಕತೆ ಇರುತ್ತದೆ. ಆದ್ದರಿಂದ ಮುಖ್ಯ ಆರೋಗ್ಯಾಧಿಕಾರಿ (ಸಾರ್ವಜನಿಕ) ಹುದ್ದೆಗಿಂತ ಮುಖ್ಯ ಆರೋಗ್ಯಾಧಿಕಾರಿ (ಕ್ಲಿನಿಕಲ್) ಹುದ್ದೆಯು ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಅತ್ಯಂತ ಅವಶ್ಯಕತೆ ಇರುವುದರಿಂದ, ಡಾ|| ನಿರ್ಮಲ ಬುಗ್ಗಿ ಮುಖ್ಯ ಆರೋಗ್ಯಾಧಿಕಾರಿ (ಕ್ಲಿನಿಕಲ್) ರವರು ಹಿರಿಯ/ಅನುಭವಿ ಅಧಿಕಾರಿಯಾಗಿದ್ದು ಸೇವಾ ಹಿರಿತನವನ್ನು ಹೊಂದಿರುವುದರಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಕೇಂದ್ರ ಕಛೇರಿಯಲ್ಲಿ ಬೆಂಗಳೂರಿನ ನಾಗರೀಕರು/ಪಾಲಿಕೆ ಅಧಿಕಾರಿ ನೌಕರರ ಆರೋಗ್ಯದ ಹಿತ ದೃಷ್ಟಿಯಿಂದ ಮುಂದುವರಿಸಿಕೊಂಡು ಹೋಗಲು ಈ ಮೂಲಕ ಕೋರಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ವೃಂದ ಮತ್ತು ನೇಮಕಾತಿ ನಿಯಮಾವಳಿಯನ್ನು ಕೂಡಲೇ ತಿದ್ದುಪಡಿಮಾಡಿ ನಂತರ ಅಧಿಕಾರಿ/ನೌಕರರನ್ನು ನಿಯಮಾನುಸಾರ ವರ್ಗಾವಣೆ / ನಿಯೋಜಿಸಲು ಕ್ರಮವಹಿಸಲು ಈ ಮೂಲಕ ತಮ್ಮಲ್ಲಿ ಮನವಿ ಮಾಡಿಕೊಳ್ಳುತ್ತಾ, ಹಾಗೂ ಈಗಾಗಲೇ ಅಧಿಕಾರಿ ನೌಕರರು ಗೊಂದಲ/ಒತ್ತಡದಲ್ಲಿ ಕೆಲಸ ನಿರ್ವಹಿಸುತ್ತಿರುವುದರಿಂದ ಕೂಡಲೇ ನಮ್ಮ ಸಂಘದ ಪದಾಧಿಕಾರಿಗಳೊಂದಿಗೆ ಚರ್ಚಿಸಿ ಅಧಿಕಾರಿ/ನೌಕರರ ಹಿತ ಕಾಯ್ದುಕೊಳ್ಳಲು ಈ ಮೂಲಕ ಕೋರಲಾಯಿತು.

### ಅತ್ಯಂತ ಗಂಭೀರವಾಗಿ ಬೇಕಾದ ಪ್ರಮುಖ ಅಂಶಗಳು: ಡಾ.ನಿರ್ಮಲ ಬುಗ್ಗಿ ಮುಖ್ಯ

**ಆರೋಗ್ಯಾಧಿಕಾರಿ (ಕ್ಲಿನಿಕಲ್) ರವರ ಅಧೀನದಲ್ಲಿ ಮ್ಯಾನೇಜಡ್ ಹೆಲ್‌ಕೇರ್ ಕಛೇರಿಯು ಇದ್ದು, ಪಾಲಿಕೆ ಅಧಿಕಾರಿ ನೌಕರರು ಅರ್ಹ ಕುಟುಂಬ ಸದಸ್ಯರು ಅನಾರೋಗ್ಯದ ನಿಮಿತ್ತ ಆಸ್ಪತ್ರೆಯಲ್ಲಿ ದಾಖಲಾಗಿ ಕಾಯಿಲೆ/ಮಾರಣಾಂತಿಕ ಕಾಯಿಲೆ ಬಂದಂತಹ ಸಂದರ್ಭದಲ್ಲಿ ಅಧಿಕಾರಿ ನೌಕರರು ಮ್ಯಾನೇಜಡ್ ಹೆಲ್ತ್ ಕೇರ್ ರವರ ಮಾರ್ಗದರ್ಶನದಲ್ಲಿ ಆಸ್ಪತ್ರೆಗಳಲ್ಲಿ ದಾಖಲಾಗಿ ಚಿಕಿತ್ಸೆಯನ್ನು ಪಡೆಯಲಾಗುತ್ತಿರುತ್ತದೆ..**

# ಬಿಡದಿಯಲ್ಲಿ ದೇಶದ ಮೊದಲ ಎ.ಐ ನಗರ: ಡಿಕೆಶಿ

## ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಯೋಜನೆ: ಎಕರೆಗೆ 1.50 ಕೋಟಿಯಿಂದ 2.50 ಕೋಟಿ ಪರಿಹಾರ

• **ಉದಯವಾಹಿನಿ, ರಾಮನಗರ**

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಬಿಡದಿಯಲ್ಲಿ ನಿರ್ಮಾಣವಾಗಲಿರುವ ಬಿಡದಿ ಸಮಗ್ರ ಉಪನಗರ ಯೋಜನೆ ಅಡಿ 'ಕೆಲಸ,ವಾಸ, ಉಲ್ಲಾಸ' ಪರಿಕಲ್ಪನೆ ಅಡಿ ದೇಶದಲ್ಲೇ ಮೊದಲ ಕೃತಕ ಬುದ್ಧಿಮತ್ತೆ ನಗರವನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ನಗರದ

> **ಯೋಜನೆಯನ್ನು ರದ್ದುಪಡಿಸಲು ಸಾಧ್ಯವಿಲ್ಲ. ಹಾಗಿದ್ದರೆ ಎಚ್.ಡಿ. ಕುಮಾರಸ್ವಾಮಿ ಸೇರಿದಂತೆ ಬಿಜೆಪಿಯಿಂದ ಮುಖ್ಯಮಂತ್ರಿಯಾಗಿದ್ದವರೇ ರದ್ದುಪಡಿಸಬಹುದಿತ್ತು. ಹಾಗಾಗಿ ಯೋಜನೆಗೆ ಹೊಸ ರೂಪ ನೀಡಿ ರೈತರಿಗೆ ನ್ಯಾಯಯುತ ಪರಿಹಾರ ನೀಡಲು ಮುಂದಾಗಿರುವೆ.**
>
> **– ಡಿ.ಕೆ. ಶಿವಕುಮಾರ್, ಉಪ ಮುಖ್ಯಮಂತ್ರಿ**



ಉದಯವಾಹಿನಿ ಚಿತ್ರ

**ಶೂನ್ಯ ಸಂಚಾರ ದಟ್ಟಣೆ**

ಜಿಲ್ಲಾಧಿಕಾರಿ ಕಚೇರಿಯಲ್ಲಿ ಗ್ರೇಟರ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್ ಶಿಪ್ ಲಾಂಛನ ಹಾಗೂ ಮಾಹಿತಿ ಪುಸ್ತಕ ಬಿಡುಗಡೆಗೊಳಿಸಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಮೂರು ವರ್ಷದಲ್ಲಿ ಯೋಜನೆ ಪೂರ್ಣಗೊಳಿಸಲಾಗುವುದು ಎಂದರು. ಯೋಜನೆಗಾಗಿ ಒಂಬತ್ತು ಗ್ರಾಮಗಳ 8,493 ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳಲಾಗುವುದು. ಭೂಮಿ ಕೊಟ್ಟವರಿಗೆ 2013ರ ಭೂ ಸ್ವಾಧೀನ ಕಾಯ್ದೆ ಅಡಿ ಪ್ರಸಕ್ತ ಮಾರುಕಟ್ಟೆ ದರದಲ್ಲಿ ಪ್ರತಿ ಎಕರೆಗೆ 1.50 ಕೋಟಿಯಿಂದ 2.50 ಕೋಟಿವರೆಗೆ ಪರಿಹಾರ ನೀಡಲಾಗುವುದು. ಒಪ್ಪಿಗೆ ಪತ್ರ ಕೊಟ್ಟವರಿಗೆ ಮೂರು ದಿನದಲ್ಲಿ ಪರಿಹಾರದ ಚೆಕ್ ವಿತರಿಸಲಾಗುವುದು ಎಂದು ಭರವಸೆ ನೀಡಿದರು. ಪರಿಹಾರದ ಬದಲು ಯೋಜನೆಯ ಸಹಭಾಗಿತ್ವ ಪಡೆಯಲು ಮುಂದೆ ಬರುವ ರೈತರಿಗೆ, ವಸತಿ ಉದ್ದೇಶಕ್ಕೆ ಅಭಿವೃದ್ಧಿಪಡಿಸುವ ಬಡಾವಣೆಗಳಲ್ಲಿ 50:50 ಅನುಪಾತದಲ್ಲಿ, ವಾಣಿಜ್ಯ ಉದ್ದೇಶಕ್ಕೆ ಅಭಿವೃದ್ಧಿಪಡಿಸುವ ಪ್ರದೇಶದಲ್ಲಿ 45:55 ಅನುಪಾತದಲ್ಲಿ ನಿವೇಶನ ಒದಗಿಸಲಾಗುವುದು. ದೇಶದಲ್ಲೇ ಮೊದಲ ಬಾರಿಗೆ ಇಂತಹದ್ದೊಂದು ಐತಿಹಾಸಿಕ ತೀರ್ಮಾನವನ್ನು ನಾವು ಕೈಗೊಂಡಿದ್ದೇವೆ ಎಂದು ತಿಳಿಸಿದರು. ಯೋಜನೆಯ ಅಂತಿಮ ಅಧಿಸೂಚನೆ ದಿನಾಂಕದಿಂದ ಪರಿಹಾರ ನೀಡುವುವರೆಗೆ ಹಾಗೂ ಅಭಿವೃದ್ಧಿಪಡಿಸಿದ ಜಾಗವನ್ನು ಮಾಲೀಕರಿಗೆ ಹಸ್ತಾಂತರ ಮಾಡುವವರಿಗೆ ಜೀವನೋಪಾಯದ ಬೆಂಬಲಕ್ಕಾಗಿ ಪ್ರತ್ಯೇಕವಾಗಿ ವಾರ್ಷಿಕ ಪರಿಹಾರ ನೀಡಲಾಗುವುದು. ವರ್ಷಕ್ಕೆ ಪ್ರತಿ ಎಕರೆ ಖುಷ್ಕಿ ಜಮೀನಿಗೆ 30 ಸಾವಿರ, ತರಿಗೆ ಜಮೀನಿಗೆ 40 ಸಾವಿರ, ಭಾಗಾಯ್ತು ಭೂಮಿಗೆ 50 ಸಾವಿರ ಭೂರಹಿತ ಕುಟುಂಬಕ್ಕೆ 25 ಸಾವಿರ ನೀಡಲಾಗುವುದು ಎಂದು ಹೇಳಿದರು. ಅಧಿಸೂಚನೆ ಬಳಿಕ 6,300 ಭೂ ಮಾಲೀಕರಿಗೆ ನೋಟಿಸ್ ನೀಡಿ ಆಕ್ಷೇಪಣೆ ಸ್ವೀಕರಿಸಲಾಗಿತ್ತು. ಈ ಪೈಕಿ ಶೇ 18.12ರಷ್ಟು ಮಂದಿ ಮಾತ್ರ ಭೂಸ್ವಾಧೀನ ಕೈಬಿಡಿ ಎಂದಿದ್ದಾರೆ.

**ಪರಿಹಾರ ಕೋರಿದ ಎಚ್‌ಡಿಕೆ ಪತ್ನಿ ಪುತ್ರ**

**ಯೋಜನಾ ಪ್ರದೇಶದ ವ್ಯಾಪ್ತಿಯ ಹೊಸೂರಿನಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಪತ್ನಿ ಅನಿತಾ ಕುಮಾರಸ್ವಾಮಿ ಮತ್ತು ಪುತ್ರ ನಿಖಿಲ್ ಕುಮಾರಸ್ವಾಮಿ 28 ಎಕರೆ ಜಮೀನು ಹೊಂದಿದ್ದಾರೆ. ಯೋಜನೆ ಬೆಂಬಲಿಸಿರುವ ಅವರು ಸೂಕ್ತ ಪರಿಹಾರ ನೀಡುವಂತೆ ಅರ್ಜಿ ಕೊಟ್ಟಿದ್ದಾರೆ. ಪರಿಹಾರದ ಮೊದಲ ಚೆಕ್ ಅನ್ನು ಮೊದಲು ಅವರಿಗೇ ಕೊಡಿ' ಎಂದು ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚಿಸಿದರು.**

ನಾನು ಕಾನೂನು ಚೌಕಟ್ಟಿನಲ್ಲೇ ಕೆಲಸ ಮಾಡಬೇಕಿದೆ. ಹಾಗಾಗಿ, ಅದು ಸಾಧ್ಯವಿಲ್ಲ ಎಂದು ಅವರನ್ನು ನಾನು ಕೈ ಮುಗಿದು ಪ್ರಾರ್ಥಿಸಿಕೊಳ್ಳುತ್ತೇನೆ ಎಂದರು.

ಕೇಂದ್ರ ವ್ಯವಹಾರ ಸ್ಥಳ ಶೂನ್ಯ ಸಂಚಾರ ದಟ್ಟಣೆ ಉಪನಗರದ 2 ಸಾವಿರ ಎಕರೆಗೂ ಹೆಚ್ಚಿನ ಪ್ರದೇಶವನ್ನು ಎಐ ಆಧಾರಿತ ಉದ್ದಿಮೆಯ ಜಾಗತಿಕ ಹೂಡಿಕೆದಾರರಿಗಾಗಿ ಮೀಸಲಿಡಲಾಗುವುದು.

ದೇಶದ ಮೊದಲ ಇಂಟಿಗ್ರೇಟೆಡ್ ಕೃತಕ ಬುದ್ಧಿಮತ್ತೆಯ ಈ ನಗರವು ಭವಿಷ್ಯದಲ್ಲಿ ಬೆಂಗಳೂರಿನ ಕೇಂದ್ರ ವ್ಯವಹಾರ ಸ್ಥಳವಾಗಲಿದೆ. ಈ ನಗರವನ್ನು ಕೆಲಸ-ವಾಸ-ಉಲ್ಲಾಸ ಪರಿಕಲ್ಪನೆಯಡಿ ವಿನ್ಯಾಸಗೊಳಿಸಲಾಗಿದೆ. ಈ ನಗರ ನಿರ್ಮಾಣದಿಂದ ವ್ಯಾಪಾರ ಹಾಗೂ ಆರ್ಥಿಕತೆಗೆ ಉತ್ತೇಜನ ಸಿಗಲಿದೆ ಎಂದು ಹೇಳಿದರು.

# ಹೊಸಪೇಟೆ ವೃತ್ತಕ್ಕೆ ಎಚ್.ಎಂ.ರೇವಣ್ಣ ಹೆಸರು ಪ್ರಸ್ತಾವ

• **ಉದಯವಾಹಿನಿ, ಮಾಗಡಿ**

ಪಟ್ಟಣದ ಹೊಸಪೇಟೆ ವೃತ್ತಕ್ಕೆ ಗ್ಯಾರಂಟಿ ಅನುಷ್ಠಾನದ ರಾಜ್ಯ ಅಧ್ಯಕ್ಷ ಎಚ್.ಎಂ ರೇವಣ್ಣ ಹೆಸರು ನಾಮಕರಣ ಮಾಡುವ ಬಗ್ಗೆ ಸಭೆಯಲ್ಲಿ ಕೆಲ ಸದಸ್ಯರು ವಿರೋಧ ವ್ಯಕ್ತಪಡಿಸಿದರು. ಸರ್ಕಾರದ ನಿಯಮ ಹಾಗೂ ಗ್ರಾಮಸ್ಥರ ತೀರ್ಮಾನದಂತೆ ಆಗಲಿ ಎಂದು ಶಾಸಕ ಎಚ್.ಸಿ.ಬಾಲಕೃಷ್ಣ ಸಲಹೆ ನೀಡಿದರು. ಪಟ್ಟಣದ ಪುರಸಭೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಪಟ್ಟಣದ ಪ್ರಮುಖ ರಸ್ತೆ ಮತ್ತು ವೃತ್ತಗಳಿಗೆ ಮಹನೀಯರ ಹೆಸರು ನಾಮಕರಣ ಮಾಡುವ ಬಗ್ಗೆ ಚರ್ಚೆ ನಡೆಯಿತು. ಎಚ್.ಎಂ.ರೇವಣ್ಣ ಅವರ ಹೆಸರು ಹೊಸಪೇಟೆ ವೃತ್ತಕ್ಕೆ ನಾಮಕರಣ ಮಾಡಬೇಕೆಂಬ ವಿಷಯದಲ್ಲಿ ಸದಸ್ಯರು ಬದುಕಿರುವ ನಾಯಕರ ಹೆಸರು ಯಾವುದೇ ವೃತ್ತ, ರಸ್ತೆಗಳಿಗೆ ನಾಮಕರಣ ಮಾಡಬಾರದೆಂಬ ನಿಯಮವಿದೆ ಎಂದು ಸಭೆಗೆ ತಿಳಿಸಿದರು. ಹಾಲಿ ಶಾಸಕರ ಹೆಸರು ತಿರುಮಲೆ ರಸ್ತೆಯಲ್ಲಿರುವ ಉದ್ಯಾನಕ್ಕೆ ನಾಮಕರಣ ಮಾಡಲಾಗಿದೆ ಎಂದು ಕೆಲ ಸದಸ್ಯರು ತಿಳಿಸಿದಾಗ, ಇದಕ್ಕೆ ಬಾಲಕೃಷ್ಣ ಪ್ರತಿಕ್ರಿಯಿಸಿ, ನನ್ನ ಹೆಸರು ಬೇಡ ಎಂದು ಹೇಳಿದ್ದೆ. ಇಂದಿಗೂ ಹೆಸರು ಮುಂದುವರಿಸುವುದು ಬೇಡ. ಉದ್ಯಾನಕ್ಕೆ ಬೇರೆ ಹೆಸರು ಸೂಚಿಸಿ ಎಂದು ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸಲಹೆ ನೀಡಿದರು.

ಸರ್ಕಾರದ ನಿಯಮ ಜತೆಗೆ ಹೊಸಪೇಟೆ ವೃತ್ತಕ್ಕೆ ಬನ್ನಿ ರಾಯಸ್ವಾಮಿ ಹೆಸರಿಡುವಂತೆ ಮನವಿ ಬಂದಿರುವ ಹಿನ್ನೆಲೆಯಲ್ಲಿ



ಉದಯವಾಹಿನಿ ಚಿತ್ರ

ಹೊಸಪೇಟೆ ಗ್ರಾಮಸ್ಥರು ಯಾವ ಹೆಸರು ಇಡಬೇಕೆಂಬುದನ್ನು ತೀರ್ಮಾನಿಸಿದ ನಂತರ ಈ ಬಗ್ಗೆ ಅಂತಿಮಗೊಳಿಸೋಣ ಎಂದು ಶಾಸಕರು ಅಭಿಪ್ರಾಯ ವ್ಯಕ್ತಪಡಿಸಿದರು. ಪಟ್ಟಣದ ಅಭಿವೃದ್ಧಿ ಹೆಸರಿನಲ್ಲಿ ಎನ್‌ಇಎಸ್ ವೃತ್ತದಲ್ಲಿರುವ ನಾಡಪ್ರಭು ಕೆಂಪೇಗೌಡರ ಪ್ರತಿಮೆ ಸ್ಥಳಾಂತರಕ್ಕೆ ಮುಂದಾಗಿರುವುದು ಸರಿಯಾದ ಕ್ರಮವಲ್ಲ ಎಂದು ಸದಸ್ಯ ಎಂ.ಎನ್.ಮಂಜುನಾಥ್ ಆಕ್ಷೇಪಿಸಿದರು.

ಪುರಸಭೆ ಪಕ್ಕದಲ್ಲಿರುವ ಶಿಕ್ಷಣಾಧಿಕಾರಿ ಕಚೇರಿಯನ್ನು ಕೂಡ ಎನ್.ಇ.ಎಸ್ ವೃತ್ತಕ್ಕೆ ಸ್ಥಳಾಂತರಿಸಲಾಗುತ್ತಿದೆ. ಆ ಜಾಗದಲ್ಲಿ ಅತ್ಯುತ್ತಮವಾದ ಮಾಲ್ ನಿರ್ಮಿಸಿ ಪುರಸಭೆಗೆ ಹೆಚ್ಚು ಆದಾಯ ತರುವ ಉದ್ದೇಶ ಹೊಂದಲಾಗಿದೆ. ಐಡಿಎಸ್‌ಎಂಸಿ ಬಡಾವಣೆ ಕೆಲ ನಿವೇಶನ ಮತ್ತು ಜ್ಯೋತಿನಗರದ ಕೆಲ ನಿವೇಶನಗಳನ್ನು ಸರ್ಕಾರ ರದ್ದು ಮಾಡಿದ್ದು ಅವುಗಳನ್ನು ಹರಾಜಿನಲ್ಲಿಟ್ಟು ಬರುವ ಹಣದಲ್ಲಿ ಪುರಸಭೆ ಆದಾಯ ಹೆಚ್ಚಾಗಲಿದೆ ಎಂದು ಸದಸ್ಯರ ಗಮನಕ್ಕೆ ಶಾಸಕರು ತಂದರು. ಸದಸ್ಯರಾದ ಅಶ್ವಥ್, ಎಚ್.ಜೆ.ಪುರುಷೋತ್ತಮ್ ಮಾತನಾಡಿದರು.

# ಹಳೆ ನಕ್ಷೆಯಂತೆಯೇ ಮೇಲ್ಸೇತುವೆ ನಿರ್ಮಾಣ

• **ಉದಯವಾಹಿನಿ, ನಂಜನಗೂಡು**

ನಗರದ ರಾಷ್ಟ್ರಪತಿ ರಸ್ತೆಯ ಭಾರ್ಗವಿ ಚಿತ್ರ ಮಂದಿರದ ಬಳಿಯ ರೈಲ್ವೆ ಲೆವಲ್ ಕ್ರಾಸಿಂಗ್ ಬದಲಾಗಿ, ಇನ್ನು ಎರಡು ತಿಂಗಳಲ್ಲಿ ರೈಲ್ವೆ ಮೇಲ್ವೇತುವೆ ಕಾಮಗಾರಿ ಆರಂಭವಾಗಲಿದೆ. 2026ರಲ್ಲಿ ಪೂರ್ಣಗೊಂಡು ಸೇವೆಗೆ ಸಿದ್ಧವಾಗಲಿದೆ ಎಂದು ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು. ಬೆಳಿಗ್ಗೆ ಸ್ಥಳ ಪರಿಶೀಲಿಸಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಮೇಲ್ವೇತುವೆ ವಿಚಾರವಾ ಜನರ ಅಹವಾಲು ಕೇಳಿದ್ದೇನೆ. ಮೊದಲಿನ ನಕ್ಷೆಯಂತೆ ನೇರವಾಗಿ ರಾಷ್ಟ್ರಪತಿ ರಸ್ತೆಯ 4ನೇ ತಿರುವಿನಿಂದ ಆರಂಭಗೊಂಡು, ಬ್ರಾಹ್ಮಣ ಸಂಘದ ಕಚೇರಿ ಮುಂಭಾಗ ಮುಕ್ತಾಯಗೊಳ್ಳಲಿದೆ. ನಗರದ ಜನತೆಯ ಹಲವಾರು ವರ್ಷದ ಬೇಡಿಕೆ ಈಡೇರಿದಂತಾಗುತ್ತದೆ ಎಂದರು. ನಗರದ ಮಹತ್ಮಗಾಂಧಿ ರಸ್ತೆಯಲ್ಲಿ ಈ ಹಿಂದೆ ರೈಲ್ವೆ ಕೆಳಸೇತುವೆ ನಿರ್ಮಿಸಿ ತೊಂದರೆ ಉಂಟಾಗಿರುವ ಬಗ್ಗೆ ಅರಿವಿದೆ. ಶೀಘ್ರವೇ ಅಧಿಕಾರಿಗಳ ತಂಡವನ್ನು ಕಳುಹಿಸಿ ದುರಸ್ತಿಗೆ ಕ್ರಮ ವಹಿಸಲಾಗುವುದು ಎಂದರು. ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ವಿದ್ಯಾಸಾಗರ್ ಮಾತನಾಡಿ, ಹಳೇ ನಕ್ಷೆಯಂತೆಯೇ ಯೋಜನೆ ಜಾರಿಗೊಳ್ಳಬೇಕು. ವಾಣಿಜ್ಯ ಕಟ್ಟಡಗಳನ್ನು ಉಳಿಸಿಕೊಳ್ಳಲು ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಹೊಸ ನಕ್ಷೆಗೆ ಒತ್ತಡ ಹೇರುತ್ತಿವೆ. ಮಾನ್ಯ ಮಾಡಿದರೆ ಹೋರಾಟ ಎದುರಿಸಬೇಕಾಗುತ್ತದೆ ಎಂದರು.



ಉದಯವಾಹಿನಿ ಚಿತ್ರ

**ಉದ್ರಿಕ್ತ ವಾತಾವರಣ**

**ಸಚಿವರವನ್ನು ಸ್ವಾಗತಿಸಲು ಸಿದ್ದಗೊಂಡಿದ್ದ ವೇದಿಕೆ ಸಮೀಪ ಮೇಲ್ವೇತುವೆಯ ಉದ್ದೇಶಿತ ನಕ್ಷೆಯಲ್ಲದೆ ಪ್ರದರ್ಶಿಸಲಾಗಿದ್ದ ಮತ್ತೊಂದು ನಕ್ಷೆಯನ್ನು ತೆಗೆಯುವಂತೆ ಆಗ್ರಹಿಸಿ ಸಾರ್ವಜನಿಕರು ರೈಲ್ವೆ ಅಧಿಕಾರಿಗಳು ಹಾಗೂ ಪೊಲೀಸರೊಂದಿಗೆ ಮಾತಿನ ಚಕಮಕಿ ನಡೆಸಿದರು. ಇದೇ ವೇಳೆ ಅನಧಿಕೃತ ನಕ್ಷೆಯನ್ನು ಕಿತ್ತು ಎಸೆದರು. ಕೆಲ ಕಾಲ ಸ್ಥಳದಲ್ಲಿ ಉದ್ರಿಕ್ತ ವಾತಾವರಣ ನಿರ್ಮಾಣವಾಗಿತ್ತು.**

# ಭವಿಷ್ಯದ ಬಗ್ಗೆ ಹತಾಶೆ ಬೇಡ: ಡಾ.ಸಿ.ಆರ್.ಚಂದ್ರಶೇಖರ್

• **ಉದಯವಾಹಿನಿ, ತುಮಕೂರು**

ಭವಿಷ್ಯದ ಬಗ್ಗೆ ಹತಾಶೆ ತಳೆದು ಸಾಕಷ್ಟು ಮಂದಿ ಯುವಕರು ಆತ್ಮಹತ್ಯೆಗೆ ಶರಣಾಗುತ್ತಿರುವುದು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿದೆ. ಹತಾಶೆ ಬಿಟ್ಟು ಉತ್ಸಾಹದಿಂದ ಜೀವನ ಅನುಭವಿಸುವಂತೆ ಮನೋವೈದ್ಯ ಡಾ.ಸಿ.ಆರ್.ಚಂದ್ರಶೇಖರ್ ಸಲಹೆ ಮಾಡಿದರು. ತುಮಕೂರು ವಿಶ್ವವಿದ್ಯಾಲಯದಲ್ಲಿ ಬುಧವಾರ ಏರ್ಪಡಿಸಿದ್ದ ಪ್ರೇರಣಾ ಉಪನ್ಯಾಸ ಕಾರ್ಯಕ್ರಮದಲ್ಲಿ ಯುವಜನತೆ ಮತ್ತು ಮಾನಸಿಕ ಆರೋಗ್ಯ ಕುರಿತು ಮಾತನಾಡಿದರು.

ಯುವಕರು ಆತ್ಮಹತ್ಯೆಯ ಯೋಚನೆ ಬಂದಾಗ ಹೆತ್ತವರ ಶ್ರಮವನ್ನು ನೆನಪಿಸಿಕೊಳ್ಳಬೇಕು. ಸಮಸ್ಯೆಗಳು ಎದುರಾದಾಗ ಪರಿಹಾರದ ಬಗ್ಗೆ ಯೋಚಿಸಬೇಕು. ಸರಿಯಾದ ಪ್ರಯತ್ನ, ದೃಢ ನಿರ್ಧಾರದಿಂದ ಯಶಸ್ಸು ಕಾಣಬಹುದು. ಇತರರನ್ನು ಅನುಸರಿಸುವ ಬದಲು ನಿಮ್ಮ ವ್ಯಕ್ತಿತ್ವವನ್ನು ನೀವೇ



ಉದಯವಾಹಿನಿ ಚಿತ್ರ

ರೂಪಿಸಿಕೊಳ್ಳಬೇಕು. ಇನ್ನೊಬ್ಬರ ನೆರವಿಗಾಗಿ ಕಾಯದೆ ಸ್ವಸಾಮರ್ಥ್ಯದಿಂದ ಬದುಕು ರೂಪಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಮನರಂಜನೆಗಾಗಿ ಮೊಬೈಲ್ ಬಳಸುವ ಬದಲು, ವಿದ್ಯಾಭ್ಯಾಸ, ಜ್ಞಾನಾರ್ಜನೆಗೆ ಬಳಸಿ ಕೊಳ್ಳಬಹುದು. ಅತಿಯಾದ ಮೊಬೈಲ್ ಬಳಕೆ ಕಡಿಮೆ ಮಾಡಿ, ಸ್ನೇಹಿತರೊಂದಿಗೆ ಮುಖಾಮುಖಿ ಸಂವಹನ ಬೆಳೆಸಿಕೊಳ್ಳಿ. ದ್ವೇಷ, ದುಃಖ, ಕೋಪ, ಭಯದಂತಹ ನಕಾರಾತ್ಮಕ ಭಾವನೆಗಳನ್ನು ಮನಸ್ಸಿನಿಂದ ತೆಗೆದುಹಾಕಬೇಕು.

> **ಪದವಿ ಪಡೆದರೂ ಸಾಮಾನ್ಯ ಜ್ಞಾನ, ಕೌಶಲಗಳ ಕೊರತೆ ಇರುತ್ತದೆ. ಇದರಿಂದ ಉದ್ಯೋಗ ಸಂದರ್ಶನಗಳಲ್ಲಿ ವಿಫಲರಾಗುತ್ತಿದ್ದಾರೆ. ಕಾರಣವನ್ನು ಅರ್ಥಮಾಡಿ ಕೊಂಡು, ಸರಿಪಡಿಸಿಕೊಳ್ಳದೆ ತಮಗೆ ಭವಿಷ್ಯವಿಲ್ಲವೆಂದು ಕೊರಗುವುದರಲ್ಲಿ ಅರ್ಥವಿಲ್ಲ, ಪಾವಗಡದ ರಾಮಕೃಷ್ಣ ಸೇವಾಶ್ರಮದ ಅಧ್ಯಕ್ಷ ಜಪಾನಂದ ಸ್ವಾಮೀಜಿ, ವಿದ್ಯಾರ್ಥಿಗಳು ಇತರರನ್ನು ಅನುಸರಿಸುತ್ತ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳಬಾರದು. ಸ್ವಂತಿಕೆ, ದೃಢ ಸಂಕಲ್ಪದಿಂದ ಮುನ್ನಡೆಯಬೇಕು ಎಂದರು.**

ಪ್ರೀತಿ ಹಂಚಿ, ಸ್ನೇಹ ಪಡೆದರೆ ಹತಾಶೆಯಿಂದ ದೂರ ಇರಬಹುದು ಎಂದು ತಿಳಿಸಿದರು.

# ಎಲ್ಲೆಂದರಲ್ಲಿ ಮಲ ತ್ಯಾಜ್ಯ ವಿಲೇವಾರಿ ಅಪಾಯಕಾರಿ

• **ಉದಯವಾಹಿನಿ, ಪಾಂಡವಪುರ**

ತುಂಬಿದ ಶೌಚಗುಂಡಿಗಳನ್ನು ಯಾಂತ್ರಿಕ ವಿಧಾನದ ಮೂಲಕ ತೆರವುಗೊಳಿಸಿ ಎಲ್ಲೆಂದರಲ್ಲಿ ವಿಲೇವಾರಿ ಮಾಡಲಾಗುತ್ತಿರುವುದು ಅಪಾಯಕಾರಿಯಾದ ಕ್ರಮವಾಗಿದೆ ಎಂದು ಜಿ.ಪಂ.ಸಿಇಒ ಕೆ.ಆರ್.ನಂದಿನಿ ಹೇಳಿದರು. ತಾಲ್ಲೂಕಿನ ಕೆ.ಬೆಟ್ಟಹಳ್ಳಿ ಗ್ರಾ.ಪಂ. ವ್ಯಾಪ್ತಿಯ ಜಗಶೆಟ್ಟಹಳ್ಳಿ ಗ್ರಾಮದಲ್ಲಿ ನಿರ್ಮಾಣವಾಗಿರುವ ಮಲ ತ್ಯಾಜ್ಯ ನಿರ್ವಹಣಾ ಘಟಕ ಕಾಮಗಾರಿಯನ್ನು ಪರಿಶೀಲಿಸಿ ಅವರು ಮಾತನಾಡಿದರು. ಮಲ ತ್ಯಾಜ್ಯವನ್ನು ವೈಜ್ಞಾನಿಕವಾಗಿ ನಿರ್ವಹಣೆ ಮಾಡಬೇಕು. ತ್ಯಾಜ್ಯ ನಿರ್ವಹಣಾ ಘಟಕವನ್ನು ಶೀಘ್ರ ಹಸ್ತಾಂತರ ಪಡೆದು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಕಾಮಗಾರಿಯ ಬಗ್ಗೆ ಪಿಡಿಒ ಮತ್ತು ಕೆಆರ್‌ಐಡಿಎಲ್ ಅಧಿಕಾರಿಗಳಿಂದ ಮಾಹಿತಿ ಪಡೆದ ಜಿ.ಪಂ.ಸಿಇಒ ನಂದಿನಿ ಅವರು ನಿರ್ವಹಣೆಯನ್ನು ಸರಿಯಾಗಿ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಪಾಂಡವಪುರ ಪಟ್ಟಣದ ತಾಲ್ಲೂಕು ಪಂಚಾಯಿತಿ ಕಚೇರಿ ಆವರಣದಲ್ಲಿರುವ ಸಕ್ಕಿಂಗ್



ಉದಯವಾಹಿನಿ ಚಿತ್ರ

ಯಂತ್ರವನ್ನು ಗ್ರಾ.ಪಂ.ಮಟ್ಟದ ಒಕ್ಕೂಟಕ್ಕೆ ಹಸ್ತಾಂತರ ಮಾಡಿ ಉದ್ಯಮದ ಮಾದರಿಯಲ್ಲಿ ನಿರ್ವಹಣೆ ಮಾಡಲು ಕ್ರಮವಹಿಸುವಂತೆ ತಾ.ಪಂ.ಇಒ ವೀಣಾ ಅವರಿಗೆ ಸೂಚನೆ ನೀಡಿದರು. ಮಲ ತ್ಯಾಜ್ಯ ನಿರ್ವಹಣಾ ಘಟಕಗಳನ್ನು ಕೆಆರ್‌ಐಡಿಎಲ್ ನಿರ್ವಹಿಸುತ್ತಿದ್ದು, ಎರಡು ಘಟಕಗಳನ್ನು ಈಗಾಗಲೇ ಪೂರ್ಣಗೊಳಿಸಿದೆ. ಉಳಿದ ಘಟಕಗಳ ಕಾಮಗಾರಿ ಪ್ರಗತಿಯಲ್ಲಿದ್ದು, ಶೀಘ್ರ ಪೂರ್ಣಗೊಳಿಸುವುದಾಗಿ ಕೆಆರ್ ಐಡಿಎಲ್ ಇಇ ಸೋಮಶೇಖರ್ ಅವರು ಜಿ.ಪಂ.ಸಿಇಒ ನಂದಿನಿ ಅವರಿಗೆ ಮಾಹಿತಿ ನೀಡಿದರು.

# ಎಡಮುರಿ ಫಾಲ್ಸ್: ನೀರಿನಲ್ಲಿ ಮುಳುಗಿ ಬೆಂಗಳೂರಿನ ಇಬ್ಬರು ವಿದ್ಯಾರ್ಥಿಗಳ ಸಾವು

• **ಉದಯವಾಹಿನಿ, ಶ್ರೀರಂಗಪಟ್ಟಣ**

ತಾಲ್ಲೂಕಿನ ಬೆಳಗೊಳ ಸಮೀಪದ ಎಡಮುರಿ ಫಾಲ್ಸ್ ಪ್ರಕೃತಿ ತಾಣದಲ್ಲಿ, ಕಾವೇರಿ ನದಿಯಲ್ಲಿ ಮುಳುಗಿ ಬೆಂಗಳೂರಿನ ಇಬ್ಬರು ವಿದ್ಯಾರ್ಥಿಗಳು ಮೃತಪಟ್ಟಿರುವ ಘಟನೆ ಶುಕ್ರವಾರ ನಡೆದಿದೆ. ಬೆಂಗಳೂರಿನ ಡಾನ್ ಬಾಸ್ಕೋ ಕಾಲೇಜಿನ ಬಿಬಿಎ ವಿದ್ಯಾರ್ಥಿಗಳಾದ ವಿಲಿಯಂ ಶ್ಯಾಂ (21) ಮತ್ತು ವೆಂಕಟೇಶ್ (21) ಮೃತಪಟ್ಟಿದ್ದಾರೆ. ಅಗ್ನಿಶಾಮಕ ಠಾಣಾಧಿಕಾರಿ ಅಂಬರೀಶ್ ಉಪ್ಪಾರ್ ನೇತೃತ್ವದ ತಂಡ ಮಧ್ಯಾಹ್ನದ ವೇಳೆಗೆ ಶವಗಳನ್ನು ನದಿಯಿಂದ ಮೇಲೆ ತೆಗೆದಿದ್ದು, ವಾರಸುದಾರರಿಗೆ ಒಪ್ಪಿಸಲಾಯಿತು.

ಬೆಂಗಳೂರಿನಿಂದ 7 ಮಂದಿ ವಿದ್ಯಾರ್ಥಿಗಳ ತಂಡ ವಿಹಾರಕ್ಕೆಂದು ಎಡಮುರಿ ಫಾಲ್‌ಗೆ ಬಂದಿತ್ತು. ಈಜಲು



ಉದಯವಾಹಿನಿ ಚಿತ್ರ

ನದಿಗೆ ಇಳಿದ ವೇಳೆ ವಿಲಿಯಂ ಶ್ಯಾಂ ಮತ್ತು ವೆಂಕಟೇಶ್ ಸುಳಿಗೆ ಸಿಕ್ಕಿ ನೀರಿನಲ್ಲಿ ಮುಳುಗಿದರು. ಅವರನ್ನು ರಕ್ಷಿಸಲು ಸಹಪಾಠಿಗಳು, ಸ್ಥಳೀಯರು ನಡೆಸಿದ ಪ್ರಯತ್ನ ವಿಫಲವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕೆಆರ್‌ಎಸ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಸ್ಪೃಶ್ಯತೆ ಅಭಿವೃದ್ಧಿಗೆ ಮಾರಕ: ಬಸವಣ್ಣ ಮೂಕಹಳ್ಳಿ

• **ಉದಯವಾಹಿನಿ, ಚಾಮರಾಜನಗರ**

ಚಾತುರ್ವರ್ಣ, ವರ್ಣ ವ್ಯವಸ್ಥೆಯಿಂದ ಹುಟ್ಟಿದ ಅಸ್ಪೃಶ್ಯತೆಯು ಇಂದಿಗೂ ದೇಶದ ಅಭಿವೃದ್ಧಿಗೆ ಮಾರಕವಾಗಿದೆ ಎಂದು ಪ್ರಾಧ್ಯಾಪಕ ಬಸವಣ್ಣ ಮೂಕಹಳ್ಳಿ ಅಭಿಪ್ರಾಯಪಟ್ಟರು.

ಬೇಡರಪುರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ನಾವು ಮನುಜರು- ಗಾಂಧಿ ಭಾರತ' ಪರಿಕಲ್ಪನೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ, ಸಾಮಾಜಿಕ ಅನಿಷ್ಠ ಪದ್ಧತಿಯಾಗಿರುವ ಅಸ್ಪೃಶ್ಯತೆಯನ್ನು ಅಳಿಸಿ ಹಾಕಲು ಶತಮಾನಗಳ ಹಿಂದೆಯೇ ಪ್ರಯತ್ನಗಳು ನಡೆದಿವೆ. ಬಸವಣ್ಣ, ಗಾಂಧೀಜಿ, ಅಂಬೇಡ್ಕರ್ ನಿರಂತರವಾಗಿ ಹೋರಾಟ ಮಾಡಿದ್ದಾರೆ ಎಂದರು. ಗಾಂಧೀಜಿ ಶೋಷಿತ ಸಮುದಾಯಗಳನ್ನು ಹರಿಜನ ಎಂದು ಸಂಬೋಧಿಸಿ



ಉದಯವಾಹಿನಿ ಚಿತ್ರ

ಸಮಾಜ ಇವರನ್ನು ದೇವರ ಮಕ್ಕಳು ಎಂದು ಭಾವಿಸುವಂತೆ ಅಧ್ಯಾತ್ಮದ ನೆಲೆಯಲ್ಲಿ ವಿಶ್ಲೇಷಣೆ ಮಾಡಿದರು. ಅಸ್ಪೃಶ್ಯತೆಯನ್ನು ಅಳಿಸಲು ಹರಿಜನ ಸೇವಾ ಸಂಘಗಳನ್ನು ಸ್ಥಾಪಿಸಿ ಹಲವು ಕಾರ್ಯಕ್ರಮಗಳನ್ನು ರೂಪಿಸಿದರು. ಹರಿಜನ ಪತ್ರಿಕೆ ಆರಂಭಿಸಿ ಶೋಷಿತರ ಪರ ಹೋರಾಟ ಮಾಡಿದರು. ಅಸ್ಪೃಶ್ಯತೆ ಹಿಂದೂ ಧರ್ಮಕ್ಕೆ ಅಂಟಿದ ಕಳಂಕ ಎಂದು ಬಲವಾಗಿ ನಂಬಿದ್ದರು ಎಂದರು.

ಬಸವಾದಿ ಶರಣರಿಂದ ಹಿಡಿದು ಇಲ್ಲಿಯವರೆಗೂ ಹಲವು ಮಹನೀಯರು ಅಸ್ಪೃಶ್ಯತೆಯನ್ನು ಅಳಿಸಲು ಹೋರಾಟ ಮಾಡಿದ್ದರೂ ಸಾಮಾಜಿಕ ಪಿಡುಗು ನಿರ್ಮೂಲನೆಯಾಗದಿರುವುದು ವಿಪರ್ಯಾಸ. ಸ್ವತಃ ಅಸ್ಪೃಶ್ಯತೆಯ ನೋವುಂಡ ಅಂಬೇಡ್ಕರ್ ಜಾತೀಯತೆಯ ವಿನಾಶವಾಗದ ಹೊರತು ಅಸ್ಪೃಶ್ಯತೆ ನಿರ್ಮೂಲನೆ ಸಾಧ್ಯವಿಲ್ಲ ಎಂದು ಬಲವಾಗಿ ನಂಬಿದ್ದರು.

ಅಸ್ಪೃಶ್ಯತೆ ಹೋಗಲಾಡಿಸಲು ಸಂವಿಧಾನ ರಚನೆಯ ಸಂದರ್ಭ 17ನೇ ವಿಧಿಯನ್ನು ರೂಪಿಸಿದ ಅಂಬೇಡ್ಕರ್ ಶೋಷಿತರ ಪಾಲಿನ ಬೆಳಕಾಗಿದ್ದಾರೆ. ಅಸ್ಪೃಶ್ಯತೆ ವಿರೋಧಿ ಕಾನೂನು ಜಾರಿಯಲ್ಲಿದ್ದು, ಉಲ್ಲಂಘಿಸುವುದು ಶಿಕ್ಷಾರ್ಹ ಅಪರಾಧ. ಕಾನೂನುಗಳ ಬಗ್ಗೆ ಜನರು ಜಾಗೃತವಾಗಬೇಕು ಎಂದರು.

## ಕೆ.ಸಿ.ವ್ಯಾಲಿ 2ನೇ ಹಂತದಡಿ ಕೋಲಾರ ತಾಲ್ಲೂಕಿನ 30 ಕೆರೆ ತುಂಬಿಸುವ ಯೋಜನೆಗೆ ಸಿದ್ದರಾಮಯ್ಯ ಚಾಲನೆ

# ವರ್ಷಾಂತ್ಯಕ್ಕೆ 272 ಕೆರೆಗಳಿಗೆ ನೀರು

• **ಉದಯವಾಹಿನಿ, ಕೋಲಾರ**

ಬಯಲು ಸೀಮೆಯ ಜಿಲ್ಲೆಗಳ ಅಂತರ್ಜಲ ವೃದ್ಧಿಗೆ ಪ್ರಾರಂಭಿಸಲಾಗಿರುವ ಕೆ.ಸಿ.ವ್ಯಾಲಿ 2ನೇ ಹಂತದ ಯೋಜನೆಯಡಿ ಲಕ್ಷ್ಮೀಸಾಗರ ಪಂಪ್ ಹೌಸ್‌ನಿಂದ ಕೋಲಾರ ತಾಲ್ಲೂಕಿನ 30 ಕೆರೆಗಳಿಗೆ ನೀರು ತುಂಬಿಸುವ ಯೋಜನೆ, ಪಂಪಿಂಗ್ ಕೇಂದ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನ ತಮ್ಮ ಕಾವೇರಿ ನಿವಾಸದಲ್ಲಿ ವರ್ಚುವಲ್ ವೇದಿಕೆ ಮೂಲಕ ಚಾಲನೆ ನೀಡಿದರು. ಕೋಲಾರ ಜಿಲ್ಲಾಡಳಿತ, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯು ಜಂಟಿಯಾಗಿ ಆಯೋಜಿಸಿದ್ದ ಈ ಕಾರ್ಯಕ್ರಮದ ನೇರ ಪ್ರಸಾರವನ್ನು ತಾಲ್ಲೂಕಿನ ನರಸಾಪುರ ಹೋಬಳಿಯ ಲಕ್ಷ್ಮೀಸಾಗರ ಗ್ರಾಮದಲ್ಲಿನ ಕೆ.ಸಿ.ವ್ಯಾಲಿ ಯೋಜನೆಯ ಐದನೇ ಪಂಪಿಂಗ್ ಕೇಂದ್ರದ ಬಳಿ ಹಮ್ಮಿಕೊಳ್ಳಲಾಗಿತ್ತು. ಚಾಲನೆ ನೀಡಿ ಮಾತನಾಡಿದ ಸಿದ್ದರಾಮಯ್ಯ, ಕೆ.ಸಿ.ವ್ಯಾಲಿ ಎರಡನೇ ಹಂತದ ಯೋಜನೆ ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳ್ಳಲಿದ್ದು, 272 ಕೆರೆಗಳನ್ನು ತುಂಬಿಸಲಾಗುವುದು.

ಕೋಲಾರ, ಚಿಕ್ಕಬಳ್ಳಾಪುರ ಭಾಗದಲ್ಲಿ ನದಿಗಳಲಿಲ್ಲದೆ ಇರುವುದರಿಂದ ಯೋಜನೆಯಿಂದ ರೈತರಿಗೆ ಅನುಕೂಲವಾಗಲಿದೆ. 446 ಕೋಟಿಗಳ ವೆಚ್ಚದಲ್ಲಿ ಎರಡನೇ ಹಂತದ ಯೋಜನೆ ಕೈಗೊಳ್ಳಲಾಗಿದೆ. ಕೋಲಾರ ಜಿಲ್ಲೆಯ 222 ಕೆರೆಗಳು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ 50 ಕೆರೆಗಳನ್ನು ತುಂಬಿಸಲಾಗುತ್ತದೆ ಎಂದರು.



ಉದಯವಾಹಿನಿ ಚಿತ್ರ

**ಎರಡನೇ ಹಂತದ ಯೋಜನೆ**

ಬೆಂಗಳೂರಿನ ಸುತ್ತಮುತ್ತಲಿನ ಬಯಲು ಸೀಮೆಯ ಜಿಲ್ಲೆಗಳ ಅಂತರ್ಜಲ ಅಭಿವೃದ್ಧಿಗೆ ನಾವು ಹಿಂದಿನ ಸಲ ಅಧಿಕಾರದಲ್ಲಿದ್ದಾಗ ಕೈಗೊಂಡ ಯೋಜನೆಗಳು ಈ ಭಾಗದ ರೈತರ ಜೀವನ ಮಟ್ಟವನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಪ್ರಮುಖ ಹೆಜ್ಜೆಯಾಗಿದೆ.

ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟದಲ್ಲಿ ಗಣನೀಯ ಏರಿಕೆಯಾಗಿದೆ. ನೀರಿನ ಅಭಾವದಿಂದ ಬಳಲುತ್ತಿದ್ದ ಜನರ ಆರ್ಥಿಕ ಹಾಗೂ ಸಾಮಾಜಿಕ ಮಟ್ಟದಲ್ಲಿ ಅಭಿವೃದ್ಧಿಯಾಗಿದೆ ಎಂದು ಹೇಳಿದರು. ಮೊದಲನೇ ಹಂತದಲ್ಲಿ ತ್ಯಾಜ್ಯ ನೀರನ್ನು ಸಂಸ್ಕರಿಸಿ ಕೋಲಾರ –ಚಿಕ್ಕಬಳ್ಳಾಪುರ ಕೆರೆಗಳನ್ನು ಯಶಸ್ವಿಯಾಗಿ ತುಂಬಿಸಲಾಗಿದೆ. ಈ ನೀರನ್ನು ಕುಡಿಯಲು ಬಳಸುವುದಿಲ್ಲ. ಕೆರೆ ತುಂಬಿಸಿದ ವ್ಯಾಪ್ತಿಯಲ್ಲಿ ಅಂತರ್ಜಲ ಮಟ್ಟ ಉತ್ತಮಗೊಂಡಿದೆ ಎಂದು ನುಡಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, 272 ಕೆರೆಗಳಿಗೆ ನೀರನ್ನು ತುಂಬಿಸುವ ಯೋಜನೆ ರೂಪಿಸುವ ಮೂಲಕ ನಮ್ಮ ಕಾಂಗ್ರೆಸ್ ಸರ್ಕಾರ ಬಯಲುಸೀಮೆಯ ಜನರ ಹಿತ ಕಾಪಾಡಲು ಮುಂದಡಿ ಇಟ್ಟಿದೆ. ಆ ಜಿಲ್ಲೆಗಳಲ್ಲಿ ಅಂತರ್ಜಲ ವೃದ್ಧಿಯಾಗಿದೆ ಎಂದರು. ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜು ಮಾತನಾಡಿ, ಪ್ರಸ್ತುತ ಈ ಯೋಜನೆಯಲ್ಲಿ 9 ಪಂಪಿಂಗ್ ಸ್ಟೇಷನ್‌ಗಳನ್ನು ನಿರ್ಮಿಸಲು ಯೋಜಿಸಲಾಗಿದೆ. ಲಕ್ಷ್ಮೀಸಾಗರದ 5 ನೇ ಪಂಪಿಂಗ್ ಕೇಂದ್ರದಿಂದ ಕೋಲಾರ ತಾಲ್ಲೂಕಿನ 30 ಕೆರೆಗಳಿಗೆ ನೀರು ತುಂಬಿಸುವ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಇನ್ನುಳಿದ ಪಂಪಿಂಗ್ ಕೇಂದ್ರಗಳನ್ನು ಪ್ರಸಕ್ತ ಸಾಲಿನ ಅಂತ್ಯದೊಳಗೆ ಪೂರ್ಣಗೊಳಿಸಿ ಪ್ರಾಯೋಗಿಕವಾಗಿ ಚಾಲನೆ ನೀಡಲಾಗುವುದು ಎಂದು ತಿಳಿಸಿದರು.

> **ಕೆ.ಸಿ.ವ್ಯಾಲಿ ಯೋಜನೆ ಬಗ್ಗೆ ಅಪಪ್ರಚಾರ ಮಾಡುತ್ತಿರುವ ಜೆಡಿಎಸ್‌ನವರು ಒಂದು ವಿಚಾರ ಹೇಳಿದರೆ ಕೋಲಾರ, ಚಿಕ್ಕಬಳ್ಳಾಪುರ ಶಾಸಕರು ಯೋಜನೆ ಪರವಾಗಿ ಹತ್ತು ವಿಚಾರ ಹೇಳಬೇಕು.**
>
> **-ಸಿದ್ದರಾಮಯ್ಯ, ಮುಖ್ಯಮಂತ್ರಿ**

**440 ಎಂಎಲ್‌ಡಿ ನೀರು ಹರಿಸಿ:** ಕೆ.ಸಿ.ವ್ಯಾಲಿ ಸಂಸ್ಕರಣಾ ಘಟಕಗಳಿಂದ 440 ಎಂಎಲ್‌ಡಿ ನೀರು ಹರಿಸಬೇಕು. ಈಗ ಸರಾಸರಿ 290 ಎಂಎಲ್‌ಡಿ ನೀರು ಲಭ್ಯವಾಗು ತ್ತಿದೆ. ಇನ್ನುಳಿದ 150 ಎಂಎಲ್‌ಡಿ ನೀರು ಬೇಗ ಹರಿಸಿ ಎಂದು ಸಿಎಂ, ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಯಾವೆಲ್ಲ ಕೆರೆಗಳಿಗೆ?**

**ಮಲ್ಲಸಂದ್ರ, ರಾಮಸಂದ್ರ, ಚಾಕರಸನಹಳ್ಳಿ, ಬೆಳಮಾರನಹಳ್ಳಿ, ಗುಟ್ಟಹಳ್ಳಿ, ಕೊರಟಿಮಲ್ಲಂಡಹಳ್ಳಿ-1 ಕೊರಟಿಮಲ್ಲಂಡ ಹಳ್ಳಿ-2, ಮರಿಯಪ್ಪನಹಳ್ಳಿ, ಕಾಮದೇನಹಳ್ಳಿ, ಮಂಚಾಂಡಹಳ್ಳಿ, ವಿಶ್ವನಾಥಪುರ ಕೆರೆ, ಖಾಜಿಕಲ್ಲಹಳ್ಳಿ, ನಾಗಾಲ, ಅಚ್ಚಟನ ಹಳ್ಳಿ-1, ಅಚ್ಚಟನಹಳ್ಳಿ-2, ಮಂಜಲಿ ಕೆರೆ-1, ಮಂಜಲಿ ಕೆರೆ-2, ಕಲ್ಯಾ, ಚೊಕ್ಕಾಪುರ-1, ಚೊಕ್ಕಾಪುರ-2, ಚೊಕ್ಕಾಪುರ-3, ಚನ್ನಪ್ಪನಹಳ್ಳಿ, ಪುರಹಳ್ಳಿ ಕೆರೆ-1, ಪುರಹಳ್ಳಿ ಕೆರೆ-2, ಮೇಡಿಹಳ್ಳಿ ಕೆರೆ-1, ಮೇಡಿಹಳ್ಳ ಕೆರೆ-2, ನಾಗನಲ್ಲ, ಬೂಸನಹಳ್ಳಿ, ಉರುಗಿಲಿ ದಿನ್ನಹಳ್ಳಿ ಕೆರೆ.**

**ಶಾಸಕರಿಗೆ ಡಿಸಿಎಂ ಸೂಚನೆ:** ಕೋಲಾರ ಹಾಗೂ ಚಿಕ್ಕ ಬಳ್ಳಾಪುರ ಭಾಗದ ಕಾಂಗ್ರೆಸ್ ಶಾಸಕರು ಕೆ.ಸಿ.ವ್ಯಾಲಿ ವ್ಯಾಪ್ತಿಯ ಕೆರೆ ಬಳಿ ಹೋಗಿ ಜನರನ್ನು ಸೇರಿಸಿ ಕಾರ್ಯಕ್ರಮ ಮಾಡಿ ಜಾಗೃತಿ ಮೂಡಿಸಬೇಕು. ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಯಕ್ರಮ ಹಮ್ಮಿಕೊಂಡು ಯೋಜನೆಯ ಅನುಕೂಲಗಳನ್ನು ತಿಳಿಸಬೇಕು ಎಂದು ಡಿ.ಕೆ.ಶಿವಕುಮಾರ್ ಸೂಚನೆ ನೀಡಿದರು. ಕೆ.ಸಿ.ವ್ಯಾಲಿ ಎರಡನೇ ಹಂತದ ಯೋಜನೆಯ ಐದನೇ ಪಂಪಿಂಗ್ ಕೇಂದ್ರವಾದ ಲಕ್ಷ್ಮೀಸಾಗರದ ಪಂಪ್‌ಹೌಸ್‌ನಿಂದ 5.28 ದಶ ಲಕ್ಷ ಲೀಟರ್ ನೀರನ್ನು ಪಂಪ್ ಮಾಡಿ 11 ಕೆರೆ ತುಂಬಿಸುವುದು, 1 ಎಂಎಲ್‌ಡಿ ನೀರನ್ನು ಏರು ಕೊಳವೆ ಮಾರ್ಗದ ಮೂಲಕ ಹರಿಸಿ 4 ಕೆರೆ ತುಂಬಿಸುವುದು, 4.95 ಎಂಎಲ್‌ಡಿ ನೀರನ್ನು ಗುರುತ್ವಾಕರ್ಷಣೆಯ ಮೂಲಕ ಹರಿಸಿ 15 ಕೆರೆ ತುಂಬಿಸಲಾಗುತ್ತದೆ. ಒಟ್ಟು 30 ಕೆರೆಗಳಿಗೆ 11.23 ಎಂಎಲ್‌ಡಿ ನೀರು ಹರಿಸಲಾಗುತ್ತದೆ.



## ಮಿನಿ ನ್ಯೂಸ್

### ಸೋನಿಯಾ ಗಾಂಧಿಗೆ ಧರ್ಮಸ್ಥಳದ ಬಗ್ಗೆ ಏನು ಗೊತ್ತಿದೆ: ವಿ.ಸೋಮಣ್ಣ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಸೋನಿಯಾ ಗಾಂಧಿ ಅವರಿಗೆ ಧರ್ಮಸ್ಥಳದ ಬಗ್ಗೆ ಏನು ಗೊತ್ತಿದೆ ಅವರ ತಲೆಯಲ್ಲಿ ತಮ್ಮ ಮಗನನ್ನು ಪ್ರಧಾನಿ ಮಾಡಬೇಕು ಎನ್ನುವುದಷ್ಟೇ ಇದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು. ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂಳಲಾಗಿದ್ದು, ಈ ಪ್ರಕರಣದಲ್ಲಿ ಮಧ್ಯಪ್ರವೇಶಿಸುವಂತೆ ಕಾಂಗ್ರೆಸ್ ವರಿಷ್ಠರಾದ ಸೋನಿಯಾ ಗಾಂಧಿ ಅವರಿಗೆ ಮಹಿಳಾ ಸಂಘಟನೆಗಳು ಪತ್ರ ಬರೆದಿರುವ ವಿಚಾರವಾಗಿ ವಿ.ಸೋಮಣ್ಣ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದರು. ಇದನ್ನು ಆ ಹೆಣ್ಣು ಮಕ್ಕಳಿಗೆ ಯಾರೋ ಹೇಳಿಕೊಟ್ಟು ಮಾಡಿಸಿರಬಹುದು. ಸಿದ್ದರಾಮಯ್ಯ, ಅವರ ತಂಡದ ಹೊಸ ಕಥೆಯಂತಿದೆ ಎಂದರು. ಡಿ.ಕೆ. ಶಿವಕುಮಾರ್ ಬುದ್ಧಿವಂತಿಕೆಗೆ ಬೇಸರ ಮಾಡಿಕೊಂಡಿರುವವರು ಹೀಗೆ ಮಾಡಿಸಿರಬಹುದು. ಇಂತಹದ್ದೆಲ್ಲವನ್ನೂ ಮಾಡುವುದೇ ಕಾಂಗ್ರೆಸ್‌ನವರ ಕುತಂತ್ರ. ಸೋನಿಯಾ ಗಾಂಧಿ ಅವರ ಬಗ್ಗೆ ಅಪಾರ ಗೌರವವಿದೆ. ಅವರು ಒಳ್ಳೆಯವರು. ನನ್ನ ಮಗ ರಾಹುಲ್ ಗಾಂಧಿ ಪ್ರಧಾನಿ ಆಗಬೇಕು ಎನ್ನುವ ತವಕದಲ್ಲಿ ಜೀವನ ಸಾಗಿಸುತ್ತಿದ್ದಾರೆ ಎಂದು ಹೇಳಿದರು.

### ಭಾನುವಾರ ಘಾಟಿ ಸುಬ್ರಹ್ಮಣ್ಯ ದೇವಾಲಯ ಸಂಜೆ ವೇಳೆಗೆಲ್ಲ ಬಂದ್

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಸೆ. 7ರಂದು ಭಾನುವಾರ ಮಧ್ಯರಾತ್ರಿ ಚಂದ್ರಗ್ರಹಣ ಗೋಚರಿಸಲಿರುವ ಹಿನ್ನೆಲೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಶ್ರೀ ಘಾಟಿ ಸುಬ್ರಹ್ಮಣ್ಯ ದೇವಾಲಯವನ್ನ ಸಂಜೆ 4:30 ಗಂಟೆಗೆ ಬಂದ್ ಮಾಡಲಾಗುತ್ತಿದೆ. ಅಂದಹಾಗೆ ಗ್ರಹಣದ ಅಂಗವಾಗಿ ಪ್ರತಿ ದಿನವೂ 8:30ಕ್ಕೆ ಕ್ಲೋಸ್ ಮಾಡಲಾಗುತ್ತಿದ್ದ ದೇವಾಲಯದ ಬಾಗಿಲನ್ನ ಈ ವರ್ಷ ಸಂಜೆ 4:30ಕ್ಕೆ ಮುಚ್ಚಲಾಗುತ್ತದೆ. ಇನ್ನೂ ಗ್ರಹಣದ ನಂತರ ಎಂದಿನಂತೆ ಮರುದಿನ ಬೆಳಿಗ್ಗೆ ಶುದ್ಧೀಕರಣ ಮಾಡಿ ಬಳಿಕ ದೇವಾಲಯದ ಬಾಗಿಲು ತೆರೆಯಲಾಗುತ್ತದೆ.

ಹೀಗಾಗಿ ಭಕ್ತಾದಿಗಳು ಸಹಕರಿಸುವಂತೆ ದೇವಾಲಯದ ಆಡಳಿತಾಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ. ಸುದೀರ್ಘ ಅವಧಿಯ ಅಪರೂಪದ ಚಂದ್ರಗ್ರಹಣ ಭಾರತದಾದ್ಯಂತ ಗೋಚರಿಸಲಿದೆ. ಸೆ.7 ಮತ್ತು 8 ರಂದು ಚಂದ್ರಗ್ರಹಣ ಸಂಭವಿಸಲಿದೆ. ಸೆ.7 ಮತ್ತು 8 ರಂದು ಗ್ರಹಣ ಸಂಭವಿಸಲಿದೆ. ಸೆ.7ರ ರಾತ್ರಿ 9:57ರ ರಾತ್ರಿ ಸ್ಪರ್ಶಕಾಲ ಹಾಗೂ ಸೆ.8ರ ಮಧ್ಯರಾತ್ರಿ 1:26ಕ್ಕೆ ಮೋಕ್ಷಕಾಲ ಸಂಭವಿಸಲಿದೆ. ಚಂದ್ರಗ್ರಹಣದ ಪೂರ್ಣ ಪ್ರಭಾವದ ಆರಂಭವು ಮಧ್ಯರಾತ್ರಿ 12:28 ರಿಂದ 1:56ರವರೆಗೆ ಇರಲಿದೆ. ಸುದೀರ್ಘ ಅವಧಿ ಅಂದರೆ ಮೂರು ಗಂಟೆಗಳ ಕಾಲ ಸಂಭವಿಸಲಿದೆ. ಭಾರತದಲ್ಲಿ ಎಲ್ಲೆಡೆ ಗ್ರಹಣ ಗೋಚರವಾಗಲಿದೆ. ರಕ್ತವರ್ಣದಲ್ಲಿ ಚಂದಿರ ಗೋಚರಿಸಲಿದ್ದಾನೆ.

### ಮಾವಿನಕೆರೆ, ಮೇಲಿನವರಗೇನಹಳ್ಳಿ, ಬೆಂಕಿಕೆರೆಯಲ್ಲಿ ಜೆಜೆಎಂ

• **ಉದಯವಾಹಿನಿ, ತುರುವೇಕೆರೆ**

ತಾಲ್ಲೂಕಿನ ಮಾವಿನಕೆರೆ, ಮೇಲಿನವರಗೇನಹಳ್ಳಿ, ಬೆಂಕಿಕೆರೆಯಲ್ಲಿ ಜಲಜೀವನ್ ಯೋಜನೆಗೆ ಶಾಸಕ ಎಂ.ಟಿ.ಕೃಷ್ಣಪ್ಪ ಭೂಮಿಪೂಜೆ ನೆರವೇರಿಸಿದರು. ಮಾವಿನಕೆರೆಯಲ್ಲಿ 380 ಮನೆಗಳಿಗೆ 69 ಲಕ್ಷ ವೆಚ್ಚದಲ್ಲಿ ಮನೆ ಮನೆಗೆ ನೀರು ಸರಬರಾಜು ಮಾಡಲಾಗುತ್ತದೆ. ಮೇಲಿನವರಗೇನಹಳ್ಳಿಯಲ್ಲಿ 427 ಮನೆಗಳಿಗೆ 77 ಲಕ್ಷ ವೆಚ್ಚದಲ್ಲಿ ಕಾಮಗಾರಿ ಮಾಡಲಾಗುತ್ತಿದೆ. ಬೆಂಕಿಕೆರೆಯಲ್ಲಿ 156 ಮನೆಗಳಿಗೆ 48 ಲಕ್ಷ ವೆಚ್ಚದಲ್ಲಿ ಮನೆ ಮನೆಗೆ ಗಂಗೆ ನೀಡಲಾಗುತ್ತಿದೆ ಎಂದರು.

ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಇಲಾಖೆಯಿಂದ ಮೂರು ಗ್ರಾಮಗಳಲ್ಲೂ ಪ್ರತ್ಯೇಕವಾಗಿ ನೀರಿಗಾಗಿ ಓವರ್ ಹೆಡ್ ಟ್ಯಾಂಕ್ ನಿರ್ಮಾಣ ಮಾಡಲಾಗುತ್ತಿದೆ. ಇದು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಆಗಿದೆ. ಸುಮಾರು ಮುವತ್ತು ವರ್ಷಗಳ ತನಕ ಈ ಯೋಜನೆ ಕಾರ್ಯಗತ ಆಗಬೇಕಿದೆ ಎಂದರು.

### ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ರಸ್ತೆ: ಶುಲ್ಕ ವಸೂಲಾತಿ ಆರಂಭ

• **ಉದಯವಾಹಿನಿ, ಕೆಜಿಎಫ್**

ಬಹು ನಿರೀಕ್ಷಿತ ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ಕಾರಿಡಾರ್‌ನಲ್ಲಿ ಚಲಿಸುವ ವಾಹನಗಳಿಗೆ ಶುಲ್ಕ ವಿಧಿಸುವ ಪ್ರಕ್ರಿಯೆಯನ್ನು ಆರಂಭಿಸಲಾಗಿದೆ. ಇಷ್ಟು ದಿನ ಯಾವುದೇ ಶುಲ್ಕವಿಲ್ಲದೆ ಸಂಚರಿಸುತ್ತಿದ್ದ ವಾಹನಗಳ ಮಾಲೀಕರು ಮತ್ತು ಚಾಲಕರು ಕೊಂಚ ಗಲಿಬಿಲಿಗೆ ಒಳಗಾದರು. ಇಲ್ಲಿನ ಕೃಷ್ಣಾವರಂನಿಂದ ಹೊಸಕೋಟೆವರೆಗೆ ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ಕಾರಿಡಾರ್ ನಿರ್ಮಾಣ ಕಾಮಗಾರಿಯು ಪೂರ್ಣಗೊಂಡ ಕೆಲವು ದಿನಗಳ ಬಳಿಕ ಪ್ರಾಯೋಗಿಕ ಸಂಚಾರಕ್ಕೆ ಅನುವು ಮಾಡಿಕೊಡಲಾಗಿತ್ತು. ಇದರಿಂದಾಗಿ ಈ ರಸ್ತೆಯಲ್ಲಿ ಯಾವುದೇ ಶುಲ್ಕವಿಲ್ಲದೆ ವಾಹನಗಳು ಸಂಚರಿಸುತ್ತಿದ್ದವು. ಇದರಿಂದಾಗಿ ಕೆಜಿಎಫ್‌ನಿಂದ ಕೇವಲ 45 ನಿಮಿಷಗಳಲ್ಲಿ ಹೊಸಕೋಟೆಗೆ ತಲುಪಬಹುದಿತ್ತು. ಅಲ್ಲಿಂದ ಮುಂದೆ ತುಮಕೂರು ಮಾರ್ಗದಲ್ಲಿ ತೆರಳುವ ವಾಹನಗಳು ಇದೇ ಕಾರಿಡಾರ್‌ನಲ್ಲಿ ಸಂಚರಿಸುತ್ತಿದ್ದವು. ಪೂಜೆ ನೆರವೇರಿಸಿದ ಬಳಿಕ ಏಜೆನ್ಸಿ ಸಿಬ್ಬಂದಿ 8.45ರಿಂದ ಶುಲ್ಕ ವಿಧಿಸಲಾರಂಭಿಸಿದರು.

ದಿಢೀರನೇ ನಡೆದ ಪ್ರಕ್ರಿಯೆ ವಾಹನ ಸವಾರರಲ್ಲಿ ಆಶ್ಚರ್ಯವನ್ನುಂಟು ಮಾಡಿತು. ಯಾವುದೇ ಮುನ್ಸೂಚನೆ ಇಲ್ಲದೆ ಶುಲ್ಕ ವಸೂಲಿಗೆ ಇಳಿದಿದ್ದ ಏಜೆನ್ಸಿ ವಿರುದ್ಧ ವಾಹನ ಸವಾರರು ಅಸಮಾಧಾನ ವ್ಯಕ್ತಪಡಿಸಿದರು. ಕೃಷ್ಣಾವರಂನಿಂದ ಹೊಸಕೋಟೆಗೆ ಕಾರು, ಜೀಪು, ವ್ಯಾನ್ ಮತ್ತಿತರ ಸಣ್ಣ ವಾಹನಗಳಿಗೆ 155, ಮಿನಿ ಬಸ್, ಎಲ್‌ಸಿವಿ, ಎಲ್‌ಜಿವಿ ವಾಹನಗಳಿಗೆ 250, ಬಸ್, ಟ್ರಕ್‌ಗಳಿಗೆ 520, ಮೂರು ಆ್ಯಕ್ಸಲ್ ವಾಣಿಜ್ಯ ವಾಹನಗಳಿಗೆ 570, ಭೂ ಚಾಲಿತ ಹೆವಿ ವಾಹನಗಳಿಗೆ 815 ಶುಲ್ಕ ನಿಗದಿ ಮಾಡಲಾಗಿದೆ ಎಂದು ಏಜೆನ್ಸಿ ಸಿಬ್ಬಂದಿ ಹೇಳಿದ್ದಾರೆ.

### ಜಿಟಿಡಿ ವಿರುದ್ಧ ಡಿಎಸ್‌ಎಸ್ ಪ್ರತಿಭಟನೆ

• **ಉದಯವಾಹಿನಿ, ಹುಣಸೂರು**

ಸಹಕಾರ ಸಂಘಗಳಲ್ಲಿ ಪರಿಶಿಷ್ಟ ಜಾತಿ, ಪಂಗಡಗಳ ನಾಮನಿರ್ದೇಶನಕ್ಕೆ ಶಾಸಕ ಜಿ.ಟಿ.ದೇವೇಗೌಡರು ವಿರೋಧ ವ್ಯಕ್ತಪಡಿಸಿರುವುದು ಸರಿಯಲ್ಲ ಎಂದು ದಲಿತ ಸಂಘರ್ಷ ಸಮಿತಿ ಮುಖಂಡ ರತ್ನಾಪುರಿ ಪುಟ್ಟಸ್ವಾಮಿ ಹೇಳಿದರು. ನಗರದ ಸಂವಿಧಾನ ವೃತ್ತದಲ್ಲಿ ಗುರುವಾರ ನಡೆದ ಪ್ರತಿಭಟನೆಯಲ್ಲಿ ಮಾತನಾಡಿ, ಶಾಸಕರ ನಿಲುವಿನಿಂದ ಹಿಂದುಳಿದ ಸಮುದಾಯದವರಿಗೆ ಪ್ರಾತಿನಿತ್ಯ ಇಲ್ಲವಾಗುತ್ತದೆ ಎಂದರು. ಮುಖಂಡರಾದ ರಾಮಕೃಷ್ಣ ಅತ್ತಿಕುಪ್ಪೆ, ಶಿವರಾಜ್ ಮುತ್ತುರಾಯನಹೊಸಹಳ್ಳಿ ಮಾತನಾಡಿ, ಶೋಷಿತ ಸಮುದಾಯ ದವರು ಸಹಕಾರಿ ಕ್ಷೇತ್ರದಲ್ಲಿ ಪಾಲ್ಗೊಳ್ಳಲು ಅನುವಾಗುವಂತೆ ಸರ್ಕಾರ ತಿದ್ದುಪಡಿ ತರಲು ಮುಂದಾಗಿರುವುದು ಸ್ವಾಗತಾರ್ಹ ಎಂದರು.

ಅಂತರಾಳದಿಂದ... EDITORIAL

# ಆಸ್ಪತ್ರೆಗಳಲ್ಲಿ ಪೌಷ್ಟಿಕ ಆಹಾರ ವಿತರಣೆ: ಉತ್ತಮ ನಡೆ, ಎಲ್ಲೆಡೆ ವಿಸ್ತರಣೆಯಾಗಲಿ

ರೋಗಿಗಳ ಆರೋಗ್ಯ ಸ್ಥಿತಿ, ವಯಸ್ಸಿಗೆ ಅನುಗುಣವಾಗಿ ಪೌಷ್ಟಿಕಾಂಶದ ಅಗತ್ಯಗಳು ಭಿನ್ನ ಎಂಬುದನ್ನು ಅರಿತುಕೊಂಡಿರುವ ಆರೋಗ್ಯ ಇಲಾಖೆಯು ರೋಗಿಗಳ ವೈದ್ಯಕೀಯ ಅಗತ್ಯಗಳ ಆಧಾರದ ಮೇಲೆ ಆಹಾರವನ್ನು ವಿಂಗಡಿಸಿ, ವಿತರಿಸುವ ವ್ಯವಸ್ಥೆಯನ್ನೂ ಮಾಡಿಕೊಂಡಿದೆ. ಔಷಧ, ಗುಳಿಗೆಗಳ ವಿತರಣೆಯಿಂದಷ್ಟೇ ಆರೋಗ್ಯ ಸುಧಾರಿಸುವುದು ಸಾಧ್ಯವಿಲ್ಲ.




ಜನರು ಅಗತ್ಯ ಪ್ರಮಾಣದ ಪೋಷಕಾಂಶ ಮತ್ತು ಖನಿಜಾಂಶಯುಕ್ತ ಆಹಾರ ಸೇವಿಸುವುದು ಕೂಡ ಅಷ್ಟೇ ಅಗತ್ಯ. ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳು ರೋಗ ನಿರೋಧಕ ಶಕ್ತಿ ವೃದ್ಧಿಸಿಕೊಳ್ಳಲು ವಿಶೇಷ ಪೌಷ್ಟಿಕಾಂಶಗಳನ್ನು ಪಡೆಯುವುದು ಬಹಳ ಮುಖ್ಯ. ಈ ಯೋಜನೆಯು ಇಂಥವರ ಅಗತ್ಯಗಳಿಗೆ ಆದ್ಯತೆ ನೀಡುತ್ತದೆ. ರಕ್ತಹೀನತೆ ಮತ್ತು ಅಪೌಷ್ಟಿಕತೆ ಭಾರತವನ್ನು ದೀರ್ಘಕಾಲದಿಂದ ಕಾಡುತ್ತಿರುವ ಪ್ರಮುಖ ಸಮಸ್ಯೆಗಳು.

ಉದಾಹರಣೆಗೆ, ಮಕ್ಕಳ ಪೌಷ್ಟಿಕತೆ ವರದಿ–2024 ಅನ್ನೇ ಗಮನಿಸಬಹುದು. ಭಾರತದ ಮಕ್ಕಳ ಪೈಕಿ ಶೇ 40ರಷ್ಟು ಮಕ್ಕಳು ಹಸಿವಿನಿಂದ ಬಳಲುತ್ತಿವೆ.

**ಆರೋಗ್ಯ ಇಲಾಖೆಯು ಬೆಂಗಳೂರಿನ ಮೂರು ಸರ್ಕಾರಿ ಆಸ್ಪತ್ರೆಗಳ ರೋಗಿಗಳಿಗೆ ವಿಶೇಷ ಪೌಷ್ಟಿಕ ಆಹಾರ ವಿತರಿಸುವ ಯೋಜನೆಯನ್ನು ಆರಂಭಿಸಿರುವುದು ಒಂದು ಉತ್ತಮ ನಡೆ. ಸರ್ಕಾರದ ಕೆಲವು ಇಲಾಖೆಗಳಾದರೂ ಜನಪರವಾಗಿ ಚಿಂತಿಸುತ್ತಿವೆ ಎನ್ನುವುದಕ್ಕೆ ಈ ಉಪಕ್ರಮವೇ ಸಾಕ್ಷಿ. ಒಂದೇ ರೀತಿಯ ಸಾಮಾನ್ಯ ಆಹಾರದ ಬದಲು, ರೋಗಿಗಳಿಗೆ ಅಗತ್ಯ ಪೌಷ್ಟಿಕಾಂಶ ಒದಗಿಸುವ ಆಹಾರವನ್ನು ನೀಡುವುದು ಈ ಯೋಜನೆಯ ಉದ್ದೇಶ. ರೋಗಿಗಳ ಚೇತರಿಕೆಯಲ್ಲಿ ಚಿಕಿತ್ಸೆಯ ಜತೆಗೆ ಪೌಷ್ಟಿಕ ಆಹಾರದ ಸೇವನೆ ಕೂಡ ಮಹತ್ವದ ಪಾತ್ರವನ್ನು ವಹಿಸುತ್ತದೆ. ಹೀಗಾಗಿ, ನಿರ್ದಿಷ್ಟ ಪೌಷ್ಟಿಕಾಂಶದ ಅಗತ್ಯಗಳನ್ನು ಪೂರೈಸುವ ಆಹಾರವನ್ನು ಒದಗಿಸಲಾಗುತ್ತದೆ' ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.**

ಕುಟುಂಬದಲ್ಲಿನ ಬಡತನವೇ ಅಪೌಷ್ಟಿಕತೆಗೆ ಮುಖ್ಯ ಕಾರಣವಾಗಿದೆ ಎನ್ನುತ್ತದೆ ವರದಿ. ಆಹಾರ ಸೇವನೆಯಲ್ಲಿ ಅಸಮರ್ಪಕತೆ, ಆಹಾರ ಸೇವನೆಯ ವಾತಾವರಣದಲ್ಲಿನ ಮಾಲಿನ್ಯ ಮತ್ತು ಅಗ್ಗದ ಅನಾರೋಗ್ಯಕರ ಆಹಾರ ಸೇವನೆ ಕೂಡ ಅಪೌಷ್ಟಿಕತೆಗೆ ಕಾರಣ. ಆಹಾರದ ಅತಿ ಹೆಚ್ಚಿನ ದರ ಕೂಡ ಹಲವರಿಗೆ ಪೌಷ್ಟಿಕ ಆಹಾರ ದೊರಕದಂತೆ ಮಾಡಿದೆ. ಆಸ್ಪತ್ರೆಗೆ ದಾಖಲಾದ ಬಡರೋಗಿಗಳ ಕುಟುಂಬದವರಿಗೆ ಊಟಕ್ಕೆ ಹಣ ಹೊಂದಿಸುವುದು ಸುಲಭವಲ್ಲ. ಅಂಥವರಿಗೆಲ್ಲ ಪೌಷ್ಟಿಕ ಆಹಾರ ವಿತರಿಸುವ ಯೋಜನೆ ವರದಾನವಾಗಿದೆ.ನಮ್ಮ ಊಟದಲ್ಲಿ ಹಾಲಿನ ಉತ್ಪನ್ನಗಳು, ಮೊಟ್ಟೆ, ಮಾಂಸ ಮತ್ತು ಮೀನು, ಧಾನ್ಯಗಳು ಮತ್ತು ಬೀಜಗಳು, ವಿಟಮಿನ್ 'ಎ' ಸಮೃದ್ಧವಾಗಿರುವ ಹಣ್ಣುಗಳು ಮತ್ತು ತರಕಾರಿಗಳು, ಕಾಳು ಮತ್ತು ಗೆಡ್ಡೆಗಳು ಇವುಗಳನ್ನು ಯಥೇಚ್ಛವಾಗಿ ಬಳಸಬೇಕು ಎನ್ನುವುದು ತಜ್ಞರು ನೀಡುವ ಸಲಹೆ. ವೈವಿಧ್ಯಮಯ ಮತ್ತು ಸಮತೋಲಿತ ಆಹಾರದ ಮಹತ್ವವನ್ನು ಜನರಿಗೆ ಅರ್ಥೈಸುವ ಕೆಲಸವನ್ನೂ ಆರೋಗ್ಯ ಇಲಾಖೆಯು ಮಾಡಬೇಕಿದೆ.

ವಿಶೇಷ ಪೌಷ್ಟಿಕ ಆಹಾರ ವಿತರಿಸುವ ಯೋಜನೆಯನ್ನು ರಾಜಧಾನಿಯ ಸರ್ಕಾರಿ ಆಸ್ಪತ್ರೆಗಳಿಗೆ ಮಾತ್ರ ಸೀಮಿತಗೊಳಿಸದೆ ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೂ ವಿಸ್ತರಿಸಬೇಕು. ಏಕೆಂದರೆ, ಯಾದಗಿರಿ, ಕಲಬುರಗಿ, ರಾಯಚೂರು, ಕೊಪ್ಪಳ, ಬಳ್ಳಾರಿ, ಬೀದರ್, ಗದಗ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಅಪೌಷ್ಟಿಕತೆ ಹಾಗೂ ರಕ್ತಹೀನತೆಯಿಂದ ಬಳಲುತ್ತಿರುವವರ ಪ್ರಮಾಣ

ಹೆಚ್ಚಾಗಿದೆ. ಈ ಭಾಗದಲ್ಲಿ ವಿಶೇಷ ಯೋಜನೆಗಳು ಜಾರಿಯಲ್ಲಿದ್ದರೂ ನಿರೀಕ್ಷಿತ ಮಟ್ಟದಲ್ಲಿ ಈ ಸಮಸ್ಯೆಯನ್ನು ಹೋಗಲಾಡಿಸಲು ಸಾಧ್ಯವಾಗಿಲ್ಲ. ಎಲ್ಲರಿಗೂ ಪೌಷ್ಟಿಕ ಆಹಾರ ತಲುಪುತ್ತಿದೆಯೇ ಎಂಬುದನ್ನು ಖಾತರಿಪಡಿಸಿಕೊಳ್ಳುವಂತಹ ವ್ಯವಸ್ಥೆಯೊಂದನ್ನು ಸರ್ಕಾರ ರೂಪಿಸಬೇಕಿದೆ. ಪೌಷ್ಟಿಕ ಆಹಾರದ ಖಾತರಿಗಾಗಿ ಕುಟುಂಬದ ಬಡತನದ ಸಮಸ್ಯೆಯನ್ನೂ ಬಗೆಹರಿಸಬೇಕಿದೆ. ಬೇಕಾದಷ್ಟು ಪೌಷ್ಟಿಕತೆಯನ್ನು ಒದಗಿಸಬೇಕಿದ್ದರೆ ಮೂಲಭೂತವಾದ ಆಹಾರವಷ್ಟೇ ಸಾಲುವುದಿಲ್ಲ. ಮಹಿಳೆಯರು, ಹಸುಳೆಗಳು, ಮಕ್ಕಳಿಗಾಗಿ ಹಲವಾರು ಯೋಜನೆಗಳನ್ನು ಸರ್ಕಾರ ರೂಪಿಸಿದ್ದರೂ ಅವು ಅಗತ್ಯ ಇರುವವರಿಗೆ ಪೌಷ್ಟಿಕತೆಯನ್ನು ಒದಗಿಸುವಲ್ಲಿ ಯಶಸ್ವಿಯಾಗಿಲ್ಲ. ಉತ್ತಮಸ್ಥಿತಿಯಲ್ಲಿರುವ ಕುಟುಂಬಗಳು ಮಕ್ಕಳಿಗೆ ಪೌಷ್ಟಿಕಾಂಶಯುಕ್ತ ಆಹಾರ ನೀಡುವಂತೆ ಜಾಗೃತಿ ಮೂಡಿಸುವುದು ಮತ್ತೊಂದು ಸವಾಲಾಗಿದೆ.

ಹಲವು ಕುಟುಂಬಗಳಲ್ಲಿ ಪೌಷ್ಟಿಕತೆ ಕೊರತೆಯ ಮುಖ್ಯ ಕಾರಣ ಸಂಪನ್ಮೂಲದ ಅಲಭ್ಯತೆ ಅಲ್ಲ, ಬದಲಿಗೆ ಜಾಗೃತಿ ಇಲ್ಲದಿರುವುದಾಗಿದೆ. ಹಾಗಾಗಿ ಜಾಗೃತಿ ಮೂಡಿಸುವುದು ಕೂಡ ಬಹಳ ಮುಖ್ಯವಾದ ಕೆಲಸವಾಗಿದೆ. ಆರೋಗ್ಯಪೂರ್ಣ ಸಮುದಾಯವನ್ನು ನಿರ್ಮಿಸುವಲ್ಲಿ ಇಲಾಖೆಯು ಇಟ್ಟಿರುವ ಈ ಹೆಜ್ಜೆಯು ಪುಟ್ಟದಾದರೂ ಪರಿಣಾಮ ಬೀರುವಂಥದ್ದಾಗಿದೆ.

# ರಾಮಾಯಣ



## ಸೀತಾದೇವಿಯು ಶ್ರೀರಾಮನಿಗೆ ಆ ಹಿಂಸಾ ಧರ್ಮವನ್ನು ಹೇಳಿದ್ದು

• ಹಿಂದಿನ ಸಂಚಿಕೆಯಿಂದ

### 119 ನೆಯ ಅಧ್ಯಾಯ

ಈ ಆಶ್ರಮವನ್ನು ನೋಡಿದ ಮಾತ್ರದಿಂದಲೇ ಎಲ್ಲಾ ಬಳಲಿಕೆಯೂ ಪರಿಹಾರವಾಗುವುದು. ಎಲ್ಲಿ ನೋಡಿದರೂ ಮದದಿಂದ ಸೊಕ್ಕಿದ ಕಾಡಾನೆಗಳು ವಿಲಾಸಾರ್ಥವಾಗಿ ಸಂಚರಿಸುತ್ತಿವೆ. ಎಲ್ಲಿ ನೋಡಿದರೂ ನಾರುಬಟ್ಟೆಗಳಿಂದ ಆಲಂಕರಿಸಲ್ಪಟ್ಟ ವೃಕ್ಷಗಳು ತೋರುತ್ತಿವೆ. ಶಾಂತಗುಣಸಂಪತ್ತಿಯುಳ್ಳ ಮೃಗಸಮೂಹಗಳು ಕಾಣುತ್ತಿವೆ. ನಾನಾವಿಧವಾದ ಪಕ್ಷಿಗಳು ಮನೋಹರವಾಗಿ ಸ್ವರಗೈಯುತ್ತಿವೆ. ಇದು ಪುಣ್ಯಾತ್ಮರಾದ ಮನುಷ್ಯರಿಗೆ ಸೌಖ್ಯಕರವಾದ ಆಶ್ರಮವಾಗಿದೆ. ಈ ಆಶ್ರಮದಲ್ಲಿ ಅಗಸ್ಟ ಮುನೀಶ್ವರನು ಜಗದ್ಧಿತಾರ್ಥವಾಗಿ ತಪಸ್ಸುಮಾಡುತ್ತಿರುವುದರಿಂದ ಋಷಿಗಳೆಲ್ಲ ನಿರ್ಭೀತರಾಗಿದ್ದಾರೆ. ಈ ಮುನೀಶ್ವರನ ಆಶ್ರಮವನ್ನು ರಾಕ್ಷಸರು ನೋಡುವರಲ್ಲದೆ ಇಲ್ಲಿರುವ ಪ್ರಾಣಿಗಳಿಗೆ ಬಾಧೆಯನ್ನು ಮಾಡಲಾರರು, ಪುಣ್ಯಾತ್ಮನಾದ ಅಗಸ್ತ್ಯಮುನೀಶ್ವರನು ಯಾವಾಗ ಈ ಆಶ್ರಮಕ್ಕೆ ಬಂದನೋ ಅದುಮೊದಲಾಗಿ ಈ ವನದಲ್ಲಿರುವ ರಾಕ್ಷಸರು ಮನುಷ್ಯರ ಮೇಲಣ ವೈರವನ್ನು ಬಿಟ್ಟು, ಶಾಂತಗುಣವುಳ್ಳವರಾಗಿದ್ದಾರೆ. ಈ ಮುನಿಯಿಂದ ತೆಂಕಣದಿಕ್ಕು ಪವಿತ್ರವಾಗಿ ಸಮಸ್ತ ಪ್ರಾಣಿಗಳಿಗೂ ಹರ್ಷದಾಯಕವಾಗಿದೆ. ವಿಂಧ್ಯಪರ್ವತನು ಅಗಸ್ಟ ಮುನೀಶ್ವರನ ಆಜ್ಞೆಯನ್ನು ಮೀರಲಂಜಿಕೊಂಡು ಬೆಳೆಯದೆ ಹಾಗೆಯೇ ನಿಂತುಬಿಟ್ಟಿದ್ದಾನೆ. ಆಗಸ್ಮಮುನೀಶ್ವರನು ಸಮಸ್ತ ಲೋಕಗಳಲ್ಲಿಯೂ ಪೂಜ್ಯನಾದವನು. ತನ್ನ ದರ್ಶನಕ್ಕೆ ಬಂದಿರುವ ನಮಗೆ ಅನೇಕ ಶ್ರೇಯಸ್ಸನ್ನು ಮಾಡುವನು. ನಾವು ಈ ಮುನಿಯ ಸೇವೆಯನ್ನು ಮಾಡಿಕೊಂಡು ಈ ಆಶ್ರಮದಲ್ಲಿಯೇ ಮಿಕ್ಕಿರುವ ಕಾಲವನ್ನು ಕಳೆಯೋಣ. ಈ ಆಶ್ರಮದಲ್ಲಿ ದೇವತೆಗಳು ಗಂಧರ್ವರು ಸಿದ್ದರು ಮೊದಲಾದವರು ಆಹಾರನಿಯಮವನ್ನು ಮಾಡಿಕೊಂಡು ಅಗಸ್ತ್ರಮುನೀಶ್ವರನ ಸೇವೆಯನ್ನು ಮಾಡಿಕೊಂಡಿದ್ದಾರೆ. ಈ ಆಶ್ರಮದಲ್ಲಿ ಹುಸಿಗರು ಕ್ರೂರಕರ್ಮಿಗಳು ಅ ಶುಚಿಯಾದವರು ಮೊದಲಾದವರು ಜೀವವಿಡಿದಿರಲಾರರು. ಅನೃತವಾದಿ ಕಾಮುಕ ಮೊದಲಾದವರು ಇಲ್ಲಿ ಇರಸಲ್ಲದು. ಈ ಮನೀಶ್ವರನು ಮಹಾಸತ್ಯಸಂಧನು. ಇಲ್ಲಿರುವವರೆಲ್ಲರೂ ಧರ್ಮಮಾರ್ಗದಲ್ಲಿಯೇ ನಡೆಯುವರು. ಈ ಆಶ್ರಮದಲ್ಲಿ ಮಹಾತ್ಮರಾದ ಋಷಿಗಳು ಮನುಷ್ಯದೇಹವನ್ನು ತೊರೆದು ತಪಸ್ಸಿದ್ಧಿಯಿಂದ ಸೂರ್ಯಕಾಂತಿಗೆ ಸಮಾನವಾದ ದಿವ್ಯದೇಹವನ್ನು ಹೊಂದಿ ಸ್ವರ್ಗವನ್ನೈದುವರು. ಇಲ್ಲಿ ತಪಸ್ಸು ಮಾಡುವ ಪುಣ್ಯಾತ್ಮರಿಗೆ ದೇವತೆಗಳು ಪ್ರಸನ್ನರಾಗಿ ದೇವ, ಯಕ್ಷರಾಜಾಧಿಪತ್ಯ ಬ್ರಹ್ಮಲೋಕ ಮೊದಲಾದ ಇಷ್ಟಾರ್ಥಗಳನ್ನು ಕೊಡುವರು. ಎಲೈ ಲಕ್ಷ್ಮಣ, ನಾವು ಅಗಸ್ಯ ಮುನೀಶ್ವರನ ಆಶ್ರಮಕ್ಕೆ ಬಂದೆವು. ನಮ್ಮ ಸಂಗಡ ಈ ಋಷಿಗಳೂ ಬಂದಿದ್ದಾರೆ. ನಾವು ಬಂದ ವೃತ್ತಾಂತವನ್ನು ನೀನು ಮುಂದೆ ಹೋಗಿ ಅಗಸ್ಯ ಮಹರ್ಷಿಗೆ ಅರಿಕೆಮಾಡು ಎಂದು ನುಡಿದನು.

**ಅಗಸ್ತ್ರನು ಶ್ರೀರಾಮನಿಗೆ ಬಿಲ್ಲು ಬಾಣಗಳನ್ನು ಕೊಟ್ಟಿದ್ದು:** ಆಮೇಲೆ ಲಕ್ಷ್ಮಣನು ಆಗಸ್ಟುಮುನೀಶ್ವರನ ಆಶ್ರಮಕ್ಕೆ ಹೋಗಿ ಆತನ ಶಿಷ್ಯನನ್ನು ಕುರಿತು ಹೀಗೆ ನಿವೇದಿಸಿದನು ಪೂಜ್ಯನೆ, ಲೋಕದಲ್ಲಿ ಮಹಾಪ್ರಸಿದ್ಧನಾದ ದಶರಥರಾಯನ ಜೇಷ್ಠ ಪುತ್ರನಾದ ಶ್ರೀರಾಮನು ಸೀತಾಸಮೇತನಾಗಿ ಆಗಸ್ಟುಮುನೀಶ್ವರನ ದರ್ಶನ ಮಾಡಬೇಕೆಂದು ಈ ಆಶ್ರಮಕ್ಕೆ ಬಂದಿದ್ದಾನೆ.

**ಮುಂದುವರಿಯುವುದು...**

# ಎಲೆಯನ್ನು ಜಗಿಯೋದ್ರಿಂದ ಕೊಲೆಸ್ಟ್ರಾಲ್ ಕಂಟ್ರೋಲ್‌ನಲ್ಲಿರುತ್ತೆ, ತೂಕವೂ ಇಳಿಯುತ್ತಂತೆ



ನಮ್ಮ ಸುತ್ತಮುತ್ತಲಿರುವ, ನಾವು ದಿನನಿತ್ಯ ಅಡುಗೆಗೆ ಬಳಸುವ ಕೆಲವೊಂದು ಎಲೆಗಳು ಸಾಕಷ್ಟು ಔಷಧೀಯ ಗುಣಗಳನ್ನು ಹೊಂದಿರುತ್ತದೆ. ಅದರಲ್ಲೂ ಕರಿಬೇವು ಸೇವನೆಯಿಂದ ನಾನಾ ರೀತಿಯ ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ ಎನ್ನಲಾಗುತ್ತದೆ.

ನಮ್ಮ ಅಡುಗೆಮನೆಯಲ್ಲಿ ನಾಲಗೆಯನ್ನು ರುಚಿಯನ್ನು ಹೆಚ್ಚಿಸುವುದಲ್ಲದೆ ಆರೋಗ್ಯಕ್ಕೂ ಅಗತ್ಯವಾದ ಹಲವಾರು ಪದಾರ್ಥಗಳಿವೆ. ಇವುಗಳಲ್ಲಿ 1 ಕರಿಬೇವು, ಸಾಮಾನ್ಯವಾಗಿ ಜನರು ಇದನ್ನು ಆಹಾರಕ್ಕೆ ಒಗ್ಗರಣೆಗೆ ಮಾತ್ರ ಸೀಮಿತವೆಂದು ಪರಿಗಣಿಸುತ್ತಾರೆ. ಆದರೆ ಈ ಸಣ್ಣ ಎಲೆ ನಿಮ್ಮ ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ ಎನ್ನುವುದು ನಿಮಗೆ ಗೊತ್ತಾ?. ಆಯುರ್ವೇದದಲ್ಲಿ, ಕರಿಬೇವಿನ ಎಲೆಗಳನ್ನು ಅನೇಕ ರೋಗಗಳನ್ನು ಗುಣಪಡಿಸುವ ನೈಸರ್ಗಿಕ ಔಷಧವೆಂದು ಪರಿಗಣಿಸಲಾಗುತ್ತದೆ. ಡಾ. ಉಪಾಸನಾ ಬೊಹ್ರಾ ಹೇಳುವಂತೆ ಇದನ್ನು ಪ್ರತಿದಿನ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಜಗಿಯುವುದರಿಂದ ಕೊಲೆಸ್ಟ್ರಾಲ್ ಮತ್ತು ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸಲು ಸಹಾಯಕವಾಗಿದೆ.



ಕಣ್ಣುಗಳು ಮತ್ತು ಕೂದಲಿಗೆ ಪ್ರಯೋಜನಕಾರಿ ಕರಿಬೇವು ವಿಟಮಿನ್ ಎ ಮತ್ತು ಸಿ ಅನ್ನು ಒದಗಿಸುತ್ತದೆ. ಇದರಿಂದಾಗಿ ನಿಮ್ಮ ಕಣ್ಣುಗಳು ಆರೋಗ್ಯಕರವಾಗಿರುತ್ತವೆ. ಇದು ಕೂದಲಿನ ಬೇರುಗಳನ್ನು ಬಲಪಡಿಸುತ್ತದೆ ಮತ್ತು ಅಕಾಲಿಕವಾಗಿ ಕೂದಲು ಬಿಳಿಯಾಗೋದನ್ನು ತಡೆಯುತ್ತದೆ. ಕೂದಲು ಕಪ್ಪಾಗಿರಲು ಕರಿಬೇವು ಹೆಚ್ಚು ಪ್ರಯೋಜನಕಾರಿಯಾಗಿದೆ.

**ಕೊಲೆಸ್ಟ್ರಾಲ್ ಅನ್ನು ನಿಯಂತ್ರಿಸುತ್ತದೆ:** ಕರಿಬೇವು ದೇಹದಲ್ಲಿನ ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಮತ್ತು ಉತ್ತಮ ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸಲು ಕೆಲಸ ಮಾಡುತ್ತದೆ. ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಇದನ್ನು ತಿನ್ನುವುದರಿಂದ ಹೃದಯ ರಕ್ತನಾಳಗಳನ್ನು ಸ್ವಚ್ಛವಾಗಿರಿಸುತ್ತದೆ, ಹೃದಯಾಘಾತದ ಅಪಾಯವನ್ನು ಕಡಿಮೆ ಮಾಡುತ್ತದೆ.



ಸಕ್ಕರೆ ಮಟ್ಟವು ಸಮತೋಲನದಲ್ಲಿರುತ್ತದೆ ಮಧುಮೇಹ ರೋಗಿಗಳಿಗೆ ಕರಿಬೇವು ತುಂಬಾ ಒಳ್ಳೆಯದು. ಇದರಲ್ಲಿರುವ ಮಧುಮೇಹ ವಿರೋಧಿ ಗುಣಗಳು ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದನ್ನು ನಿಯಮಿತವಾಗಿ ತಿನ್ನುವುದರಿಂದ ಇನ್ಸುಲಿನ್ ಚಟುವಟಿಕೆ ಸುಧಾರಿಸುತ್ತದೆ, ಸಕ್ಕರೆ ಮಟ್ಟದಲ್ಲಿ ಹಠಾತ್ ಹೆಚ್ಚಳ ಅಥವಾ ಇಳಿಕೆಯ ಸಮಸ್ಯೆ ಇರುವುದಿಲ್ಲ.

**ಜೀರ್ಣಾಂಗ ವ್ಯವಸ್ಥೆಯನ್ನು ಆರೋಗ್ಯಕರವಾಗಿರಿಸುತ್ತದೆ:** ನಿಮಗೆ ಗ್ಯಾಸ್ಟ್ರಿಕ್, ಮಲಬದ್ಧತೆ ಅಥವಾ ಆಮ್ಲೀಯತೆಯ ಸಮಸ್ಯೆಗಳಿದ್ದರೆ, ಕರಿಬೇವಿನ ಎಲೆಗಳನ್ನು ಅಗಿಯುವುದು ನಿಮಗೆ ಪರಿಣಾಮಕಾರಿ ಪರಿಹಾರವಾಗಿದೆ. ಇದು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ, ದೇಹದಿಂದ ವಿಷವನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ.

**ಇದನ್ನು ಯಾವ ರೀತಿ ಸೇವಿಸಬೇಕು:** ಬೆಳಿಗ್ಗೆ ಎದ್ದ ನಂತರ, 5 ಕರಿಬೇವಿನ ಎಲೆಗಳನ್ನು ಚೆನ್ನಾಗಿ ಜಗಿಯಿರಿ ಮತ್ತು ನಂತರ ಒಂದು ಲೋಟ ಬೆಚ್ಚಗಿನ ನೀರನ್ನು ಕುಡಿಯಿರಿ. ನೀವು ಈ ಅಭ್ಯಾಸವನ್ನು ನಿಮ್ಮ ದೈನಂದಿನ ದಿನಚರಿಯಲ್ಲಿ ಸೇರಿಸಿಕೊಂಡರೆ, ಕೆಲವು ದಿನಗಳಲ್ಲಿ ನೀವು ವ್ಯತ್ಯಾಸವನ್ನು ಕಾಣುವಿರಿ.


### ತೂಕ ಇಳಿಸುವಲ್ಲಿ ಸಹಾಯ ಮಾಡುತ್ತದೆ

**ಕರಿಬೇವಿನ ಎಲೆಗಳಲ್ಲಿರುವ ಫೈಬರ್ ಮತ್ತು ಆಂಟಿ-ಆಕ್ಸಿಡೆಂಟ್‌ಗಳು ದೇಹದ ಕೊಬ್ಬನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ನೀವು ತೂಕ ಇಳಿಸಿಕೊಳ್ಳಲು ಪ್ರಯತ್ನಿಸುತ್ತಿದ್ದರೆ, ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಇದನ್ನು ಸೇವಿಸುವುದು ನಿಮಗೆ ತುಂಬಾ ಪ್ರಯೋಜನಕಾರಿಯಾಗಿದೆ. ತೂಕ ಇಳಿಸಲು ಕರಿಬೇವು ಸಹಕಾರಿಯಾಗಿದೆ.**

# ಬಾನು ಮುಷ್ತಾಕ್ ದೊಡ್ಡತನ ತೋರಲಿ: ಆರೂಢಭಾರತೀ ಶ್ರೀ

• **ಉದಯವಾಹಿನಿ, ಬೆಂಗಳೂರು**

ನಾಡ ಹಬ್ಬ ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿ ಸರ್ಕಾರ ದೊಡ್ಡತನ ತೋರಿದೆ. ಕುಂಕುಮ ಧರಿಸಿ ಹೂವು ಮುಡಿದು ತೀರ್ಥ ಪ್ರಸಾದ ಸ್ವೀಕರಿಸಿ ಬಾನು ಮುಷ್ತಾಕ್ ದೊಡ್ಡತನ ತೋರಲಿ ಎಂದು ರಾಮೋಹಳ್ಳಿಯ ಶ್ರೀ ಸಿದ್ಧಾರೂಢ ಮಿಷನ್ ಆಶ್ರಮದ ಅಧ್ಯಕ್ಷ ಡಾ ಆರೂಢಭಾರತೀ ಸ್ವಾಮೀಜಿ ಹೇಳಿದ್ದಾರೆ.



ಚಾಮುಂಡಿ ದೇವಿಯೇ ಕರೆಸಿಕೊಳ್ಳುತ್ತಿದ್ದಾಳೆ ಎನ್ನುವ ಮೂಲಕ ಬಾನು ಉದ್ಘಾಟನೆಗೆ ಬರುವುದನ್ನು ಖಚಿತ ಪಡಿಸಿದ್ದಲ್ಲದೇ ಚಾಮುಂಡೀ ದೇವಿಯಲ್ಲಿ ಶ್ರದ್ಧಾಭಕ್ತಿಗಳನ್ನು ವ್ಯಕ್ತಪಡಿಸಿರುವುದು ಸಂತಸ ತಂದಿದೆ.

ಆದರೆ ಕುಂಕುಮ ಇಸ್ಲಾಂ ಧರ್ಮದಲ್ಲಿಲ್ಲ, ಚಾಮುಂಡೀ ಬೆಟ್ಟ ಹಿಂದುಗಳ ಸ್ವತ್ತಲ್ಲ ಎಂಬ ಮಾತುಗಳು ಬೇಸರ ತಂದಿವೆ. ಚಾಮುಂಡಿಯಾಗಲೀ ಚಾಮುಂಡೀ ಬೆಟ್ಟವಾಗಲೀ ಭಾರತಕ್ಕೆ ಇಸ್ಲಾಂ ಕ್ರೈಸ್ತಗಳಂತೆ ಹೊರಗಿನಿಂದ ಬಂದವುಗಳಲ್ಲ.

ಮುಸ್ಲಿಂ ಅಲ್ಲದೆಯೂ ಮಸೀದಿಗೆ ಹೋಗಿ ಟೋಪಿ ಧರಿಸಿ ನಮಾಜ್ ಮಾಡುವುದು ತಪ್ಪಲ್ಲವೆಂದ ಬಳಿಕ ಹಿಂದುವಲ್ಲದ ಮಹಿಳೆ ಹಿಂದು ದೇವತೆಯ ಸನ್ನಿಧಿಯಲ್ಲಿ ಕುಂಕುಮ ಧರಿಸುವುದು ತಪ್ಪೇ ಐರಿಷ್‌ನ ಮಾರ್ಗರೇಟ್ ಸಹೋದರಿ ನಿವೇದಿತೆ, ಜರ್ಮನಿಯ ಮ್ಯಾಕ್ಸ್‌ಮುಲ್ಲರ್ ಮೋಕ್ಷಮುಲ್ಲರ್ ಆಗಿರುವಾಗ, ಅಮೇರಿಕದ ಶ್ವೇತಭವನದಂಥ ಕಡೆ ವೇದಘೋಷ ಮೊಳಗಿರುವಾಗ, ಅಬ್ದುಲ್ ಕಲಾಂ ಭಗವದ್ಗೀತೆಯನ್ನು ಪಠಿಸಿರುವಾಗ, ಶಿಶುನಾಳ ಶರೀಫ ಗೋವಿಂದ ಭಟ್ಟರ ಸಯ್ಯದ್ ಅಮೀನ್ ಕಬೀರದಾಸನಾಗಿ ಸಿದ್ಧಾರೂಢರ ಶಿಷ್ಯರಾಗಿರುವಾಗ, ಲವ್ ಜಿಹಾದ್ ನಡೆಯುತ್ತಿರುವಾಗ ಬಾನು ಮುಷ್ತಾಕ್ ಕುಂಕುಮ ಧರಿಸುವುದರಲ್ಲಿ ತಪ್ಪೇನು? ಎಂದು ಅವರು ಪ್ರಶ್ನಿಸಿದ್ದಾರೆ.

# ಕೊಯಮತ್ತೂರು ಸ್ಪೆಷಲ್ ಚಟ್ನಿ..ಇಡ್ಲಿ ಜೊತೆ ತಿಂದ್ರೆ ಬೆರಳು ಚಪ್ಪರಿಸುತ್ತೀರ!



ಒಮ್ಮೆ ತಿಂದರೆ ಕಳೆದುಹೋಗ್ತೀರ ಇಡ್ಲಿಗೆ ಸೂಪರ್ ಜೋಡಿ, ಕೋಯಮತ್ತೂರಿನ ರಸ್ತೆಗಳ ಫೇಮಸ್ ಚಟ್ನಿ ಇದು. ಬೆಳಗ್ಗೆ ಬಿಸಿ ಬಿಸಿ ಮಲ್ಲಿಗೆ ಹೂವಿನಂತಹ ಮೃದುವಾದ ಇಡ್ಲಿಗಳಿಗೆ ಉತ್ತಮ ಚಟ್ನಿ ಇಲ್ಲದಿದ್ದರೆ, ಆ ಇಡ್ಲಿಗಳ ರುಚಿ ಅಪೂರ್ಣ. ಪ್ರತಿದಿನ ಮಾಡುವ ತೆಂಗಿನಕಾಯಿ ಚಟ್ನಿ, ಶೇಂಗಾ ಚಟ್ನಿ ಹೊರತುಪಡಿಸಿ, ಹೊಸದಾದ, ರುಚಿಕರವಾದ, ಮತ್ತೆ ಮತ್ತೆ ತಿನ್ನಬೇಕೆನಿಸುವ ಚಟ್ನಿಗಾಗಿ ಹುಡುಕುತ್ತಿದ್ದೀರಾ? ಹಾಗಿದ್ದರೆ ಕೋಯಂಬತ್ತೂರು ರೋಡ್‌ಸೈಡ್ ಟೊಮೆಟೊ ವಾಟರ್ ಚಟ್ನಿಯನ್ನು ಒಮ್ಮೆ ಪ್ರಯತ್ನಿಸಿ. ಹೆಸರೇ ಸೂಚಿಸುವಂತೆ ಈ ಚಟ್ನಿ ಸ್ವಲ್ಪ ನೀರಾಗಿ, ತೆಳ್ಳಗಿರುತ್ತದೆ. ಆದರೆ, ಅದರ ರುಚಿ ಮಾತ್ರ ಅದ್ಭುತ. ಕೋಯಂಬತ್ತೂರು ಬೀದಿ ಬದಿಯ ಬಂಡಿಗಳ ಮೇಲೆ ಮಾರಾಟವಾಗುವ ಈ ಚಟ್ನಿಗೆ ಒಂದು ವಿಶೇಷತೆ ಇದೆ. ಇದರ ಸುವಾಸನೆ, ಇದರ ರುಚಿ ನಿಮ್ಮನ್ನು ಮಂತ್ರಮುಗ್ಧರನ್ನಾಗಿಸುತ್ತದೆ. ಈ ಚಟ್ನಿಯೊಂದಿಗೆ ಒಮ್ಮೆ ಇಡ್ಲಿ ತಿಂದರೆ, ನೀವು ಸಾಮಾನ್ಯವಾಗಿ ತಿನ್ನುವುದಕ್ಕಿಂತ ನಾಲ್ಕೈದು ಇಡ್ಲಿಗಳನ್ನು ಹೆಚ್ಚಾಗಿ ತಿನ್ನುತ್ತೀರಿ. ಇದು ಇಡ್ಲಿಗಳಿಗೆ ಮಾತ್ರವಲ್ಲ, ಗರಿಗರಿಯಾದ ದೋಸೆ, ಮೃದುವಾದ ಉತ್ತಪ್ಪಂ, ಬಿಸಿ ಬಿಸಿ ವಡೆ.. ಹೀಗೆ ಯಾವುದೇ ತಿಂಡಿಯೊಂದಿಗೆ ತಿಂದರೂ ಆ ಟೇಸ್ಟ್ ನೆಕ್ಸ್ಟ್ ಲೆವೆಲ್. ಟೊಮೆಟೊ ವಾಟರ್ ಚಟ್ನಿಯನ್ನು ಹೇಗೆ ತಯಾರಿಸುವುದು ಎಂದು ಇಲ್ಲಿ ನೋಡಿ.

**ಟೊಮೆಟೊ ವಾಟರ್ ಚಟ್ನಿ ತಯಾರಿಸುವ ವಿಧಾನ :** ಮೊದಲು ಟೊಮೆಟೊಗಳನ್ನು ಚೆನ್ನಾಗಿ ತೊಳೆಯಿರಿ. ಬಳಿಕ ಅವುಗಳ ಮೇಲೆ ಸಣ್ಣಗೆ ಗಾಯ ಮಾಡಿ. ಈಗ ಒಂದು ಪಾತ್ರೆಯಲ್ಲಿ ಒಂದೂವರೆ ಕಪ್ ನೀರು ಹಾಕಿ ಒಲೆಯ ಮೇಲೆ ಇಟ್ಟು, ಈ ಟೊಮೆಟೊಗಳನ್ನು ಅದರಲ್ಲಿ ಹಾಕಿ. ಟೊಮೆಟೊ ಸಿಪ್ಪೆ ಸುಲಭವಾಗಿ ಬಿಡಿಸಿಕೊಳ್ಳುವವರೆಗೆ ಸುಮಾರು ಐದು ನಿಮಿಷಗಳ ಕಾಲ ಬೇಯಿಸಿ. ಬೇಯಿಸಿದ ಟೊಮೆಟೊಗಳನ್ನು ನೀರಿನಿಂದ ತೆಗೆದು ಅವುಗಳ ಸಿಪ್ಪೆಯನ್ನು ತೆಗೆಯಿರಿ. ಅವು ಸಂಪೂರ್ಣವಾಗಿ ತಣ್ಣಗಾದ ನಂತರ ಮಿಕ್ಸಿ ಜಾರ್‌ಗೆ ಹಾಕಿ ನುಣ್ಣಗೆ ರುಬ್ಬಿ ಅಥವಾ ಪ್ಯೂರಿ ಮಾಡಿ ಪಕ್ಕಕ್ಕೆ ಇಡಿ. ಈಗ ಒಲೆಯ ಮೇಲೆ ಆಳವಾದ ಬಾಣಲೆ ಇಟ್ಟು ಎಣ್ಣೆ ಹಾಕಿ. ಎಣ್ಣೆ ಬಿಸಿಯಾದ ನಂತರ, ಸಾಸಿವೆ, ಜೀರಿಗೆ ಹಾಕಿ ಚಟಪಟ ಸಿಡಿಯುವವರೆಗೆ ಹುರಿಯಿರಿ. ಸಾಸಿವೆ ಚಟಪಟನೆ ಸಿಡಿದ ನಂತರ ಸಣ್ಣಗೆ ಕತ್ತರಿಸಿದ ಈರುಳ್ಳಿ ಚೂರುಗಳು, ಹಸಿ ಮೆಣಸಿನಕಾಯಿ, ಕರಿಬೇವಿನ ಎಲೆಗಳನ್ನು ಹಾಕಿ, ಈರುಳ್ಳಿ ಗೋಲ್ಡ್ ಕಲರ್ ಬರುವವರೆಗೆ ಚೆನ್ನಾಗಿ ಹುರಿಯಿರಿ. ಈರುಳ್ಳಿ ಚೆನ್ನಾಗಿ ಫ್ರೈ ಆದ ಬಳಿಕ ಮೊದಲೇ ತಯಾರಿಸಿಟ್ಟ ಟೊಮೆಟೊ ಪ್ಯೂರಿಯನ್ನು ಬಾಣಲೆಗೆ ಹಾಕಿ. ಅದರೊಂದಿಗೆ ಮತ್ತೊಂದು ಒಂದೂವರೆ ಕಪ್ ನೀರು ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ಈಗ ಅರಿಶಿನ, ಮೆಣಸಿನ ಪುಡಿ, ಕೊತ್ತಂಬರಿ ಪುಡಿ, ರುಚಿಗೆ ತಕ್ಕಷ್ಟು ಉಪ್ಪು ಹಾಕಿ. ಗಂಟುಗಳಿಲ್ಲದೆ ಎಲ್ಲವೂ ಚೆನ್ನಾಗಿ ಬೆರೆಯುವಂತೆ ಸೌಟಿನಿಂದ ತಿರುಗಿಸಿ. ಉರಿಯನ್ನು ಮಧ್ಯಮಕ್ಕೆ ಇಟ್ಟು ಚಟ್ನಿಯಿಂದ ಹಸಿ ವಾಸನೆ ಹೋಗಿ, ಎಣ್ಣೆ ಮೇಲೆ ಬರುವವರೆಗೆ ಸುಮಾರು 10 ನಿಮಿಷಗಳ ಕಾಲ ಬೇಯಿಸಿ. ಹೀಗೆ ಮಾಡಿದರೆ ಚಟ್ನಿ ಸ್ವಲ್ಪ ದಪ್ಪವಾಗುತ್ತದೆ. ಅಂತಿಮವಾಗಿ ಸಣ್ಣಗೆ ಕತ್ತರಿಸಿದ ಕೊತ್ತಂಬರಿ ಸೊಪ್ಪನ್ನು ಹಾಕಿ. ಒಮ್ಮೆ ಮಿಕ್ಸ್ ಮಾಡಿ. ಬಳಿಕ ಗ್ಯಾಸ್ ಅಥವಾ ಒಲೆ ಆಫ್ ಮಾಡಿ. ಇಷ್ಟು ಮಾಡಿದರೆ ಘಮಘಮಿಸುವ, ಬಾಯಲ್ಲಿ ನೀರೂರಿಸುವ ಕೋಯಂಬತ್ತೂರು ರೋಡ್‌ಸೈಡ್ ಟೊಮೆಟೊ ವಾಟರ್ ಚಟ್ನಿ ಸಿದ್ಧವಾಗಲಿದೆ. ಇದನ್ನು ತಯಾರಿಸುವ ವಿಧಾನ ಸ್ವಲ್ಪ ವಿಭಿನ್ನವಾಗಿ ಕಂಡರೂ, ಒಮ್ಮೆ ಮಾಡಿ ನೋಡಿದರೆ ಮತ್ತೆ ಮತ್ತೆ ಇದನ್ನೇ ತಿನ್ನಬೇಕು ಅಂತೀರಾ. ಮನೆಯವರೆಲ್ಲರೂ ವಾಹ್, ಏನು ಚಟ್ನಿ ಮಾಡಿದ್ದೀರಿ ಅನ್ನೋದು ಖಚಿತ.

### ಟೊಮೆಟೊ ವಾಟರ್ ಚಟ್ನಿಗೆ ಬೇಕಾಗುವ ಸಾಮಗ್ರಿಗಳು

- ಚೆನ್ನಾಗಿ ಹಣ್ಣಾದ ಟೊಮೆಟೊ
- ಅಡುಗೆ ಎಣ್ಣೆ
- ಜೀರಿಗೆ
- ಸಾಸಿವೆ
- ಈರುಳ್ಳಿ
- ಹಸಿ ಮೆಣಸಿನಕಾಯಿ
- ಕರಿಬೇವಿನ ಎಲೆಗಳು
- ಅರಿಶಿನ
- ಮೆಣಸಿನ ಪುಡಿ
- ಕೊತ್ತಂಬರಿ ಪುಡಿ
- ಕೊತ್ತಂಬರಿ ಸೊಪ್ಪು
- ರುಚಿಗೆ ತಕ್ಕಷ್ಟು ಉಪ್ಪು



# ಡಿಕೆಶಿ ಬೆಂಬಲಿಗರ ವಿರುದ್ಧದ ಕ್ರಿಮಿನಲ್ ಪ್ರಕರಣಗಳು ಸೇರಿ 60 ಕೇಸ್ ವಾಪಸ್

• **ಉದಯವಾಹಿನಿ, ಬೆಂಗಳೂರು**

ಜಾರಿ ನಿರ್ದೇಶನಾಲಯ ಬಂಧಿಸಿದ ನಂತರ ಕಲ್ಲು ತೂರಾಟ ನಡೆಸಿದ ಆರೋಪದ ಮೇಲೆ ತಮ್ಮ ಬೆಂಬಲಿಗರ ವಿರುದ್ಧ ದಾಖಲಾಗಿರುವ ಪ್ರಕರಣಗಳು ಸೇರಿದಂತೆ ಹಲವಾರು ಕ್ರಿಮಿನಲ್ ಪ್ರಕರಣಗಳನ್ನು ಹಿಂತೆಗೆದುಕೊಳ್ಳುವ ರಾಜ್ಯ ಸರ್ಕಾರದ ನಿರ್ಧಾರವನ್ನು ಡಿಕೆ ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ.

ಬಿಜೆಪಿ, ಕಾಂಗ್ರೆಸ್ ಸದಸ್ಯರು, ಕಾರ್ಯಕರ್ತರು ವಿವಿಧ ಸಂಘಟನೆಗಳ ಸದಸ್ಯರು ಸೇರಿದಂತೆ ಹಲವರ ಮೇಲಿನ ಕ್ರಿಮಿನಲ್ ಪ್ರಕರಣಗಳನ್ನು ಸರ್ಕಾರ ಹಿಂತೆಗೆದುಕೊಂಡಿದೆ ಎಂದು ಅವರು ಹೇಳಿದರು. ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ 60 ಪ್ರಕರಣಗಳನ್ನು ಹಿಂಪಡೆಯಲು ಅನುಮೋದನೆ ನೀಡಲಾಗಿದೆ.

ಸಂಪುಟವು ಹಿಂತೆಗೆದುಕೊಳ್ಳಲು ನಿರ್ಧರಿಸಿರುವ ಪ್ರಕರಣಗಳಲ್ಲಿ 2019ರ ಚಿತ್ತಾಪುರದಲ್ಲಿ ನಡೆದ ಕಲ್ಲು ತೂರಾಟ ಪ್ರಕರಣ ಮತ್ತು 2019ರಲ್ಲಿ ಜಾರಿ ನಿರ್ದೇಶನಾಲಯ ಇಡಿ ಬಂಧಿಸಿದ ನಂತರ ಕನಕಪುರದಲ್ಲಿ ಬಸ್ಸುಗಳು ಮತ್ತು ಸರ್ಕಾರಿ ಕಚೇರಿಗಳ ಮೇಲೆ ಕಲ್ಲು ತೂರಾಟ ನಡೆಸಿದ ಆರೋಪದ ಮೇಲೆ ಡಿಕೆ ಶಿವಕುಮಾರ್ ಅವರ ಬೆಂಬಲಿಗರ ವಿರುದ್ಧ ದಾಖಲಾಗಿರುವ ಪ್ರಕರಣಗಳು ಸೇರಿವೆ. ಆಗ ಶಿವಕುಮಾರ್ ಶಾಸಕರಾಗಿದ್ದರು. 'ಹಲವಾರು ಪ್ರಕರಣಗಳನ್ನು ಹಿಂಪಡೆಯಲಾಗಿದೆ. ನಾವು ಬಿಜೆಪಿ, ಕಾಂಗ್ರೆಸ್ ಜನರ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನು ಹಿಂಪಡೆದಿದ್ದೇವೆ. ನನ್ನನ್ನು ಇ.ಡಿ ಬಂಧಿಸಿದಾಗ, ಬಿಜೆಪಿ ಉದ್ದೇಶಪೂರ್ವಕವಾಗಿ ನಮ್ಮ ಕಾರ್ಯಕರ್ತರ ವಿರುದ್ಧ ಕೆಲವು ಪ್ರಕರಣಗಳನ್ನು ದಾಖಲಿಸಿತ್ತು. ಈ ಹಿಂದೆ, ಕೋವಿಡ್ ಸಮಯದಲ್ಲಿ ಆಗಿನ ಬಿಜೆಪಿ ಸರ್ಕಾರ ನನ್ನ ವಿರುದ್ಧ, ಈಗ ಸಿದ್ದರಾಮಯ್ಯ ಮತ್ತು ಈಗ ಸಚಿವರಾಗಿರುವ ನಮ್ಮ ಹಲವಾರು ನಾಯಕರ ವಿರುದ್ಧ ಪ್ರಕರಣಗಳನ್ನು ದಾಖಲಿಸಿತ್ತು. ನಾವು ಸುಮ್ಮನೆ ಕುಳಿತುಕೊಳ್ಳಬೇಕೇ? ಎಂದು ಶಿವಕುಮಾರ್ ಪ್ರಶ್ನಿಸಿದರು.

**ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಅವರು, ರೈತರು, ಭಾಷೆ ಮತ್ತು ನ್ಯಾಯಕ್ಕಾಗಿ ಪ್ರತಿಭಟನೆ ನಡೆಸಿದವರ ವಿರುದ್ಧದ ಹಲವಾರು ಪ್ರಕರಣಗಳನ್ನು ಹಿಂಪಡೆಯಲಾಗಿದೆ. ಇದೊಂದೇ ಪ್ರಕರಣವಲ್ಲ, ನಮ್ಮ ಸರ್ಕಾರ ಎಲ್ಲಾ ಪಕ್ಷಗಳಿಗೆ ಸೇರಿದ ಜನರ ವಿರುದ್ಧದ ನೂರಾರು ಪ್ರಕರಣಗಳನ್ನು ಹಿಂತೆಗೆದುಕೊಂಡಿದೆ. ಬಿಜೆಪಿ ಕೋರಿಕೆ ಮೇರೆಗೆ ನಾವು ಪ್ರಕರಣಗಳನ್ನು ಹಿಂತೆಗೆದುಕೊಂಡಿದ್ದೇವೆ. ರೈತ ಸಂಘ ಮತ್ತು ಕಾರ್ಯಕರ್ತರ ವಿರುದ್ಧವೂ ಸಹ ಪ್ರಕರಣಗಳನ್ನು ಹಿಂಪಡೆಯಲಾಗಿದೆ' ಎಂದು ಅವರು ಹೇಳಿದರು.**




ತಮ್ಮನ್ನು ಬಂಧಿಸಿದ ಇ.ಡಿ ಪ್ರಕರಣವನ್ನು ನ್ಯಾಯಾಲಯಗಳು ವಜಾಗೊಳಿಸಿವೆ.

ನಾನು ಬಂಧಿಸಲ್ಪಟ್ಟಾಗ ನನ್ನ ವಿರುದ್ಧ ಮಾತನಾಡಿದವರು ನಾನು ಜಾಮೀನಿನ ಮೇಲೆ ಹೊರಬಂದಾಗ ನನಗೆ ದೊರೆತ ಸ್ವಾಗತದ ಬಗ್ಗೆ ಮಾತನಾಡಿದವರು, ಪ್ರಕರಣ ವಜಾಗೊಂಡಾಗ ಏಕೆ ಮಾತನಾಡಲಿಲ್ಲ ಈಗ ಏಕೆ ಈ ಪ್ರಕರಣಗಳನ್ನು ಹಿಂತೆಗೆದುಕೊಂಡಾಗ ಆ ಎಲ್ಲಾ ವಿಷಯಗಳನ್ನು ಈಗ ಚರ್ಚಿಸುವುದು ಬೇಡ' ಎಂದು ಹೇಳಿದರು.

# ಜುಮ್ಮೆನಿಸುವಿಕೆ, ಕೈಕಾಲುಗಳಲ್ಲಿ ಮರಗಟ್ಟುವಿಕೆ, ಚುಚ್ಚುವಿಕೆ




ಮಧುಮೇಹವು ಜೀವಮಾನವಿಡೀ ಗುಣಪಡಿಸಲಾಗದ ಕಾಯಿಲೆಯಾಗಿದೆ. ಆದರೆ ಇದನ್ನು ನಿಯಂತ್ರಿಸದಿದ್ದರೆ, ಅದು ನರಗಳಿಗೆ ಹಾನಿಯನ್ನುಂಟು ಮಾಡಬಹುದು. ಆದ್ದರಿಂದ, ಮಧುಮೇಹ ರೋಗಿಗಳು ಇದರ ಬಗ್ಗೆ ಜಾಗರೂಕರಾಗಿರಬೇಕು. ಮಧುಮೇಹ ನರರೋಗದ ಲಕ್ಷಣಗಳು ಯಾವುವು ಮತ್ತು ಅದನ್ನು ಹೇಗೆ ನಿರ್ವಹಿಸುವುದು ಎಂಬುದನ್ನು ಈ ಲೇಖನದಲ್ಲಿ ಮಾಹಿತಯನ್ನು ಹಂಚಿಕೊಂಡಿದ್ದೇವೆ ಇಂದಿನ ದಿನಗಳಲ್ಲಿ ಹೇಗೆ ಆಗಿಬಿಟ್ಟಿದೆ ಎಂದರೆ ವಯಸ್ಸಾದ ಮೇಲೆ ಬರಬೇಕಾಗಿದ್ದ ಕೆಲವೊಂದು ಕಾಯಿಲೆಗಳು, ವಯಸ್ಸಲ್ಲದ ವಯಸ್ಸಿನಲ್ಲಿ ಕಾಣಿಸಿಕೊಂಡು ಇಡೀ ಜೀವನ ಪರ್ಯಂತ ಕಾಯಿಲೆಯಿಂದ ನರಳುವಂತೆ ಮಾಡುತ್ತಿದೆ. ಇದಕ್ಕೊಂದು ಒಳ್ಳೆಯ ಉದಾಹರಣೆ ಎಂದರೆ ಮಧುಮೇಹ ಕಾಯಿಲೆ. ಮಧುಮೇಹ ಕಾಣಿಸಿಕೊಂಡರೆ ಜೀವನ ಪರ್ಯಂತ ಇದರ ಜೊತೆಗೆಯೇ ಕಾಲ ಕಳೆಯುವ ಪರಿಸ್ಥಿತಿ ಎದುರಾಗುತ್ತದೆ, ಪ್ರಮುಖವಾಗಿ ವ್ಯಕ್ತಿಯ ರಕ್ತದಲ್ಲಿನ ಸಕ್ಕರೆ ಮಟ್ಟ ಹೆಚ್ಚಾಗುತ್ತದೆ. ಈ ಕಾಯಿಲೆಯಲ್ಲಿ, ಮೇದೋಜ್ಜೀರಕ ಗ್ರಂಥಿಯು ಸರಿಯಾದ ಪ್ರಮಾಣದ ಇನ್ಸುಲಿನ್ ಉತ್ಪಾದಿಸಲು ಸಾಧ್ಯವಾಗುವುದಿಲ್ಲ ಅಥವಾ ದೇಹದ ಜೀವಕೋಶಗಳು ಇನ್ಸುಲಿನ್ ಅನ್ನು ಸರಿಯಾಗಿ ಬಳಸಲು ಸಾಧ್ಯವಾಗುವುದಿಲ್ಲ. ಇನ್ಸುಲಿನ್ ರಕ್ತದಲ್ಲಿನ ಗ್ಲೂಕೋಸ್ ಮಟ್ಟವನ್ನು ನಿರ್ವಹಿಸುವ ಹಾರ್ಮೋನ್ ಆಗಿದೆ. ಆದ್ದರಿಂದ, ಅದರ ಕೊರತೆಯಿಂದಾಗಿ, ರಕ್ತದಲ್ಲಿನ ಸಕ್ಕರೆ ಮಟ್ಟವು ಹೆಚ್ಚಾಗಲು ಪ್ರಾರಂಭವಾಗುತ್ತದೆ ಮತ್ತು ಹೈಪರ್ಗ್ಲೈಸೀಮಿಯಾ ಸಂಭವಿಸಬಹುದು.



**ಮೇಯೊ ಕ್ಲಿನಿಕ್ ಪ್ರಕಾರ:** ಭಾರತದಲ್ಲಿ 8 ಕೋಟಿಗೂ ಹೆಚ್ಚು ಜನರು ಮಧುಮೇಹದಿಂದ ಬಳಲುತ್ತಿದ್ದಾರೆ. ಅದಕ್ಕಾಗಿಯೇ ಭಾರತವನ್ನು ವಿಶ್ವದ ಮಧು ಮೇಹ ರಾಜಧಾನಿ ಎಂದು ಕರೆಯಲಾಗುತ್ತದೆ. ಸಮಸ್ಯೆಯೆಂದರೆ ಹೆಚ್ಚಿನ ಜನರಿಗೆ ತಮಗೆ ಮಧುಮೇಹ ಇದೆ ಎಂದು ತಿಳಿದಿರುವುದಿಲ್ಲ. ಆದ್ದರಿಂದ, ರಕ್ತದಲ್ಲಿನ ಸಕ್ಕರೆ ಮಟ್ಟವು ಅನಿಯಂತ್ರಿತವಾಗುವ ಅಪಾಯ ಹೆಚ್ಚಾಗುತ್ತದೆ. ಮಧುಮೇಹ ರೋಗಿಗಳಲ್ಲಿ ನರಗಳ ಹಾನಿಯನ್ನು ಮಧುಮೇಹ ನರರೋಗ ಎಂದು ಕರೆಯಲಾಗುತ್ತದೆ. ಮೇಯೊ ಕ್ಲಿನಿಕ್ ಪ್ರಕಾರ, ಸುಮಾರು 50 ಪ್ರತಿಶತ ಮಧುಮೇಹ ರೋಗಿಗಳು ಮಧುಮೇಹ ನರರೋಗದಿಂದ ಬಳಲುತ್ತಿದ್ದಾರೆ. ಆದ್ದರಿಂದ, ಅದರ ಲಕ್ಷಣಗಳನ್ನು ತಿಳಿದುಕೊಳ್ಳುವುದು ಬಹಳ ಮುಖ್ಯ.

**ಕಾಯಿಲೆ ನರ ಹಾನಿಯ ಅಪಾಯವನ್ನು ಹೆಚ್ಚಿಸುತ್ತದೆ:** ಮಧುಮೇಹವು ರಕ್ತದಲ್ಲಿನ ಸಕ್ಕರೆಯಲ್ಲಿ ಏರಿಳಿತಗಳನ್ನು ಉಂಟು ಮಾಡುವುದಲ್ಲದೆ ಇತರ ಕಾಯಿಲೆಗಳಿಗೂ ಕಾರಣವಾಗುವ ಕಾಯಿಲೆಯಾಗಿದೆ.

ಇದರಲ್ಲಿ, ರಕ್ತದಲ್ಲಿನ ಸಕ್ಕರೆ ಮಟ್ಟವು ಹೆಚ್ಚಾಗುತ್ತದೆ. ಕಾಲಾ ನಂತರದಲ್ಲಿ, ಹೆಚ್ಚಿದ ಸಕ್ಕರೆ ಮಟ್ಟವು ನರಗಳಿಗೆ ತೀವ್ರ ಹಾನಿಯನ್ನುಂಟು ಮಾಡುತ್ತದೆ. ಇದು ಮಧುಮೇಹ ನರ ಹಾನಿಯ ಅಪಾಯವನ್ನು ಹೆಚ್ಚಿಸುತ್ತದೆ. ಮರಗಟ್ಟುವಿಕೆ, ಕೈ ಮತ್ತು ಕಾಲುಗಳಲ್ಲಿ ಜುಮ್ಮೆನಿಸುವಿಕೆಯೊಂದಿಗೆ ನೋವು ಸ್ಥಿತಿಯ ಪ್ರಮುಖ ಲಕ್ಷಣಗಳಾಗಿವೆ. ಈ ಸ್ಥಿತಿಯ ಲಕ್ಷಣಗಳು ಸಮಯಕ್ಕೆ ಸರಿಯಾಗಿ ಗುರುತಿಸಲ್ಪಟ್ಟರೆ, ಅದು ಗಂಭೀರ ಪರಿಣಾಮಗಳನ್ನು ತಡೆಯಲು ಸಹಾಯ ಮಾಡುತ್ತದೆ. ನೀವು ಮಧುಮೇಹ ರೋಗಿಯಾಗಿದ್ದರೆ ಮತ್ತು ಇವುಗಳಲ್ಲಿ ಯಾವುದನ್ನಾದರೂ ಅನುಭವಿಸಿದರೆ, ಕೂಡಲೇ ವೈದ್ಯರನ್ನು ಸಂಪರ್ಕಿಸಿ.

**ನರರೋಗ ಎಂದರೆ:** ನರರೋಗ ಎಂದರೆ ಅಂಗೈ, ಅಡಿಭಾಗದಲ್ಲಿ ಜುಮ್ಮೆನಿಸುವಿಕೆ, ತಾಪಮಾನ ಬದಲಾವಣೆಗಳು ಅಥವಾ ನೋವನ್ನು ಅನುಭವಿಸುವ ಸಾಮರ್ಥ್ಯ ಕಡಿಮೆಯಾಗುವುದು. ಇದರ ಹೊರತಾಗಿ, ಸುಡುವ ಸಂವೇದನೆ, ಸೂಜಿ ಅಥವಾ ಚೂಪಾದ ವಸ್ತು ಚುಚ್ಚಿದ ಭಾವನೆ, ಜುಮ್ಮೆನಿಸುವಿಕೆ ಮತ್ತು ಮುಟ್ಟಿದಾಗ ಏನನ್ನೂ ಅನುಭವಿಸಲು ಅಸಮರ್ಥತೆ ಮುಂತಾದ ಲಕ್ಷಣಗಳು ಮಧುಮೇಹ ನರರೋಗದಲ್ಲಿ ಕಂಡುಬರುತ್ತವೆ. ಕೆಲವು ಜನರಲ್ಲಿ, ಈ ಸ್ಥಿತಿಯು ಎಷ್ಟು ಹದಗೆಡುತ್ತದೆಯೆಂದರೆ ಅವರು ಮಲಗಿರುವಾಗ ತಣ್ಣನೆಯ ನೆಲ ಅಥವಾ ಬೆಡ್ ಶೀಟ್ ಅನ್ನು ಸಹ ಅನುಭವಿಸಲು ಸಾಧ್ಯವಾಗುವುದಿಲ್ಲ. ಈ ಸ್ಥಿತಿಯು ದೀರ್ಘಕಾಲದವರೆಗೆ ಹೀಗೆಯೇ ಇದ್ದರೆ, ಪಾದದ ಹುಣ್ಣು, ಸೋಂಕು ಮತ್ತು ಕೆಲವೊಮ್ಮೆ ಮೂಳೆ ಹಾನಿಯಂತಹ ಅನೇಕ ಗಂಭೀರ ಸಮಸ್ಯೆಗಳು ಸಹ ಸಂಭವಿಸಬಹುದು. ಇದರ ಕೆಲವು ಲಕ್ಷಣಗಳೆಂದರೆ, ಕಡಿಮೆ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಗಮನಿಸದೇ ಇರುವುದು, ನೋವು ಅನುಭವಿಸುವ ಸಾಮರ್ಥ್ಯ ಕಡಿಮೆಯಾಗುವುದು, ಹೃದಯಾಘಾತದ ಸಮಯದಲ್ಲಿ ಇತರರಿಗಿಂತ ಕಡಿಮೆ ನೋವು ಅನುಭವಿಸುವುದು, ಮೂತ್ರ ವಿಸರ್ಜನೆಯ ತೊಂದರೆಗಳು ಮತ್ತು ಆಹಾರವನ್ನು ಜೀರ್ಣಿಸಿ ಕೊಳ್ಳಲು ಹೆಚ್ಚು ಸಮಯ ತೆಗೆದುಕೊಳ್ಳುವುದು ಮತ್ತು ನಿಮಿರುವಿಕೆಯ ಅಪಸಾಮಾನ್ಯ ಕ್ರಿಯೆ ಪುರುಷರಲ್ಲಿಯೂ ಸಂಭವಿಸಬಹುದು ಎನ್ನುತ್ತಾರೆ ಡಾ. ಸಾಹಿಲ್ ಕೊಹ್ಲಿ (ಗುರುಗ್ರಾಮ್‌ನ ಮ್ಯಾಕ್ಸ್ ಆಸ್ಪತ್ರೆಯಲ್ಲಿ ನರವಿಜ್ಞಾನ ಮತ್ತು ನರವಿಜ್ಞಾನದ ಮುಖ್ಯ ಸಲಹೆಗಾರ).

**ಮಧುಮೇಹ ನರರೋಗದ ಲಕ್ಷಣಗಳು:** ಹೃದಯದ ಬಡಿತದಲ್ಲಿ ಹೆಚ್ಚಳ ಹೆಲ್ತ್‌ಲೈನ್ ಪ್ರಕಾರ ಮಧುಮೇಹ ನರರೋಗದಲ್ಲಿ, ವ್ಯಕ್ತಿಯ ಹೃದಯ ಬಡಿತ ಹೆಚ್ಚಾಗಲು ಪ್ರಾರಂಭಿಸುತ್ತದೆ, ಇದು ರಕ್ತ ಪರಿಚಲನೆಯ ಮೇಲೂ ಪರಿಣಾಮ ಬೀರುತ್ತದೆ.

ಶಿಕ್ಷಕರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಸಚಿವ ಡಿ.ಸುಧಾಕರ್ ಅಭಿಮತ

# ಸಂಪದ್ಭರಿತ ಮಾನವ ಸಂಪನ್ಮೂಲದ ನಿರ್ಮಾಣ ಶಿಕ್ಷಕರಿಂದ ಮಾತ್ರ ಸಾಧ್ಯ

• ಉದಯವಾಹಿನಿ ಚಿತ್ರದುರ್ಗ

ಒಂದು ದೇಶ ಅಭಿವೃದ್ಧಿಯಾಗಬೇಕಾದರೆ ಆ ದೇಶದ ಮಾನವ ಸಂಪನ್ಮೂಲ ಸಂಪದ್ಭರಿತವಾಗಿರಬೇಕು. ಈ ಸಂಪದ್ಭರಿತ ಮಾನವ ಸಂಪನ್ಮೂಲದ ನಿರ್ಮಾಣ ಶಿಕ್ಷಕರಿಂದ ಮಾತ್ರ ಸಾಧ್ಯ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ನಗರದ ಕೆ.ಇ.ಬಿ ಸಮುದಾಯ ಭವನದಲ್ಲಿ ಶುಕ್ರವಾರ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಲಾದ ಶಿಕ್ಷಕರ ದಿನಾಚರಣೆ-ಡಾ.ಸರ್ವಪಲ್ಲಿ ರಾಧಾಕೃಷ್ಣನ್ ರವರ ಜನ್ಮದಿನೋತ್ಸವ ಹಾಗೂ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಇಂದಿಗೂ ಶಿಕ್ಷಕರಿಗೆ ಒಳ್ಳೆಯ ಗೌರವವಿದೆ. ಗುರುವೇ ನಮಃ ಎಂದು ನಮಿಸುವ ಸಮಾಜ ಗುರುಗಳಿಂದ ಶ್ರೇಷ್ಠವಾದದನ್ನು ಬಯಸುತ್ತದೆ ಎನ್ನುವುದನ್ನು ಅರಿಯಬೇಕಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನದಲ್ಲಿಯೂ ಶಿಕ್ಷಕರು ನಿರ್ಣಾಯಕ ಪಾತ್ರ ವಹಿಸುತ್ತಾರೆ ಮತ್ತು ಅವರ ಬದುಕು ಶಿಕ್ಷಕರಿಂದ ಮಾತ್ರ ಬೆಳಗಲು ಸಾಧ್ಯ ಎಂದು ಅರಿತು ಕೆಲಸ ಮಾಡಬೇಕಾಗಿದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

> ಡಾ.ಸರ್ಪಪಲ್ಲಿ ರಾಧಾಕೃಷ್ಣನ್ ಅವರು ಭಾರತದ ಒಬ್ಬ ಅಗ್ರಗಣ್ಯ ಶಿಕ್ಷಕ, ತತ್ವಜ್ಞಾನಿ ಮತ್ತು ರಾಜನೀತಿ ತಜ್ಞರಾಗಿದ್ದರು ಹಾಗೂ ಭಾರತ ರಾಷ್ಟ್ರಪತಿಯಾಗಿ ಸೇವೆ ಸಲ್ಲಿಸಿದವರು. ಶಿಕ್ಷಣದ ಬಗ್ಗೆ ಅವರ ಅಚಲ ಭಕ್ತಿಯಿಂದಾಗಿ, ಅವರ ಜನ್ಮ ದಿನವಾದ ಸೆಪ್ಟೆಂಬರ್ 05ಅನ್ನು ದೇಶಾದ್ಯಂತ ಶಿಕ್ಷಕರ ದಿನವಾಗಿ ಆಚರಿಸಲಾಗುತ್ತದೆ. ದೇಶ, ಸಮಾಜವನ್ನು ಕಟ್ಟುವ, ಸರಿದಾರಿಗೆ ತರುವ ಅತ್ಯಂತ ಪ್ರಮುಖ ಪಾತ್ರವನ್ನು ಶಿಕ್ಷಕರು ನಿರ್ವಹಿಸುತ್ತಿದ್ದಾರೆ. ನಿಷ್ಠೆ, ಶ್ರದ್ಧೆಯಿಂದ ನಿತ್ಯವೂ ಒತ್ತಡಗಳ ಮಧ್ಯೆ ಶಿಕ್ಷಕರು ತಮ್ಮ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದ ಅವರು, ಮಗುವನ್ನು ಜವಾಬ್ದಾರಿಯುತ ನಾಗರೀಕನನ್ನಾಗಿ ಮಾಡುವಲ್ಲಿ ಶಿಕ್ಷಕರ ಪಾತ್ರ ಬಹಳ ಅಮೂಲ್ಯವಾದುದು.
>
> -ಕೆ.ಎಸ್.ನವೀನ್, ವಿಧಾನ ಪರಿಷತ್ ಶಾಸಕರಾದ

**ಬದ್ಧತೆಯಿಂದ ಕಾರ್ಯನಿರ್ವಹಿಸಿ, ಉತ್ತಮ ಫಲಿತಾಂಶ ತನ್ನಿ:** ಶಿಕ್ಷಕರ ಮೇಲೆ ಗುರುತರವಾದ ಜವಾಬ್ದಾರಿಯಿದ್ದು, ಬದ್ಧತೆಯಿಂದ ಕಾರ್ಯನಿರ್ವಹಿಸುವ ಮೂಲಕ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶಕ್ಕೆ ಶ್ರಮಿಸಬೇಕು ಎಂದು ಸಚಿವ ಡಿ.ಸುಧಾಕರ್ ಹೇಳಿದರು.

ಈ ವರ್ಷದಲ್ಲಿ ಶೈಕ್ಷಣಿಕ ಚಟುವಟಿಕೆ, ಪೂರ್ವ ಪರೀಕ್ಷೆ, ಸಾಫಲ್ಯ ಪರೀಕ್ಷೆಗಳನ್ನು ಹೆಚ್ಚಾಗಿ ನಡೆಸುವ ಮೂಲಕ ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ ಪರಿಹಾರ ಬೋಧನೆ ನೀಡುವ ವಿಶೇಷ ತರಗತಿಗಳನ್ನು ನಡೆಸಿ, ವಿದ್ಯಾರ್ಥಿಗಳ ಕಲಿಕಾ ಕೌಶಲ್ಯ ಹೆಚ್ಚಿಸುವ ಮೂಲಕ ಈ ಬಾರಿಯ ಎಸ್ಎಸ್ಎಲ್‌ಸಿ ಫಲಿತಾಂಶದಲ್ಲಿ ಚಿತ್ರದುರ್ಗ ಜಿಲ್ಲೆಯು ರಾಜ್ಯದಲ್ಲಿಯೇ 10ನೇ ಸ್ಥಾನದೊಳಗೆ ಬರಲು ಎಲ್ಲಾ ಅಧಿಕಾರಿಗಳು ಮತ್ತು ಶಿಕ್ಷಕರು ಸಂಘಟಿತ ಶ್ರಮದ ಮೂಲಕ ಕಾರಣೀಭೂತರಾಗಲು ಪ್ರಯತ್ನ ಮಾಡಬೇಕು ಎಂದರು.

> ಪ್ರಸ್ತುತ ಸಮಾಜದಲ್ಲಿ ಮೌಲ್ಯಗಳು ದಿನೇ ದಿನೇ ಕುಸಿಯುತ್ತಿರುವುದು ಆತಂಕದ ವಿಷಯವಾಗಿದೆ. ಶಿಕ್ಷಕರು ತಮ್ಮ ಪಾಠ ಬೋಧನೆ ಜೊತೆ ಜೊತೆಗೆ ವಿದ್ಯಾರ್ಥಿಗಳಿಗೆ ಮಾನವೀಯ ಹಾಗೂ ನೈತಿಕ ಮೌಲ್ಯಗಳನ್ನು ಮತ್ತು ವೈಚಾರಿಕ ಪ್ರಜ್ಞೆಯನ್ನು ಬೆಳೆಸಬೇಕಾಗಿರುವುದು ಸಮಾಜದ ಅತ್ಯಂತ ತುರ್ತು ಎಂದು ಭಾವಿಸಿ ಶಿಕ್ಷಕರು ಕೆಲಸ ಮಾಡಬೇಕಾಗಿದೆ. ವಿದ್ಯಾರ್ಥಿಯ ಬದುಕು ಶಿಕ್ಷಕರ ಮಾರ್ಗದರ್ಶನ ಆಧರಿಸಿರುತ್ತದೆ ಎನ್ನುವುದನ್ನು ಎಲ್ಲಾ ಶಿಕ್ಷಕರು ಮನಗಾಣಬೇಕು. -ಸಚಿವ ಡಿ.ಸುಧಾಕರ್

ಶಿಕ್ಷಕ ಪ್ರಶಸ್ತಿ ಪ್ರಧಾನ

**ಗುರುಭವನ ನಿರ್ಮಾಣಕ್ಕೆ ರೂ.2 ಕೋಟಿ:** ಜಿಲ್ಲಾ ಕೇಂದ್ರ ಚಿತ್ರದುರ್ಗ ನಗರದಲ್ಲಿ ಗುರುಭವನ ನಿರ್ಮಾಣಕ್ಕೆ ರೂ.2 ಕೋಟಿ ಅನುದಾನ ನೀಡಲಾಗುವುದು ಎಂದು ಸಚಿವ ಡಿ.ಸುಧಾಕರ್ ಭರವಸೆ ನೀಡಿದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚಿತ್ರದುರ್ಗ ಜಿಲ್ಲಾ ಶಾಖೆಯ ಮನವಿಗೆ ಸ್ಪಂದಿಸಿದ ಸಚಿವ ಡಿ.ಸುಧಾಕರ್, ಜಿಲ್ಲೆಯ ಎಲ್ಲಾ ಶಾಸಕರ ಸಹಕಾರದೊಂದಿಗೆ ಮುಂದಿನ ವರ್ಷದೊಳಗ ಅತ್ಯುತ್ತಮ ಗುರುಭವನ ನಿರ್ಮಾಣ ಮಾಡಿ ಕೊಡಲಾಗುವುದು ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ 2025-26ನೇ ಸಾಲಿನ ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಮತ್ತು ವಿಶೇಷ ಶಿಕ್ಷಕರ ಪ್ರಶಸ್ತಿ ಪಡೆದ ಶಿಕ್ಷಕರನ್ನು ಸನ್ಮಾನಿಸಲಾಯಿತು.


ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್ ಪೀರ್, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಎಸ್.ಆಕಾಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಇದ್ದರು.

## ಕಾರುಣ್ಯಾಶ್ರಮಕ್ಕೆ ಕೊಲ್ಲಾಪುರ ಕನ್ನೆರಿ ಮಠದ ಶ್ರೀ ಕಾಡಸಿದ್ದೇಶ್ವರ ಸ್ವಾಮೀಜಿಯ ಪಾದಸ್ಪರ್ಶ

• ಉದಯವಾಹಿನಿ ಸಿಂಧನೂರು

ಕೊಲ್ಲಾಪುರದ ಶ್ರೀ ಕನ್ನೆರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿಯವರು ನಗರದ ಒಳ ಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮಕ್ಕೆ ಪಾದಸ್ಪರ್ಶ ಮಾಡಿ ಆಶ್ರಮದ ಎಲ್ಲಾ ಕೋಣೆಗಳನ್ನು ವೀಕ್ಷಿಸಿ ಎಲ್ಲಾ ವೃದ್ಧರ ಹಾಗೂ ವಯಸ್ಕರ ಬುದ್ಧಿಮಾಂದ್ಯರ ಯೋಗಕ್ಷೇಮವನ್ನು ವಿಚಾರಿಸಿ.

ಜೀವನದಲ್ಲಿ ಬರುವ ಕಷ್ಟ ನಷ್ಟಗಳನ್ನು ಮೆಟ್ಟಿ ನಿಲ್ಲಬೇಕು ಎನ್ನುವ ಆತ್ಮಸ್ಥೈರ್ಯವನ್ನು ತುಂಬಿ ಎಲ್ಲರನ್ನು ಆಶೀರ್ವದಿಸಿದರು. ನಂತರ ಆಶ್ರಮದ ಸೇವಾಕರ್ತ ದಂಪತಿಗಳಾದ ಸುಜಾತ ಹಿರೇಮಠ ಚನ್ನಬಸಯ್ಯಸ್ವಾಮಿ ಹಿರೇಮಠ ಈ ದಂಪತಿಗಳಿಗೆ ಆಶೀರ್ವದಿಸಿ ಸಹಾಯ ಸೌಜನ್ಯದ ಮೂಲಕ ನಿಮ್ಮಿಂದ ಸಮಾಜಕ್ಕೆ ಹೆಚ್ಚಿನ ಸೇವೆ ದೊರೆಯಲಿ ಎಂದು ಹಾರೈಸಿದರು. ನಂತರ ಮಾನವ ಧರ್ಮದ ಮಾನವೀಯತೆಯ ಮಂದಿರವೇ ಕರುಣೆಯ



ಉದಯವಾಹಿನಿ ಚಿತ್ರ

ಕಾರುಣ್ಯ ಕುಟುಂಬ ಈ ಕುಟುಂಬದಲ್ಲಿ ಆಶ್ರಯ ಪಡೆದಿರುವ ಎಲ್ಲಾ ಹಿರಿಯ ಜೀವಿಗಳು ಮತ್ತು ವಯಸ್ಕರ ಬುದ್ಧಿಮಾಂದ್ಯ ಜೀವಿಗಳು ಶರಣ ಸ್ವರೂಪಿಗಳು ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಎನ್ನುವ ಗ್ರಾಮೀಣ ಭಾಗದ ಈ ಸಂಸ್ಥೆ ಸಿಂಧನೂರಿನಂತಹ ನಗರದಲ್ಲಿ ಹುಟ್ಟು ಹಾಕಿ ವಿಭಿನ್ನ ರೀತಿಯ ಸಮಾಜ ಸೇವೆಗಳನ್ನು ಸಮಾಜಕ್ಕೆ ಅರ್ಪಣೆ ಮಾಡುವುದು ನನಗೆ ಬಹಳ ಸಂತೋಷವನ್ನುಂಟು ಮಾಡಿದೆ ಎಂದು ಎಲ್ಲಾ ಸಿಬ್ಬಂದಿಗಳಿಗೆ ಧೈರ್ಯ ತುಂಬುವ ಮೂಲಕ ಶ್ರೀಗಳು ಪ್ರೋತ್ಸಾಹಿಸಿದರು. ಈ ಸಮಯದಲ್ಲಿ ಅರುಣ್. ಹೆಚ್. ದೇಸಾಯಿ ತಹಶೀಲ್ದಾರರು ಹಾಗೂ ತಾಲ್ಲೂಕ ದಂಡಾಧಿಕಾರಿಗಳು ಮಿನಿವಿಧಾನಸೌಧ ಸಿಂಧನೂರು. ರಾಜೇಶ ಹಿರೇಮಠ ಉದ್ಯಮಿಗಳು ಸಿಂಧನೂರು. ಮಂಜುನಾಥ ಹರಸೂರು.,ಡಾ. ಚೇತ್ನಾ ಕಾರಟಗಿ. ವಿಶ್ವನಾಥ ಚೌದರಿ. ನಾಗರಾಜ ಗೌಡ ಗೊರೆಬಾಳ. ವಿಶ್ವನಾಥ ಜವಳಿ ಕಾರಟಗಿ, ಬಸವರಾಜ ಜೆಸ್ಕಾಂ ಗುತ್ತೇದಾರರು. ಆಶ್ರಮದ ಕಾರ್ಯಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ. ಹಾಗೂ ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ.ಜ್ಯೋತಿ. ಮತ್ತು ಹಲವಾರು ಭಕ್ತ ವೃಂದ ಉಪಸ್ಥಿತರಿದ್ದರು

## ಪತ್ರಿಕಾ ವಿತರಕರಿಗೆ ಭದ್ರತಾ ಸೌಲಭ್ಯಗಳು ದೊರೆಯಲಿ

• ಉದಯವಾಹಿನಿ ಕಲಬುರಗಿ

ಜ್ಞಾನದ ನಿಧಿಗಳಾದ ಪತ್ರಿಕೆಗಳನ್ನು ಮಳೆ, ಚಳಿ, ಬಿಸಲು, ಗಾಳಿ, ಹಗಲು, ರಾತ್ರಿಯನ್ನದೇ, ಓದುಗರ ಮನೆ ಬಾಗಿಲಿಗೆ ನೇರವಾಗಿ ತಲುಪಿಸುವ ಮೂಲಕ ಕಾರ್ಯ ಮಾಡುತ್ತಿರುವ ಪತ್ರಿಕೆ ವಿತರಕರಿಗೆ ಸಾಮೂಹಿಕ ವಿಮೆ, ಭವಿಷ್ಯ ನಿಧಿ, ಕನಿಷ್ಟ ವೇತನ ನಿಗದಿಗೊಳಿಸುವಿಕೆ, ಇಎಸ್ಐ ಸೌಲಭ್ಯ, ಪಿಎಫ್‌ನಂತಹ ಸರ್ಕಾರಿ ಸೌಲಭ್ಯಗಳು ನೀಡುವ ಮೂಲಕ ಸೇವೆ, ಜೀವನ ಭದ್ರತೆಯನ್ನು ಒದಗಿಸಬೇಕು ಎಂದು ಹಿರಿಯ ಪತ್ರಿಕಾ ವಿತರಕ ರಾಜಶೇಖರ ಚಿನ್ಮಳ್ಳಿ ಸರ್ಕಾರಕ್ಕೆ ಒತ್ತಾಸೆ ಮಾಡಿದರು.

ನಗರದ ಶಹಾಬಜಾರ ಮಹಾದೇವ ನಗರದಲ್ಲಿನ 'ಸ್ವಾತಿ ಪ್ರೌಢಶಾಲೆಯ ಆವರಣದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗದ ವತಿಯಿಂದ ಗುರುವಾರ ಸಂಜೆ ಜರುಗಿದ 'ವಿಶ್ವ ಪತ್ರಿಕಾ ವಿತರಕರ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮತ್ತೋರ್ವ ಹಿರಿಯ ಪತ್ರಿಕಾ ವಿತರಕ ಶಿವಕುಮಾರ ಬೋಳಶೆಟ್ಟಿ



ಉದಯವಾಹಿನಿ ಚಿತ್ರ

ಮಾತನಾಡಿ, ಪತ್ರಿಕಾ ವಿತರಣೆಯ ಕಾರ್ಯ ಕೀಳೆಂದು ಭಾವಿಸಬಾರದು. ಬೆಳಗ್ಗೆ ಅಥವಾ ಸಾಯಂಕಾಲ ಅರೆಕಾಲಿಕ ಕೆಲಸವಾಗಿದ್ದು, ಇದರಿಂದ ನಮ್ಮ ಕೆಲಸದ ಜೊತೆಗೆ ಮಾಡಬಹುದಾಗಿದೆ. ಇದರಿಂದ ಆರ್ಥಿಕ ಸಹಾಯವಾಗುತ್ತದೆ. ನಾನು ಕಳೆದ 22 ವರ್ಷಗಳಿಂದ ಇದೇ ಕಾರ್ಯವನ್ನು ಮಾಡುತ್ತಿದ್ದೇನೆ. ಈ ಕಾರ್ಯದ ಬಗ್ಗೆ ನನಗೆ ತೃಪ್ತಿಯಿದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ, ಪತ್ರಿಕಾ ವಿತರಣಾ ಕಾರ್ಯ ಲಾಭದ ಉದ್ದೇಶದಿಂದಲ್ಲ. ಅದರಲ್ಲಿ ಸಮಾಜ ಸೇವಾ ಮನೋಭಾವನೆ ಅಡಗಿದೆ.

## ಅತಿಥಿ ಉಪನ್ಯಾಸಕರನ್ನು ಒದಗಿಸಲು ಒತ್ತಾಯ

• ಉದಯವಾಹಿನಿ ಕೊಪ್ಪಳ

ಪದವಿ ವಿದ್ಯಾಲಯಗಳಲ್ಲಿ ಅತಿಥಿ ಉಪನ್ಯಾಸಕರಿಲ್ಲದೆ ವಿದ್ಯಾರ್ಥಿಗಳಲ್ಲಿ ಉಂಟಾಗಿರುವ ಶೈಕ್ಷಣಿಕ ಗೊಂದಲಗಳನ್ನು ಪರಿಹರಿಸುವಂತೆ ಒತ್ತಾಯಿಸಿ ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ ನೇತೃತ್ವದಲ್ಲಿ ನೂರಾರು ವಿದ್ಯಾರ್ಥಿಗಳು ನಗರದ ಅಶೋಕ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ರಾಜ್ಯದಾದ್ಯಂತ ಪದವಿ ತರಗತಿಗಳು ಆರಂಭವಾಗಿ ತಿಂಗಳು ಕಳೆದರೂ ಇಲ್ಲಿಯವರೆಗೂ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲಾಗಿಲ್ಲ. ರಾಜ್ಯದ ಬಹುತೇಕ ಸರ್ಕಾರಿ ಪದವಿ ಕಾಲೇಜುಗಳು ಅತಿಥಿ ಉಪನ್ಯಾಸಕರ ಮೇಲೆ ಅವಲಂಬಿತವಾಗಿದ್ದು, ಇಲ್ಲಿಯವರೆಗೂ ತರಗತಿಗಳು ಸರಿಯಾಗಿ ನಡೆಯದೇ ಇರುವುದರಿಂದ ವಿದ್ಯಾರ್ಥಿಗಳು ಆತಂಕ ಎದುರಿಸುವಂತಾಗಿದೆ.

ಇದು ಅವರ ಶೈಕ್ಷಣಿಕ ಭವಿಷ್ಯವನ್ನು ಅತಂತ್ರವನ್ನಾಗಿಸುತ್ತಿದೆ. ಮುಂದಿನ ತಿಂಗಳು ಪದವಿ ವಿದ್ಯಾರ್ಥಿಗಳ ಮೊದಲ ಆಂತರಿಕ ಪರೀಕ್ಷೆಗಳು





ಉದಯವಾಹಿನಿ ಚಿತ್ರ

ಆರಂಭಗೊಳ್ಳಲಿದ್ದು, ಪಾಠಗಳನ್ನು ಆಲಿಸದೆ ಪರೀಕ್ಷೆ ಎದುರಿಸಬೇಕಿದೆ. ಯುಜಿಸಿಯ ಹೊಸ ನಿರ್ದೇಶನಗಳ ಕುರಿತು ನ್ಯಾಯಾಲಯದಲ್ಲಿ ಮೊಕದ್ದಮೆ ನಡೆಯುತ್ತಿರುವುದರಿಂದ ಅತಿಥಿ ಉಪನ್ಯಾಸಕರ ನೇಮಕಾತಿಯು ನನೆಗುದಿಗೆ ಬಿದ್ದಿದೆ ಎಂದು ವಿದ್ಯಾರ್ಥಿ ಪ್ರಮುಖರು ತಿಳಿಸಿದರು.

ಶೈಕ್ಷಣಿಕ ವಿಷಯಗಳಲ್ಲಿ ರಾಜ್ಯ ಸರ್ಕಾರವು ಕೇಂದ್ರದ ನಿರ್ಧಾರಗಳನ್ನು ಪಾಲಿಸುವುದು ಕಡ್ಡಾಯವಲ್ಲ ಎಂದು ಸರ್ವೋಚ್ಚ ನ್ಯಾಯಾಲಯದ ಸ್ಪಷ್ಟ ನಿರ್ದೇಶನವೇ ಇದೆ.

ಇದಕ್ಕೆ ಅನುಗುಣವಾಗಿ ರಾಜ್ಯ ಸರ್ಕಾರವು ವಿದ್ಯಾರ್ಥಿಗಳ ಶೈಕ್ಷಣಿಕ ಹಿತಾಸಕ್ತಿಗೆ ಪೂರಕವಾದ ಸ್ಪಷ್ಟ ನಿಲುವು ತಾಳಬೇಕಿದೆ ಎಂದರು.

## ಬೇಕಾಬಿಟ್ಟಿ ವಾಹನ ನಿಲುಗಡೆ: ಸಂಚಾರಕ್ಕೆ ವ್ಯತ್ಯಯ

• ಉದಯವಾಹಿನಿ ಬ್ಯಾಡಗಿ

ಎಲ್ಲೆಂದರಲ್ಲಿ ನಿಲುಗಡೆಯಾಗಿರುವ ಖಾಸಗಿ ಅನಧಿಕೃತ ವಾಹನ, ಬೇಕಾಬಿಟ್ಟಿಯಾಗಿ ನಿಲ್ಲಿಸಿರುವ ಆಟೊ ರಿಕ್ಷಾ, ಬಹುಪಾಲು ರಸ್ತೆ ಆಕ್ರಮಿಸಿಕೊಂಡಿರುವ ಗೂಡಂಗಡಿ ಇವು ಬಸ್ ನಿಲ್ದಾಣದ ಮುಂದಿನ ನೆಹರೂ ನೆಹರೂ ವೃತ್ತದಲ್ಲಿ ಕಂಡು ಬರುವ ದೃಶ್ಯ.

ಬಸ್ ನಿಲ್ದಾಣದಿಂದ 500 ಮೀಟರ್ ದೂರದೊಳಗೆ ಅನಧಿಕೃತ ಖಾಸಗಿ ಮ್ಯಾಕ್ಸಿ ಕ್ಯಾಬ್‌ಗಳು ನಿಲ್ಲಿಸಬಾರದೆನ್ನುವ ನಿಯಮವಿದೆ. ಆದರೆ 50 ಮೀಟರ್ ದೂರದಲ್ಲಿಯೇ ಜಮಾವಣೆಗೊಂಡಿವೆ. ಇದರಿಂದ ಸಂಚಾರಕ್ಕೆ ತುಂಬಾ ತೊಂದರೆಯಾಗಿದೆ. ಖಾಸಗಿ ಬಸ್‌ಗಳ ನಿಲ್ದಾಣಕ್ಕೆ ಸೂಕ್ತ ಜಾಗವಿಲ್ಲದೆ ರಸ್ತೆ ಬದಿಯೇ ನಿಲ್ಲಬೇಕಾಗಿದ ಅನಿವಾರ್ಯತೆ ಎದುರಾಗಿದೆ. ಇದರಿಂದಾಗಿ ಬಸ್ ನಿಲ್ದಾಣದ ಒಳಗೆ, ಹೊರಗೆ ಹೋಗುವ ವಾಹನಗಳ ಸಂಚಾರಕ್ಕೆ ತೀವ್ರ ತೊಂದರೆಯಾಗಿದೆ. ಈ ಕುರಿತು ಪೊಲೀಸ್ ಇಲಾಖೆ ಹಾಗೂ ಸಾರಿಗೆ ಘಟಕ ವ್ಯವಸ್ಥಾಪಕರ ಗಮನಕ್ಕೆ ತರಲಾಗಿದ್ದರೂ ಪ್ರಯೋಜನವಾಗಿಲ್ಲ ಎನ್ನುತ್ತಾರೆ ಇಲ್ಲಿಯ ಸಾರ್ವಜನಿಕರು.

ರಸ್ತೆ ಬದಿ ತಲೆ ಎತ್ತಿರುವ ಚಹಾ ಅಂಗಡಿಗಳ ಮುಂದೆ ನಿಂತು ರಸ್ತೆಯ ಮೇಲೆ ಜನರು ಉಗುಳುತ್ತಾರೆ. ಇದರಿಂದ ಜನರ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರಲಿದ್ದು,



ಉದಯವಾಹಿನಿ ಚಿತ್ರ

ಸಾಂಕ್ರಾಮಿಕ ರೋಗ ಉಲ್ಬಣಿಸುವ ಭೀತಿ ಎದುರಾಗಿದೆ.

ಇಷ್ಟೆಲ್ಲ ಅವಾಂತರಗಳು ನಡೆದಿದ್ದರೂ ಪೊಲೀಸ್ ಇಲಾಖೆ ಕೈಕಟ್ಟಿ ಕುಳಿತಿರುವುದು ಸೋಜಿಗವೆನಿಸಿದೆ. ಬಸ್ ನಿಲ್ದಾಣದ ಮುಂದೆ ವಿಶಾಲವಾದ ಜಾಗೆಯಿದ್ದರೂ ಖಾಸಗಿ ವಾಹನಗಳ ಅನಧಿಕೃತ ನಿಲುಗಡೆಯಿಂದ ಇನ್ನಿತರ ವಾಹನಗಳ ಸಂಚಾರಕ್ಕೆ ತೊಂದರೆಯಾಗಿದೆ. 50 ಮೀಟರ್ ದೂರದಲ್ಲಿ ನಿಲ್ಲುವ ಟಂಟಂ, ಮ್ಯಾಕ್ಸಿ ಕ್ಯಾಬ್ ಹಾಗೂ ಇನ್ನಿತರ ವಾಹನಗಳ ಚಾಲಕರು ತಮ್ಮ ವಾಹನಗಳನ್ನು ನಿಲ್ಲಿಸಿಕೊಂಡು ಬಸ್ ಮತ್ತು ನಿಲ್ದಾಣದಲ್ಲಿರುವ ಪ್ರಯಾಣಿಕರನ್ನು ಕೂಗಿ ಕರೆದು ಹತ್ತಿಸಿಕೊಂಡು ಹೋಗುವುದು ನಡೆದಿದೆ. ಇದೊಂದು ಕಾನೂನು ಬಾಹಿರ ಕ್ರಮವಾಗಿದ್ದು, ಸಾರಿಗೆ ಸಂಸ್ಥೆಯ

> ಬಸ್ ನಿಲ್ದಾಣದ ಮುಂದೆ ಅನಧಿಕೃತವಾಗಿ ಖಾಸಗಿ ಪ್ರಯಾಣಿಕರ ವಾಹನಗಳನ್ನು 500 ಮೀಟರ್ ಅಂತರದಲ್ಲಿ ನಿಲ್ಲಿಸಬೇಕು ಎನ್ನುವ ನಿಯಮವಿದೆ. ಇದನ್ನು ವಾಹನ ಮಾಲೀಕರು ಉಲ್ಲಂಘಿಸಿದ್ದಾರೆ.
>
> -ಗುರುಬಸಪ್ಪ , ಅಡರಗಟ್ಟಿ ಘಟಕ ವ್ಯವಸ್ಥಾಪಕ

ವಾಹಗಳಿಗೆ ಸಮಾನಾಂತರವಾಗಿ ಕಾರ್ಯಾಚರಣೆ ಮಾಡುತ್ತಿರುವುದರಿಂದ ಅನಾರೋಗ್ಯಕರ ಪೈಪೋಟಿ ನೀಡಲಾಗುತ್ತಿದೆ. ಈ ಕಾರಣದಿಂದ ಸಾರಿಗೆ ಸಂಸ್ಥೆಗೆ ಸಲ್ಲಬೇಕಾಗಿದ್ದ ಆದಾಯದಲ್ಲಿಯೂ ಕುಂಠಿತಗೊಳ್ಳಲು ಕಾರಣವಾಗಿದೆ ಎನ್ನಲಾಗಿದೆ.

**ರಸ್ತೆ ಬದಿ ಅಂಗಡಿಗಳನ್ನು ತೆರವುಗೊಳಿಸಿ:** ಬಸ್ ನಿಲ್ದಾಣದ ಮುಂದೆ ನೆಹರೂ ವೃತ್ತದ ರಸ್ತೆ ಬದಿಯಲ್ಲಿ ಚಹಾ, ಗುಟ್ಕಾ, ಎಗ್ ರೈಸ್ ಅಂಗಡಿಗಳು ತಲೆ ಎತ್ತಿವೆ. ಜಾಗೆ ವಿಶಾಲವಾಗಿದ್ದರೂ ರಸ್ತೆ ಇಕ್ಕಟ್ಟಾಗಿದೆ. ಇನ್ನಿತರ ವಾಹನಗಳ ಸಂಚಾರಕ್ಕೂ ತೊಂದರೆಯಾಗಿದೆ. ಅಂಗಡಿಗಳ ಮುಂದೆ ಬೈಕ್ ನಿಲ್ಲಿಸಿದ್ದರಿಂದ ಸಂಚಾರಕ್ಕೆ ಮತ್ತಷ್ಟು ತೊಂದರೆಯಾಗಲಿದೆ.

## ಕಾಡಾನೆ ಹಾವಳಿ: ಭಯದ ವಾತಾವರಣದಲ್ಲಿ ಗಿರಿಜನರು

• ಉದಯವಾಹಿನಿ ಶೃಂಗೇರಿ

ಬೇಗಾರ್ ಗ್ರಾ.ಪಂ. ವ್ಯಾಪ್ತಿಯ ಕೆ.ಮಸಿಗೆ ಗ್ರಾಮದ ಕುದುರೆಮುಖ ರಾಷ್ಟ್ರೀಯ ಉದ್ಯಾನದ ಅಂಚಿನಲ್ಲಿರುವ ತಾರೋಳ್ಳಿಕೊಡಿಗೆಯಲ್ಲಿ ಕಳೆದ 10 ವರ್ಷಗಳಿಂದ ಕಾಡಾನೆಗಳು ಸಂಚರಿಸುತ್ತಿದ್ದು, ಇದರಿಂದ ಈ ಭಾಗದ ರೈತರು ಆತಂಕದಲ್ಲಿದ್ದಾರೆ. ಆದ್ದರಿಂದ ಅವುಗಳನ್ನು ತಕ್ಷಣವೇ ಕುಮ್ಕಿ ಆನೆ ಹಾಗೂ ಶಾರ್ಪ್‌ಶೂಟರ್‌ಗಳ ಸಹಾಯದಿಂದ ಹಿಡಿಸಬೇಕು' ಎಂದು ಬೇಗಾರ್ ಗ್ರಾ.ಪಂ.ಉಪಾಧ್ಯಕ್ಷ ಅಣ್ಣುಳಿ ಲಕ್ಷ್ಮೀಶ ಒತ್ತಾಯಿಸಿದರು.

ಶೃಂಗೇರಿ ಅರಣ್ಯ ಇಲಾಖೆ ಮತ್ತು ಕೊಪ್ಪ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ತಂಡ ಕುದುರೆಮುಖ ರಾಷ್ಟ್ರೀಯ ಉದ್ಯಾನದ ಅಂಚಿನಲ್ಲಿರುವ ತಾರೋಳ್ಳಿಕೊಡಿಗೆ ಭೇಟಿ ನೀಡಿ, ಗಿರಿಜನರ ಕುಂದುಕೊರತೆಯನ್ನು ಆಲಿಸುವ ಸಂದರ್ಭದಲ್ಲಿ ಅವರು ಮಾತನಾಡಿದರು. 'ಈ ಭಾಗದಲ್ಲಿ ಹೆಚ್ಚಾಗಿ ಕಾರ್ಮಿಕರು, ಅತಿಸಣ್ಣ ರೈತರೇ

> ಅರಣ್ಯ ಅಂಚಿನಲ್ಲಿ ವಾಸಿಸುವ ಗಿರಿಜನರು ಸಂವಿಧಾನದಿಂದ ನೀಡಲ್ಪಟ್ಟ ಮೂಲಭೂತ ಹಕ್ಕುಗಳಿಂದ ವಂಚಿತರಾಗಿದ್ದಾರೆ. ಇದಕ್ಕೆ ಪ್ರಮುಖ ಕಾರಣವೆಂದರೆ ಸರ್ಕಾರ ಮತ್ತು ಆಡಳಿತ ವ್ಯವಸ್ಥೆ. ಪರಿಣಾಮ ಇವರಿಗೆ ಶಿಕ್ಷಣದ ಹಕ್ಕು ಪೂರ್ಣ ಪ್ರಮಾಣದಲ್ಲಿ ಲಭ್ಯವಿಲ್ಲ. ದೂರದ ಪ್ರದೇಶಗಳಲ್ಲಿ ಶಾಲೆಗಳಿರುವುದರಿಂದ ಮತ್ತು ಶಿಕ್ಷಕರ ಕೊರತೆ, ಹಾಗೆಯೇ ಸ್ಥಳೀಯ ಭಾಷೆಯ ಬೋಧನೆ ಕೊರತೆಯಿಂದ ಮಕ್ಕಳು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗಿದ್ದಾರೆ.
>
> -ಭಾಸ್ಕರ್ ನಾಯ್ಕ , ಎ.ಪಿ.ಎಂ.ಸಿ ಮಾಜಿ ಅಧ್ಯಕ್ಷ

ವಾಸಿಸುತ್ತಿದ್ದು, ಕಾಡಾನೆಗಳ ಹಾವಳಿಯಿಂದ ಭಯದ ವಾತಾವರಣದಲ್ಲಿ ಬದುಕುವ ಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಕಾಡಾನೆಗಳನ್ನು ಸೆರೆ ಹಿಡಿಯಬೇಕು' ಎಂದು ಆಗ್ರಹಿಸಿದರು.

ಸ್ಥಳೀಯ ವಿವಾಸಿ ಸುಬ್ರಹ್ಮಣ್ಯ ಮಾತನಾಡಿ, ಅರಣ್ಯ ಪ್ರದೇಶಗಳಲ್ಲಿ ವಾಸಿಸುವ ನಮ್ಮಂಥವರಿಗೆ ಹಕ್ಕುಪತ್ರಗಳ ಕೊರತೆ ಪ್ರಮುಖ ಸಮಸ್ಯೆಯಾಗಿದೆ. ಏಕೆಂದರೆ ನಾವು ವಾಸಿಸುವ ಭೂಮಿಗೆ ಕಾನೂನು ಬದ್ಧ ದಾಖಲೆಗಳು ಅಥವಾ ಹಕ್ಕುಪತ್ರಗಳು ಇರುವುದಿಲ್ಲ ಇದು ನಮ್ಮನ್ನು ಭೂಮಿಯ ಮಾಲೀಕತ್ವ, ಕೃಷಿ ಮತ್ತು ವಸತಿಯಂತಹ ಹಕ್ಕುಗಳಿಂದ ವಂಚಿತರನ್ನಾಗಿ ಮಾಡಿದೆ. ಹಕ್ಕುಪತ್ರಗಳಿಲ್ಲದೆ ನಮಗೆ ಸರ್ಕಾರದ ಕಲ್ಯಾಣ ಯೋಜನೆ, ಕೃಷಿ ಸಾಲ ಮತ್ತು ಇತರ ಸೌಲಭ್ಯ ಪಡೆಯಲು ಸಾಧ್ಯವಾಗುತ್ತಿಲ್ಲ. ಅರಣ್ಯ ಇಲಾಖೆಯ ನಿಯಮಗಳಿಂದ ಸಾಂಪ್ರದಾಯಿಕ ಕೃಷಿ ಪದ್ಧತಿ ಮತ್ತು ಜೀವನೋಪಾಯದ ಮಾರ್ಗಗಳಿಗೆ ಅಡ್ಡಿಯುಂಟಾಗಿದೆ.

## ಉದ್ಯಾನ ನಿರ್ವಹಣೆ, ರಸ್ತೆ ನಿರ್ಮಾಣಕ್ಕೆ ಆಗ್ರಹ

• ಉದಯವಾಹಿನಿ ಮುದ್ದೇಬಿಹಾಳ

2 ವರ್ಷಗಳಿಂದ ಮಾರುತಿ ನಗರದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ಆಗಿಲ್ಲ. ಮೂಲ ಸೌಕರ್ಯ ಕಲ್ಪಿಸಬೇಕಾಗಿದ್ದ ಪುರಸಭೆ ಆಡಳಿತ ಉದಾಸೀನ ತೋರುತ್ತಿರುವುದರಿಂದ ನಿವಾಸಿಗಳು ತೊಂದರೆ ಅನುಭವಿಸುವಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ ಪಟ್ಟಣದ ಮಾರುತಿ ನಗರದ ನಿವಾಸಿಗಳು ಇಲ್ಲಿನ ಪುರಸಭೆ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಿದರು. ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಯುವ ಮುಖಂಡ ಆನಂದ ತುಪ್ಪದ, ಮೂರು ವರ್ಷಗಳ ಹಿಂದೆ ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಅವರಿದ್ದಾಗ ಅಗೆದು ಬಿಟ್ಟಿರುವ ರಸ್ತೆಗಳನ್ನು ರಿಪೇರಿ ಮಾಡದೇ ಇರುವುದರಿಂದ ಗುಡ್ಡಗಾಡಿನಲ್ಲಿ ಸಂಚರಿಸುವ ಅನುಭವ ನಿವಾಸಿಗಳಿಗಾಗುತ್ತಿದೆ. ಉದ್ಯಾನವನವಂತೂ ತಿಪ್ಪೆಗುಂಡಿಯಾಗಿದೆ.



ಉದಯವಾಹಿನಿ ಚಿತ್ರ

ರಸ್ತೆಗಳು ಹದಗೆಟ್ಟಿದ್ದರೂ ಆಡಳಿತ ನಡೆಸುವವರು ಕಣ್ಣು ಮುಚ್ಚಿಕೊಂಡು ಕೂತಿದ್ದಾರೆ ಎಂದು ದೂರಿದರು. ಮಾರುತಿ ನಗರದ ನಿವಾಸಿಗಳು ಮೂಲ ಸೌಕರ್ಯ ಕುರಿತು ಜಿಲ್ಲಾಧಿಕಾರಿಗಳು, ಮುಖ್ಯಾಧಿಕಾರಿಗಳು, ಹಾಲಿ ಶಾಸಕರ ಮನೆಗೆ ಹೋಗಿ ಅಳಲು ತೋಡಿಕೊಂಡರೂ ಏನೂ ಪ್ರಯೋಜನವಾಗಿಲ್ಲ ಎಂದು ದೂರಿದರು. ನಮ್ಮ ವಾರ್ಡ್‌ಗೆ ಸೌಕರ್ಯ ಕಲ್ಪಿಸುವುದಿಲ್ಲ ಎಂದಾದರೆ ತೆರಿಗೆ ವಸೂಲಿ ಮಾಡಬೇಡಿ ಎಂದರು.

# ಈದ್ ಮಿಲಾದ್ ರಕ್ತದಾನ ಶಿಬಿರ, ಹಣ್ಣುಹಂಪಲು ವಿತರಣೆ, ಸಸಿ ನೆಡುವ ಕಾರ್ಯಕ್ರಮ

### ಕಾಯಕವೇ ಕೈಲಾಸ ಬಸವಣ್ಣ ವಚನದಂತೆ ಮುಸ್ಲಿಂ ಸಮಾಜ ಪಾಲನೆ ಮಾಡುತ್ತಿದೆ: ಷ.ಬ್ರ.ಪೂಜ್ಯ ಶಿವಕುಮಾರ ಶಿವಾಚಾರ್ಯರು

• ಉದಯವಾಹಿನಿ, ಚಿಂಚೋಳಿ

ಬಸವಣ್ಣನವರ ವಚನದಂತೆ ಕಾಯಕವೇ ಕೈಲಾಸದಲ್ಲಿ ನಂಬಿಕೆವಿಟ್ಟ ಮುಸ್ಲಿಂ ಸಮಾಜ ತಮ್ಮ ತಮ್ಮ ಕೆಲಸ ಮಾಡುವ ಸಮಾಜವಾಗಿದೆ ಎಂದು ನರನಾಳ ಮಠದ ಷ.ಬ್ರ.ಪೂಜ್ಯ ಶಿವಕುಮಾರ ಶಿವಾಚಾರ್ಯರು ಆಶೀರ್ವಚನ ನೀಡಿದರು.

ಪಟ್ಟಣದ ಬಂಜಾರ ಭವನದಲ್ಲಿ ಈದ್ ಎ-ಮೀಲಾದ್ ಉನ್ ನಬಿ ಹಬ್ಬದ ಪ್ರಯುಕ್ತ ಮುಸ್ಲಿಂ ಅಭಿವೃದ್ಧಿ ಸಮಿತಿ ವತಿಯಿಂದ ಹಮ್ಮಿಕೊಂಡ ಸರ್ಕಾರಿ ಆಸ್ಪತ್ರೆಯಲ್ಲಿ ಹಣ್ಣುಹಂಪಲು ವಿತರಣೆ,ರಕ್ತದಾನ ಶಿಬಿರ,ಸಸಿ ನೆಡುವುದು ಮತ್ತು ವಿವಿಧ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಾಂತಿ,ಸೌಹಾರ್ದತೆ,ಭ್ರಾತೃತ್ವವನ್ನು ಒಳಗೊಂಡ ನಾಡನ್ನು ಕಟ್ಟುವಲ್ಲಿ ಪ್ರವಾದಿ ಮಹ್ಮದ್ ಪೈಗಂಬರ್ ಬೋಧನೆಗಳು ಸಮಾಜಕ್ಕೆ ಆದರ್ಶವಾಗಿದ್ದು ಸುಗಮ ಜೀವನಕ್ಕೆ ಮಹ್ಮದ್ ಪೈಗಂಬರ್ ಹಾಕಿಕೊಟ್ಟ ಮಾರ್ಗದಲ್ಲಿ ಸಮಾಜದ ಭಾಂಧವರು ನಡೆಯಬೇಕು.

ಪ್ರವಾದಿ ಮಹಮ್ಮದ್ ಪೈಗಂಬರ್ ಅವರ ಜನ್ಮದಿನದ ಸಂಭ್ರಮಾಚರಣೆ ವಿಶ್ವದ ಸಮಸ್ತ ಮುಸ್ಲಿಂರು





ಉದಯವಾಹಿನಿ ಚಿತ್ರ

ಸಂಭ್ರಮದಿಂದ ಆಚರಿಸುತ್ತಾರೆ. ಪ್ರವಾದಿ ಮಹ್ಮದ ಪೈಗಂಬರ ಸಮಾಜದ ಸುಧಾರಣೆಯಲ್ಲಿ ಮಹತ್ವದ ಪಾತ್ರ ನಿರ್ವಹಿಸಿದವರು, ಜೀವನದಲ್ಲಿ ನಾವು ಗಳಿಸಿದ ಆಸ್ತಿ ಅಂತಸ್ತು ಯಾವುದೇ ಶಾಶ್ವತವಲ್ಲ,ಬದುಕಿರುವಾಗಲೇ ಇತರರೆ ಸಹಾಯವಾಗುವಂತೆ ಬದುಕು ಸಾಗಿಸಬೇಕು ಕಷ್ಟದಲ್ಲಿದ್ದವರಿಗೆ ಆಸರೆಯಾಗಬೇಕು, ಹಬ್ಬದ ಪ್ರಯುಕ್ತ ರಕ್ತದಾನ ಶಿಬಿರ ಹಮ್ಮಿಕೊಂಡಿದ್ದು ರಕ್ತದಾನ ಮಹಾದಾನವಾಗಿದ್ದು ಅನೇಕರ ಜೀವ ಉಳಿಸಬಹುದು,ರಕ್ತ ಯಾವ ಜಾತಿಯದ್ದು ಎಂಬುವುದು ನೋಡುವುದಿಲ್ಲ ಆದರೆ ಆಸ್ಪತ್ರೆಯಲ್ಲಿ ರಕ್ತದ ಅವಶ್ಯಕವಿರುವಾಗ ಪ್ರತಿಯೊಂದು ಜಾತಿಗೂ ಜೀವ ಉಳಿಸುತ್ತದೆ,ಇದೊಂದು ದೊಡ್ಡ ಪ್ರಮಾಣದ ಕಾರ್ಯಕ್ರಮ ಜೋತೆಗೆ ಸಸಿಗಳು ನೆಟ್ಟು ಜನರಿಗೆ ಬದುಕಲು ಆಮ್ಲಜನಕ ಅವಶ್ಯಕವಾಗಿದೆ.

> ಜೀವನದಲ್ಲಿ ನಾವು ಗಳಿಸಿದ ಆಸ್ತಿ ಅಂತಸ್ತು ಶಾಶ್ವತವಲ್ಲ

ಹಸಿರು ಬಣ್ಣದ ಕೊಳ್ಳಪಟ್ಟಿ ಹಾಕಿಕೊಂಡಿದ್ದು ದ್ವೇಷ,ಅಸೂಯೇ ,ಸಿಟ್ಟು,ತೆಗೆದುಹಾಕಿ ಪ್ರೀತಿ ಭಾಂದವ್ಯ ಕಲಿಸುತ್ತದೆ ದೇಶದಲ್ಲಿ ಸರ್ವರು ಒಂದೇ ನಾವೆಲ್ಲರೂ ಒಂದೇ ತಾಯಿಯ ಮಕ್ಕಳಂತೆ ಬದುಕಬೇಕು ಎಂದು ಸಂದೇಶ ನೀಡಿದರು. ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಮಾತನಾಡಿ ರಬ್ಬಿಲ್ ಉಲ್ ಆಲಾಮೀನ್ ಹಾಗೂ ಬಸವೇಶ್ವರ ವಚನಗಳು ಎರಡು ಪರಮಾತ್ಮನಲ್ಲಿ ಧ್ಯಾನ ಮಾಡುವವರು ಜಾತಿಯಿಂದ ಅಳಿಯಲು ಸಾಧ್ಯವಿಲ್ಲ ಅವರ ಒಳ್ಳೆಯ ನಡತೆ, ಆಚಾರ ವಿಚಾರಗಳು ಅವರ ಮನುಷ್ಯತ್ವ ಗುರುತಿಸುತ್ತದೆ.

ಬಾಬರಿ ಮಸೀದಿ ಈಗಾಗಲೇ ಮುಗಿದು ಹೋಗಿದೆ ಆದರೆ ಇನ್ನು ಉತ್ತರ ಪ್ರದೇಶ ಸೇರಿದಂತೆ ಹಲವೆಡೆ ಅನೇಕ ಮಸೀದಿಗಳ ಮೇಲೆ ಪ್ರಕರಣಗಳಾಗಿ ನ್ಯಾಯಾಲಯದಲ್ಲಿ ನಡೆಯುತ್ತಿವೆ,ಮಸೀದಿ ಕೆದರಿದರೆ ಮಂದಿರ ಬರುತ್ತೆ, ಮಂದಿರ ಅಗೆದರೆ ಬೌದ್ಧ ಮಂದಿರ ಬರುತ್ತೆ,ಬೌದ್ಧ ಮಂದಿರ ಅಗೆದರೆ ಜೈನ್ ಮಂದಿರ ಸಿಗುತ್ತದೆ, ಹಾಗಾಗಿ ಭಾರತ ದೇಶದಲ್ಲಿ ಎಲ್ಲಾ ಜಾತಿಗಳ ನೆಲೆಸಿರುವ ದೇಶವಾಗಿದೆ, ಹಿಂದೂ ಮುಸ್ಲಿಂ ಎಲ್ಲಾ ಭಾಂಧವರು ಒಗ್ಗಟ್ಟಾಗಿ ಎಲ್ಲರೂ ಒಂದೇ ಭಾರತ ದೇಶದ ಮಕ್ಕಳಂತೆ ಇರಬೇಕು,ಮಹ್ಮದ್ ಪೈಗಂಬರ್ ಹಾಕಿಕೊಟ್ಟ ಮಾರ್ಗದಲ್ಲಿ ನಡೆಯಬೇಕು ಎಂದರು.

ಬಡಿದರ್ಗಾದ ಸಜ್ಜದೆ ನಶೀನ ಸೈಯದ್ ಶಾ ಅಕ್ಬರ ಹುಸೈನಿ ಹಾಶ್ಮಿ ಸಾನಿಧ್ಯ ವಹಿಸಿದ್ದರು, ಅಬ್ದುಲ್ ಬಾಷೀದ್ ಸ್ವಾಗತಿಸಿದರು,ಹಾಫೀಜ್ ಇಸ್ಮಾಯಿಲ್ ನಿರೂಪಿಸಿದರು, ಮತೀನ್ ಸೌದಾಗಾರ ವಂದಿಸಿದರು.

**ವಿವಿಧ ಸಾಧಕರಿಗೆ ಸನ್ಮಾನ**

**ಕಾರ್ಯಕ್ರಮದಲ್ಲಿ ಬೃಹತ್ ರಕ್ತದಾನ ಶಿಬಿರದಲ್ಲಿ 52ಜನರು ರಕ್ತದಾನ ಮಾಡಿದರು,25ಸಸಿಗಳು ನೆಟ್ಟಿದ್ದರು,ವಿದ್ಯಾರ್ಥಿಗಳು ಆಗ್ರ ಶ್ರೇಣಿಯಲ್ಲಿ ಪಾಸಾದವರಿಗೆ ಹಾಗೂ ನೀಟ್ ನಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರಶಸ್ತಿ ಪ್ರದಾನ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಯಿತು,ಹಾಗೂ ವಿವಿಧ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು, ಮಹ್ಮದ್ ಪೈಗಂಬರ್ ಜನ್ಮದಿನ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣುಹಂಪಲು ವಿತರಣೆ, ಪುರಸಭೆ ಕಾರ್ಮಿಕರಿಗೆ ಸೀರೆ ವಿತರಣೆ ಮಾಡಿದರು, ರಾಜಕೀಯ ಮುಖಂಡರಿಗೆ ಹಾಗೂ ಪೂಜ್ಯರಿಗೆ ಮುಸ್ಲಿಂ ಬಾಂಧರಿಂದ ಕುರಾನ್ ನೀಡಿದರು.**

ಉದಯ ವಾಹಿನಿ

ಪ್ರಾದೇಶಿಕ

ಶನಿವಾರ 06 ಸೆಪ್ಟೆಂಬರ್ 2025 | 05

## ಮಿನಿ ನ್ಯೂಸ್

### ಆನ್‌ಲೈನ್ ವಂಚನೆ: ಆರು ಮಂದಿ ಬಂಧನ

• ಉದಯವಾಹಿನಿ ಉಡುಪಿ

ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭಾಂಶ ನೀಡುವುದಾಗಿ ನಂಬಿಸಿ ಆನ್‌ಲೈನ್‌ನಲ್ಲಿ ಹಣ ವಂಚನೆ ಮಾಡಿರುವ ಎರಡು ಪ್ರತ್ಯೇಕ ಪ್ರಕರಣಗಳಿಗೆ ಸಂಬಂಧಿಸಿ ಉಡುಪಿಯ ಸೆನ್ ಅಪರಾಧ ಠಾಣೆಯ ಪೊಲೀಸರು ಆರು ಮಂದಿಯನ್ನು ಬಂಧಿಸಿದ್ದಾರೆ. ಪೆರಂಪಳ್ಳಿಯ ತೀರ್ಥರಾಜ ಶೆಣೈ ಎಂಬುವವರನ್ನು ಅಪರಿಚಿತ ವ್ಯಕ್ತಿಯು ಟೆಲಿಗ್ರಾಮ್ ಗ್ರೂಪ್‌ಗೆ ಸೇರಿಸಿದ್ದು, ಅದರಲ್ಲಿ ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭಾಂಶ ನೀಡುವುದಾಗಿ ಆಮಿಷವೊಡ್ಡಲಾಗಿತ್ತು. ಅದನ್ನು ನಂಬಿದ ತೀರ್ಥರಾಜ ಅವರು ಹಂತ ಹಂತವಾಗಿ ಒಟ್ಟು 44 ಲಕ್ಷ ಹೂಡಿಕೆ ಮಾಡಿದ್ದಾರೆ. ಬಳಿಕ ಹಣ ನೀಡದೆ ವಂಚಿಸಿರುವಾಗಿ ತೀರ್ಥರಾಜ ಅವರು ಸೆನ್ ಅಪರಾಧ ಠಾಣೆಗೆ ದೂರು ನೀಡಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿ ಮೈಸೂರು ಜಿಲ್ಲೆಯ ಹುಣಸೂರಿನ ಶೋಯಬ್ ಅಹಮದ್ (28) ಮತ್ತು ಮುದ್ದಾಸಿರ್ ಅಹಮದ್ (40) ಎಂಬುವವರನ್ನು ಪೊಲೀಸರು ಬಂಧಿಸಿದ್ದಾರೆ. ಆರೋಪಿಗಳಿಂದ 2 ಲಕ್ಷ ನಗದು ಹಾಗೂ ಮೊಬೈಲ್ ಫೋನ್‌ಗಳನ್ನು ವಶಕ್ಕೆ ಪಡೆಯಲಾಗಿದೆ. ಕಾಪು ತಾಲ್ಲೂಕಿನ ಶಂಕರಪುರದ ಜೊಸ್ಸಿ ರವೀಂದ್ರ ಡಿಕ್ರೂಸ್ ಎಂಬುವವರಿಗೆ ಮೋಸ ಮಾಡಿದ ಪ್ರಕರಣಕ್ಕೆ ಸಂಬಂಧಿಸಿ ನಾಲ್ವರನ್ನು ಪೊಲೀಸರು ಬಂಧಿಸಿದ್ದಾರೆ.

### ಬಿಸಿಯೂಟ ಪರಿಶೀಲಿಸಿದ ಡಿಸಿ

• ಉದಯವಾಹಿನಿ ಹಾಸನ

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು, ತಾಲ್ಲೂಕಿನ ಗೊರೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ದಿಢೀರ್ ಭೇಟಿ ನೀಡಿ, ಬಿಸಿಯೂಟ ಪರಿಶೀಲಿಸಿದರು. ಕಾರ್ಯಕ್ರಮದ ನಿಮಿತ್ತ ತೆರಳುತ್ತಿದ್ದಾಗ, ಮಾರ್ಗಮಧ್ಯೆ ಗೊರೂರಿನ ಶಾಲೆಗೆ ಬಂದ ಅವರು, ಮಕ್ಕಳೊಂದಿಗೆ ಸರದಿ ಸಾಲಿನಲ್ಲಿ ಕುಳಿತು ಬಿಸಿಯೂಟ ಸೇವಿಸುವ ಮೂಲಕ ಗುಣಮಟ್ಟ ಪರೀಕ್ಷೆ ಮಾಡಿದರು. ಇದೇ ವೇಳೆ ಮಕ್ಕಳೊಂದಿಗೆ ಮಾತನಾಡಿದ ಅವರು, 'ನಿಮಗೆ ಹಾಲು ಇಷ್ಟಾನಾ' ಎಂದು ಕೇಳಿದರು. ಊಟ ಹೇಗಿದೆ? ಹಾಲು ಚೆನ್ನಾಗಿದೆಯಾ? ಪ್ರತಿದಿನ ಗುಣಮಟ್ಟದ ಊಟ ನೀಡುತ್ತಿದ್ದಾರೆಯೇ' ಎಂದು ಮಕ್ಕಳಿಂದ ಮಾಹಿತಿ ಪಡೆದರು. ಸರ್ಕಾರಿ ಶಾಲೆಗೆ ದಿಢೀರ್ ಭೇಟಿ ನೀಡಿದ್ದರಿಂದ ಶಾಲೆಯ ಶಿಕ್ಷಕರು, ಸಿಬ್ಬಂದಿ ಕೆಲಕಾಲ ಅಚ್ಚರಿಗೆ ಒಳಗಾದರು. ಪರಿಶೀಲನೆ ಬಳಿಕ ಶಾಲೆಯ ಆಡಳಿತ ಮಂಡಳಿ, ಮುಖ್ಯ ಶಿಕ್ಷಕರು ಹಾಗೂ ಅಡುಗೆ ಸಿಬ್ಬಂದಿಯಿಂದ ಮಾಹಿತಿ ಪಡೆದರು.

### ಸಮರ್ಪಕ ಬಸ್ ಸೌಲಭ್ಯಕ್ಕೆ ಆಗ್ರಹ

• ಉದಯವಾಹಿನಿ ಶಿರಸಿ

ಪ್ರಯಾಣಿಕರ ಅನುಕೂಲಕ್ಕೆ ತಕ್ಕಂತೆ ಹಾಗೂ ಹೆಚ್ಚಿನ ಆಸನದ ವ್ಯವಸ್ಥೆಯಿರುವ ಬಸ್ ಬಿಡುವಂತೆ ಆಗ್ರಹಿಸಿ ತಾಲ್ಲೂಕಿನ ಸೋಂದಾ ಗ್ರಾಮ ಪಂಚಾಯಿತಿ ಸದಸ್ಯರು ಮತ್ತು ಗ್ರಾಮಸ್ಥರು ಬಸ್ ಸಂಚಾರ ತಡೆದು ಪ್ರತಿಭಟನೆ ನಡೆಸಿದರು. ಶಿರಸಿಯಿಂದ ಸೋಂದಾಕ್ಕೆ ಬೆಳಿಗ್ಗೆ 7.30ಕ್ಕೆ ಬಿಡುವ ಬಸ್ ಸಮಯದಲ್ಲಿ ವ್ಯತ್ಯಾಸ ಆಗುತ್ತಿದೆ. ಶಾಲಾ ಕಾಲೇಜಿಗೆ ಸಮಯಕ್ಕೆ ಸರಿಯಾಗಿ ತರಗತಿಗೆ ತೆರಳಲು ಇದರಿಂದ ಸಾಧ್ಯವಾಗುತ್ತಿಲ್ಲ. ಒಂದೇ ಬಸ್ ಇರುವುದರಿಂದ ಓಡಾಟದ ಸಮಯದಲ್ಲೂ ವ್ಯತ್ಯಾಸ ಆಗುತ್ತಿದೆ. ಜೂನ್ ತಿಂಗಳಿನಿಂದ ಸಮಸ್ಯೆ ಉಲ್ಬಣಿಸುತ್ತಿದ್ದು, ವಿದ್ಯಾರ್ಥಿಗಳಿಗೆ ತೀರಾ ತೊಂದರೆ ಆಗುತ್ತಿದೆ' ಎಂದು ಗ್ರಾಮಸ್ಥರು ಆಕ್ರೋಶ ಹೊರಹಾಕಿದರು.


ಬೆಳಿಗ್ಗೆ 8.30ಕ್ಕೆ ಸೋಂದಾದಿಂದ ಹೊರಡುವ ಬಸ್‌ಗೆ ಶಾಲಾ ಮಕ್ಕಳು ಸುಮಾರು 80 ಹಾಗೂ 25 ಸಾರ್ವಜನಿಕರು ಪ್ರತಿ ದಿನ ಪ್ರಯಾಣ ಮಾಡುತ್ತಾರೆ. ಅದ್ದರಿಂದ ಈ ಬಸ್ ಅನ್ನು ನಿಗದಿತ ಸಮಯಕ್ಕೆ ಸೋಂದಾದಿಂದ ಮರಳುವ ವ್ಯವಸ್ಥೆ ಮಾಡಬೇಕು. ಹೆಚ್ಚಿನ ಸೀಟ್ ವ್ಯವಸ್ಥೆ ಇರುವ ಬಸ್ ಅನ್ನು ಸೋಂದಾಕ್ಕೆ ಬಿಡಬೇಕು ಇಲ್ಲವೇ ಈ ಸಮಯಕ್ಕೆ ಮತ್ತೊಂದು ಬಸ್ ವ್ಯವಸ್ಥೆ ಮಾಡಬೇಕು' ಎಂದರು. ಮಧ್ಯಾಹ್ನ ಶಿರಸಿಯಿಂದ ಸೋಂದಾಕ್ಕೆ ಬಿಡುವ ಬಸ್ಸನ್ನು 3.15ಕ್ಕೆ ಬದಲಾಗಿ 3.30ಕ್ಕೆ ಬಿಡಬೇಕು, ಸೋಂದಾದಿಂದ 4.30ಕ್ಕೆ ಮರಳುವ ವ್ಯವಸ್ಥೆ ಮಾಡಿ ಕೊಡಬೇಕು. ಜತೆಗೆ, ಔಡಾಳ ಬಸ್ ಸಮಯದಲ್ಲೂ ಬದಲಾವಣೆ ಮಾಡಬೇಕು' ಎಂದು ಒತ್ತಾಯಿಸಿದರು. ಈ ವೇಳೆ ಎನ್.ಡಬ್ಲ್ಯು.ಕೆ.ಆರ್.ಟಿ.ಸಿ. ಅಧಿಕಾರಿ ಮಹೇಶ ಅವರಿಗೆ ಮನವಿ ನೀಡಿದರು.

### ಸ್ವಾಸ್ಥ್ಯ ಕೇಂದ್ರಕ್ಕೆ ನಿವೇಶನ ಗುರುತಿಸಿ

• ಉದಯವಾಹಿನಿ ಚನ್ನರಾಯಪಟ್ಟಣ

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ 43 ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರಗಳನ್ನು ನಿರ್ಮಾಣ ಮಾಡುವ ಉದ್ದೇಶದಿಂದ ನಿವೇಶನಗಳನ್ನು ಗುರುತಿಸಬೇಕಿದ್ದು, ಕಂದಾಯ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆ ಅಧಿಕಾರಿಗಳ ಸಭೆ ಕರೆದು ನಿವೇಶನ ಕಾಯ್ದಿರಿಸುವ ಕೆಲಸ ಮಾಡಲಾಗಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು. ಪ್ರಧಾನಮಂತ್ರಿ ಅಯುಷ್ಮಾನ್ ಭಾರತ್ ಮೂಲಸೌಕರ್ಯ ಮಿಷನ್' ಯೋಜನೆಯಡಿ ನಿರ್ಮಾಣ ಮಾಡಲು ಉದ್ದೇಶಿಸಿರುವ ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರಗಳ ನಿರ್ಮಾಣಕ್ಕೆ ಸರ್ಕಾರಿ ಜಾಗದ ಮಾಹಿತಿ ಪಡೆಯಲು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಈಚೆಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ತಾಲ್ಲೂಕಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಲಿರುವ ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರಗಳಿಗೆ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮ ಠಾಣಾ ಜಾಗ ಅಥವಾ ಕಂದಾಯ ಜಾಗವನ್ನು ಗುರುತಿಸುವ ಕೆಲಸ ಆಗಬೇಕಿದೆ. ಇದಕ್ಕಾಗಿ ಎರಡು ಇಲಾಖೆಗಳ ಅಧಿಕಾರಿಗಳ ಸಭೆಯನ್ನು ಕರೆದು ಚರ್ಚಿಸಿದ್ದು, ತಾಲ್ಲೂಕಿನಲ್ಲಿ ನಿರ್ಮಾಣವಾಗಲಿರುವ 43 ಉಪಕೇಂದ್ರಗಳಿಗೂ ಜಾಗ ಅಂತಿಮಗೊಳಿಸಿ ಅಗತ್ಯ ದಾಖಲೆಗಳನ್ನು ಕಂದಾಯ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆಗಳು ಆರೋಗ್ಯ ಇಲಾಖೆಗೆ ಒದಗಿಸಬೇಕು ಎಂದು ತಿಳಿಸಿದರು. ಗ್ರಾಮೀಣ ಭಾಗದಲ್ಲಿ ಗುಣಮಟ್ಟದ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರ ನಿರ್ಮಾಣ ಮಾಡಲು ಕೇಂದ್ರ ಮುಂದಾಗಿದ್ದು, ತಾಲ್ಲೂಕು ಆಡಳಿತ ನೀಡಿದ ಜಾಗದಲ್ಲಿ 65 ಲಕ್ಷ ವೆಚ್ಚದಲ್ಲಿ ಸುಸಜ್ಜಿತ ಕಟ್ಟಡ ನಿರ್ಮಾಣವಾಗಲಿದೆ. ಈಗಾಗಲೇ ಹುಲ್ಲೇನಹಳ್ಳಿ ಮತ್ತು ಸಬ್ಬನಹಳ್ಳಿ ಗ್ರಾಮಗಳಲ್ಲಿ ಜಾಗ ಅಂತಿಮಗೊಳಿಸಿ, ಟೆಂಡರ್ ಪ್ರಕ್ರಿಯೆ ಮುಗಿದು ಕಟ್ಟಡದ ಕಾಮಗಾರಿ ಪ್ರಗತಿಯಲ್ಲಿದೆ. ಉಳಿದ 12 ಕಡೆ ಜಾಗ ಅಂತಿಮಗೊಳಿಸಿ ಟೆಂಡರ್ ಪ್ರಕ್ರಿಯೆ ಹಂತದಲ್ಲಿವೆ. ಬಾಕಿ ಇರುವ 29 ಜಾಗಗಳನ್ನು ಗುರುತಿಸುವ ಕೆಲಸವಾಗಿದೆ ಎಂದರು.



ಉದಯವಾಹಿನಿ ಚಿತ್ರ




# ದಿ ಬೆಂಗಾಲ್ ಫೈಲ್ಸ್ ಸಿನಿಮಾ ಹೇಗಿದೆ

**ಸಿನಿಮಾ ನೋಡಿದವರು ಹೇಳಿದ್ದೇನು**

ದಿ ಬೆಂಗಾಲ್ ಫೈಲ್ಸ್ ಸಿನಿಮಾದ ಟ್ರೈಲರ್ ಬಿಡುಗಡೆ ಆದಾಗ ತುಸು ವಿವಾದ ಹುಟ್ಟುಹಾಕಿತ್ತು. ಆಡಳಿತ ಸರ್ಕಾರದ ಬಗ್ಗೆ ಕಮ್ಯೂನಿಸ್ಟರ ಬಗ್ಗೆ, ಮುಸ್ಲಿಮರ ಬಗ್ಗೆ ದ್ವೇಷ ಮೂಡಿಸಲೆಂದೇ ನಿರ್ಮಿಸಲಾದ ಸಿನಿಮಾ ಇದೆಂಬ ಟೀಕೆಗೆ ಗುರಿ ಆಗಿತ್ತು. ಇದೀಗ ಸಿನಿಮಾ ಬಿಡುಗಡೆ ಆಗಿದ್ದು, ಸಿನಿಮಾ ನೋಡಿದವರು ತಮ್ಮ ಅಭಿಪ್ರಾಯಗಳನ್ನು ಟ್ವಿಟ್ಟರ್‌ನಲ್ಲಿ ಹಂಚಿಕೊಂಡಿದ್ದಾರೆ.

'ದಿ ಕಶ್ಮೀರ್ ಫೈಲ್ಸ್', 'ವ್ಯಾಕ್ಸಿನ್ ವಾರ್' ಸಿನಿಮಾಗಳ ನಿರ್ದೇಶಕ ವಿವೇಕ್ ಅಗ್ನಿಹೋತ್ರಿ ಇದೀಗ 'ದಿ ಬೆಂಗಾಲ್ ಫೈಲ್ಸ್' ಸಿನಿಮಾ ನಿರ್ದೇಶನ ಮತ್ತು ನಿರ್ಮಾಣವನ್ನೂ ಮಾಡಿದ್ದಾರೆ. ವಿವೇಕ್ ಅಗ್ನಿಹೋತ್ರಿ ಹೇಳಿರುವಂತೆ ಅವರ ಈ ಸಿನಿಮಾ ಪಶ್ಚಿಮ ಬಂಗಾಳದ ರಾಜಕೀಯ ಮತ್ತು ಸಾಂಸ್ಕೃತಿಕ ಇತಿಹಾಸ ಹೇಳುವ ಸಿನಿಮಾ ಆಗಿದೆ. ಸಿನಿಮಾದ ಟ್ರೈಲರ್ ಬಿಡುಗಡೆ ಆದಾಗ ತುಸು ವಿವಾದ ಹುಟ್ಟುಹಾಕಿತ್ತು. ಆಡಳಿತ ಸರ್ಕಾರದ ಬಗ್ಗೆ ಕಮ್ಯೂನಿಸ್ಟರ ಬಗ್ಗೆ, ಮುಸ್ಲಿಮರ ಬಗ್ಗೆ ದ್ವೇಷ ಮೂಡಿಸಲೆಂದೇ ನಿರ್ಮಿಸಲಾದ ಸಿನಿಮಾ ಇದೆಂಬ ಟೀಕೆಗೆ ಗುರಿ ಆಗಿತ್ತು. ಇದೀಗ ಸಿನಿಮಾ ಬಿಡುಗಡೆ ಆಗಿದ್ದು, ಸಿನಿಮಾ ನೋಡಿದವರು ತಮ್ಮ ಅಭಿಪ್ರಾಯಗಳನ್ನು ಟ್ವಿಟ್ಟರ್‌ನಲ್ಲಿ ಹಂಚಿಕೊಂಡಿದ್ದಾರೆ.

ಲವ್ ಪ್ರೇಮ್ ಎಂಬುವರು ಟ್ವೀಟ್ ಮಾಡಿ, 'ಇದೊಂದು ಕಣ್ಣು ತೆರೆಸುವ ಸಿನಿಮಾ. ಪಂಜಾಬ್ ಮತ್ತು ಕಾಶ್ಮೀರಗಳಲ್ಲಿ ಇಂಥಹಾ ಘಟನೆಗಳು ನಡೆದಿವೆ ಎಂದು ಕೇಳಿದ್ದೆ. ಆದರೆ ಪಶ್ಚಿಮ ಬಂಗಾಳದಲ್ಲಿಯೂ ಹೀಗೆ ನಡೆದಿದೆ ಎಂಬುದು ಗೊತ್ತಿರಲಿಲ್ಲ. ಕುಟುಂಬ ಮತ್ತು ಗೆಳೆಯರೊಟ್ಟಿಗೆ ನೋಡಲೇಬೇಕಾದ ಸಿನಿಮಾ.

# ಲೀಕ್ ಆಯ್ತು ಮಹೇಶ್ ಬಾಬು ರಾಜಮೌಳಿ ಸಿನಿಮಾ ಸೆಟ್



ರಾಜಮೌಳಿ ಮತ್ತು ಮಹೇಶ್ ಬಾಬು ಅವರ ಮುಂದಿನ ಚಿತ್ರದ ಶೂಟ್ ಕೀನ್ಯಾದಲ್ಲಿ ನಡೆಯುತ್ತಿದೆ. ಶೂಟಿಂಗ್ ಸಮಯದಲ್ಲಿ ಸೆಟ್ ಫೋಟೋಗಳು ಲೀಕ್ ಆಗಿವೆ. ಇದು ರಾಜಮೌಳಿ ಅವರನ್ನು ಕಳವಳಗೊಳಿಸಿದೆ. ಚಿತ್ರದ ಬಗ್ಗೆ ಅಧಿಕೃತ ಮಾಹಿತಿ ನವೆಂಬರ್‌ನಲ್ಲಿ ಬಿಡುಗಡೆಯಾಗುವ ನಿರೀಕ್ಷೆಯಿದೆ. ಲೀಕ್ ಆದ ಫೋಟೋಗಳಲ್ಲಿ ಮಹೇಶ್ ಬಾಬು ಅವರ ಲುಕ್ ಕೂಡ ಬಹಿರಂಗಗೊಂಡಿದೆ.

ಮಹೇಶ್ ಬಾಬು ಹಾಗೂ ರಾಜಮೌಳಿ ಅವರು ತಮ್ಮ ಮುಂದಿನ ಸಿನಿಮಾ ಶೂಟ್‌ನಲ್ಲಿ ಬ್ಯುಸಿ ಇದ್ದಾರೆ. ಈ ಚಿತ್ರದ ಶೂಟಿಂಗ್ ಕೀನ್ಯಾದಲ್ಲಿ ನಡೆಯುತ್ತಿದೆ. ಈ ಚಿತ್ರದ ಬಗ್ಗೆ ನವೆಂಬರ್‌ನಲ್ಲಿ ಅಪ್‌ಡೇಟ್ ಕೊಡೋದಾಗಿ ರಾಜಮೌಳಿ ಹೇಳಿದ್ದರು. ಅದಕ್ಕೂ ಮೊದಲೇ ಸಿನಿಮಾಗೆ ದೊಡ್ಡ ಹಿನ್ನಡೆ ಆಗಿದೆ. ಈ ಸಿನಿಮಾದ ಸೆಟ್ ಫೋಟೋ ಲೀಕ್ ಆಗಿದೆ. ಇದು ರಾಜಮೌಳಿ ಚಿಂತೆಗೆ ಕಾರಣ ಆಗಿದೆ.

ರಾಜಮೌಳಿ ಹಾಗೂ ಮಹೇಶ್ ಬಾಬು ಸಿನಿಮಾ ಶೂಟ್ ಆರಂಭ ಆಗಿ ಸಾಕಷ್ಟು ಸಮಯ ಕಳೆದಿದೆ. ಆದರೆ, ತಂಡದಿಂದ ಯಾವುದೇ ಅಧಿಕೃತ ಘೋಷಣೆ ಆಗಿಲ್ಲ. ಈ ಸಿನಿಮಾದ ಟೈಟಲ್ ಕೂಡ ರಿವೀಲ್ ಆಗಿಲ್ಲ. ಹೀಗಿರುವಾಗಲೇ ಕೆಲವರು ಸಿನಿಮಾದ ಸೆಟ್ ಫೋಟೋಗಳನ್ನು ಕದ್ದು ಬಿಡುವ ಕೆಲಸ ಮಾಡುತ್ತಿದ್ದಾರೆ. ಇದು ಅಭಿಮಾನಿಗಳ ಬೇಸರಕ್ಕೂ ಕಾರಣ ಆಗಿದೆ.

ಸಿನಿಮಾ ಸೆಟ್‌ಗಳಲ್ಲಿ ರಾಜಮೌಳಿ ಸಾಕಷ್ಟು ಎಚ್ಚರಿಕೆ ವಹಿಸುತ್ತಾರೆ. ಶೂಟ್ ವೇಳೆ ಯಾರೂ ಮೊಬೈಲ್ ತರದಂತೆ ಅವರು ಆಗ್ರಹಿಸುತ್ತಾರೆ. ಆದಾಗ್ಯೂ ಕೆಲವರು ಕದ್ದು ಮೊಬೈಲ್ ಬಳಕೆ ಮಾಡಿದ ಉದಾಹರಣೆ ಇದೆ. ಇದುವೇ ಈಗ ಸಿನಿಮಾ ತಂಡಕ್ಕೆ ಮುಳುವಾಗಿ ಪರಿಣಮಿಸಿದೆ.

# ಮಾರ್ಕ್‌ಗೆ ಸಂಕಷ್ಟ



**ಟೈಟಲ್ ವಿಚಾರದಲ್ಲಿ ಭುಗಿಲೆದ್ದ ವಿವಾದ**

ಕಿಚ್ಚ ಸುದೀಪ್ ಅವರ 47ನೇ ಚಿತ್ರವಾದ 'ಮಾರ್ಕ್' ಸಿನಿಮಾದ ಹೆಸರಿನಲ್ಲಿ ವಿವಾದ ಉದ್ಭವಿಸಿದೆ. ಕೆಆರ್‌ಜಿ ಸ್ಟುಡಿಯೋ ಮತ್ತು ಗೌರವ್ ಫಿಲ್ಮ್ಸ್ ಎರಡೂ ಸಂಸ್ಥೆಗಳು ಈ ಹೆಸರನ್ನು ನೋಂದಾಯಿಸಿರುವುದು ವಿವಾದಕ್ಕೆ ಕಾರಣ. ಸುದೀಪ್ ಚಿತ್ರದ ಶೂಟಿಂಗ್ 60% ಪೂರ್ಣಗೊಂಡಿದ್ದು, ಡಿಸೆಂಬರ್ 25ರಂದು ಬಿಡುಗಡೆಯಾಗುವ ನಿರೀಕ್ಷೆ ಇದೆ. ಕಿಚ್ಚ ಸುದೀಪ್ ಬರ್ತ್‌ಡೇ ಪ್ರಯುಕ್ತ 'ಮಾರ್ಕ್' ಸಿನಿಮಾ ಟೈಟಲ್ ರಿವೀಲ್ ಆಯಿತು. ಇದು ಅವರ ನಟನೆಯ 47ನೇ ಸಿನಿಮಾ. ಈ ಮೊದಲು ಸುದೀಪ್ ಅವರು ಮ್ಯಾಕ್ಸ್ ಆಗಿ ಎಲ್ಲರ ಗಮನ ಸೆಳೆದಿದ್ದರು. ಈಗ ಅವರು 'ಮಾರ್ಕ್' ಸಿನಿಮಾ ಮೂಲಕ ಎಂಟ್ರಿ ಕೊಡಲು ರೆಡಿ ಆಗಿದ್ದಾರೆ. ಈಗಾಗಲೇ ಸಿನಿಮಾದ ಶೂಟ್ ಕೂಡ ಅರ್ಧಕ್ಕಿಂತ ಹೆಚ್ಚು ಪೂರ್ಣಗೊಂಡಿದೆ. ಹೀಗಿರುವಾಗ ಸಿನಿಮಾದ ಟೈಟಲ್ ವಿವಾದ ಭುಗಿಲೆದ್ದಿದೆ. 'ಮಾರ್ಕ್' ಸಿನಿಮಾ ಟೈಟಲ್ ಕರ್ನಾಟಕ ಫಿಲ್ಮ್ ಚೇಂಬರ್‌ನಲ್ಲಿ ರಿಜಿಸ್ಟರ್ ಆಗಿದೆ. ಈ ಟೈಟಲ್ ನೋಂದಣಿ ಮಾಡಿಸಿದ್ದು ಕೆಆರ್‌ಜಿ ಸ್ಟುಡಿಯೋದವರು. ಎರಡು ವರ್ಷಗಳ ಹಿಂದೆ ಟೈಟಲ್ ಪಡೆದುಕೊಂಡಿದ್ದರು. ಆದರೆ, ಸುದೀಪ್‌ಗಾಗಿ ಶೀರ್ಷಿಕೆಯನ್ನು ಅವರು ಬಿಟ್ಟುಕೊಟ್ಟಿದ್ದರು.

ಈಗ ಈ ಟೈಟಲ್ 'ಸತ್ಯ ಜ್ಯೋತಿ ಫಿಲ್ಮ್ಸ್‌ಗೆ ಹಸ್ತಾಂತರ ಆಗಿದೆ. ಇದೇ ಸಂಸ್ಥೆಯ ಜೊತೆ ಸುದೀಪ್ 'ಮಾರ್ಕ್' ಮಾಡುತ್ತಿದ್ದಾರೆ. ಆದರೆ, ಈಗ 'ಕನ್ನಡ ಚಲನಚಿತ್ರ ವಾಣಿಜ್ಯ ಮಂಡಳಿ'ಯಲ್ಲೂ 'ಮಾರ್ಕ್' ಟೈಟಲ್ ನೋಂದಣಿ ಆಗಿದೆ. ಇದೇ ವರ್ಷದ ಮೇ 19ರಂದು ಈ ಸಿನಿಮಾ ಹೆಸರಲ್ಲಿ ಟೈಟಲ್ ನೋಂದಣಿ ಆಗಿದೆ.

# ಶಿಲ್ಪಾ ಶೆಟ್ಟಿ ರಾಜ್ ಕುಂದ್ರಾಗೆ ಲುಕ್‌ಔಟ್ ನೋಟೀಸ್

**60 ಕೋಟಿ ವಂಚನೆ ಪ್ರಕರಣ**



ಶಿಲ್ಪಾ ಶೆಟ್ಟಿ ಮತ್ತು ರಾಜ್ ಕುಂದ್ರಾ, ಬಾಲಿವುಡ್‌ನ ಜನಪ್ರಿಯ ದಂಪತಿ. ಉದ್ಯಮಿಗಳೂ ಸಹ ಹೌದು. ಆದರೆ ಆಗಾಗ್ಗೆ ಈ ದಂಪತಿಯ ಮೇಲೆ ವಂಚನೆ ಪ್ರಕರಣಗಳು ಕೇಳಿ ಬರುತ್ತಲೇ ಇರುತ್ತವೆ. ಇತ್ತೀಚೆಗಷ್ಟೆ ಉದ್ಯಮಿಯೊಬ್ಬರು ರಾಜ್ ಕುಂದ್ರಾ ಮತ್ತು ಶಿಲ್ಪಾ ಶೆಟ್ಟಿ ವಿರುದ್ಧ 60 ಕೋಟಿ ಹಣ ವಂಚನೆ ಪ್ರಕರಣ ದಾಖಲಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ದಂಪತಿಗಳ ವಿರುದ್ಧ ಲುಕ್‌ಔಟ್ ನೋಟೀಸ್ ಜಾರಿ ಆಗಿದೆ.

ನಟಿ ಶಿಲ್ಪಾ ಶೆಟ್ಟಿ ಮತ್ತು ರಾಜ್ ಕುಂದ್ರಾ, ದಂಪತಿಗೆ ಸಂಕಷ್ಟಗಳು ಕಡಿಮೆಯೇ ಆಗುತ್ತಿಲ್ಲ. ಕಾಲ ಕಾಲಕ್ಕೆ ಅವರ ಮೇಲೆ ಹಣಕಾಸು ಮತ್ತು ಬ್ಯುಸಿನೆಸ್‌ಗೆ ಸಂಬಂಧಿಸಿದಂತೆ ಆರೋಪಗಳು ಬರುತ್ತಲೇ ಇವೆ. ರಾಜ್ ಕುಂದ್ರಾ, ಅಂತೂ ಜೈಲಿಗೆ ಸಹ ಹೋಗಿ ಬಂದಿದ್ದಾಗಿದೆ. ಇದೀಗ ಎಲ್ಲವೂ ಸರಿ ಹೋಯಿತು ಎಂದುಕೊಳ್ಳುತ್ತಿರುವಾಗಲೇ ಇತ್ತೀಚೆಗಷ್ಟೆ ಈ ದಂಪತಿಯ ಮೇಲೆ 60 ಕೋಟಿ ರೂಪಾಯಿ ಹಣಕಾಸು ವಂಚನೆ ಆರೋಪ ಕೇಳಿ ಬಂದಿತ್ತು, ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಶಿಲ್ಪಾ ಶೆಟ್ಟಿ ಮತ್ತು ರಾಜ್ ಕುಂದ್ರಾ, ವಿರುದ್ಧ ಲುಕೌಟ್ ನೊಟೀಸ್ ಜಾರಿ ಆಗಿದೆ.

ದೀಪಕ್ ಕೊಠಾರಿ ಹೆಸರಿನ ಉದ್ಯಮಿಯೊಬ್ಬರು ಶಿಲ್ಪಾ ಶೆಟ್ಟಿ ಮತ್ತು ರಾಜ್ ಕುಂದ್ರಾ, ವಿರುದ್ಧ ದೂರು ದಾಖಲಿಸಿದ್ದಾರೆ. ಈ ದಂಪತಿ 2015 ಮತ್ತು 2023ರ ನಡುವೆ 60 ಕೋಟಿ ರೂಪಾಯಿ ಹಣವನ್ನು ತಮ್ಮಿಂದ ಉದ್ಯಮ ವಿಸ್ತರಣೆಗೆ ಸಾಲವಾಗಿ ಪಡೆದಿದ್ದಾರೆ. ಆದರೆ ಆ ಹಣವನ್ನು ಸಾಲ ಪಡೆದ ಉದ್ದೇಶಕ್ಕೆ ಬಳಸಿಕೊಳ್ಳದೆ ತಮ್ಮ ವೈಯಕ್ತಿಕ ಕಾರಣಗಳಿಗೆ ಬಳಸಿಕೊಂಡಿದ್ದಾರೆ ಎಂದು ದೀಪಕ್ ಆರೋಪ ಮಾಡಿದ್ದಾರೆ. ಅಲ್ಲದೆ ತಾವು ಕೊಟ್ಟ ಹಣವನ್ನು ಹೂಡಿಕೆ ಎಂದು ತೋರಿಸುವ ಮೂಲಕ ತೆರಿಗೆ ವಂಚನೆಯನ್ನೂ ಸಹ ಮಾಡಿದ್ದಾರೆ ಎಂದು ಅವರು ಆರೋಪ ಮಾಡಿದ್ದಾರೆ.

ತಾವು ಸಾಲವಾಗಿ ಪಡೆದಿರುವ ಹಣಕ್ಕೆ ವಾರ್ಷಿಕ 12% ಬಡ್ಡಿ ಕೊಡುವುದಾಗಿ ದಂಪತಿಗಳು ಒಪ್ಪಂದ ಮಾಡಿಕೊಂಡಿದ್ದರಂತೆ ಅಲ್ಲದೆ 2016 ರಲ್ಲಿ ಶಿಲ್ಪಾ ಶೆಟ್ಟಿ ಸಾಲಕ್ಕೆ ಗ್ಯಾರೆಂಟಿಯನ್ನು ಸಹ ಒದಗಿಸಿದ್ದರಂತೆ. ಆದರೆ ಅದಾದ ಬಳಿಕ ಅವರೇ ಕಂಪೆನಿಯ ನಿರ್ದೇಶಕ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊರನಡೆದಿದ್ದಾರೆ. ತಾವು ಕೊಟ್ಟ ಹಣವನ್ನು ಹೂಡಿಕೆಗಳಿಗಾಗಿ ಬಳಸಿಕೊಂಡಿದ್ದಲ್ಲದೆ, ಬಡ್ಡಿ ಪಾವತಿಸದೆ ಮೋಸ ಮಾಡಿದ್ದಾರೆ ಎಂದು ದೀಪಕ್ ಆರೋಪ ಮಾಡಿದ್ದಾರೆ.


ಪ್ರಕರಣದ ತನಿಖೆಯನ್ನು ಮುಂಬೈ ಪೊಲೀಸರ ಆರ್ಥಿಕ ಅಪರಾಧ ತಡೆ ವಿಭಾಗ ಮಾಡುತ್ತಿದ್ದು, ಇದೀಗ ನ್ಯಾಯಾಲಯವು ಶಿಲ್ಪಾ ಶೆಟ್ಟಿ ಮತ್ತು ರಾಜ್ ಕುಂದ್ರಾ, ಅವರಿಗೆ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಲುಕೌಟ್ ನೊಟೀಸ್ ನೀಡಿದೆ. ನೊಟೀಸ್ ಜಾರಿ ಆಗಿರುವ ಕಾರಣದಿಂದಾಗಿ ಶಿಲ್ಪಾ ಶೆಟ್ಟಿ ಮತ್ತು ರಾಜ್ ಕುಂದ್ರಾ, ಅವರುಗಳು ಹೊರದೇಶಗಳಿಗೆ ಸಂಚಾರ ಮಾಡದಂತಾಗಿದೆ. ಆದರೆ ಈ ಆರೋಪಗಳೆಲ್ಲ ಸುಳ್ಳು, ತಾವು ನ್ಯಾಯಾಲಯದ ಮೂಲಕವೇ ಇದಕ್ಕೆ ಉತ್ತರ ನೀಡುವುದಾಗಿ ರಾಜ್ ಕುಂದ್ರಾ, ಹೇಳಿದ್ದಾರೆ.

# 'ಲೋಕಃ' ನಾಯಕಿ ಕಲ್ಯಾಣಿ ಯಾರು

**ಅತ್ಯಂತ ಕಡಿಮೆ ಬಜೆಟ್‌ನಲ್ಲಿ ನಿರ್ಮಾಣ**

ಮಲಯಾಳಂ ಸಿನಿಮಾ 'ಲೋಕಃ' ಚಿತ್ರಮಂದಿರಗಳಲ್ಲಿ ಸಖತ್ ಸದ್ದು ಮಾಡುತ್ತಿದೆ. ನಾಯಕಿ ಪ್ರಧಾನ ಸಿನಿಮಾ ಒಂದು ಬಾಕ್ಸ್ ಆಫೀಸ್‌ನಲ್ಲಿ ಇಷ್ಟು ದೊಡ್ಡ ಮಟ್ಟದಲ್ಲಿ ಅಬ್ಬರಿಸುತ್ತಿರುವುದು ಅಪರೂಪ. ಇದೊಂದು ಮಹಿಳಾ ಸೂಪರ್ ಹೀರೋ ಸಿನಿಮಾ ಆಗಿರುವುದು ಮತ್ತೊಂದು ವಿಶೇಷ. ಮಲಯಾಳಂ ಸಿನಿಮಾ 'ಲೋಕಃ' ಚಿತ್ರಮಂದಿರಗಳಲ್ಲಿ ಸಖತ್ ಸದ್ದು ಮಾಡುತ್ತಿದೆ. ಕಳೆದ ವಾರ ಬಿಡುಗಡೆ ಆದ ಈ ಸಿನಿಮಾ ಕೇವಲ ಒಂದು ವಾರದಲ್ಲಿ ನೂರು ಕೋಟಿ ಕಲೆಕ್ಷನ್ ದಾಟಿದೆ. ಇದೊಂದು ನಾಯಕಿ ಪ್ರಧಾನ ಸಿನಿಮಾ ಆಗಿದ್ದು, ನಾಯಕಿಯಾಗಿ ಕಲ್ಯಾಣಿ ಪ್ರಿಯದರ್ಶನ್ ನಟಿಸಿದ್ದಾರೆ. ಭಾರತದಲ್ಲಿ ಈ ವರೆಗೆ ನಿರ್ಮಾಣವಾಗಿರುವ ಸೂಪರ್ ಹೀರೋ ಸಿನಿಮಾಗಳಲ್ಲಿಯೇ ಉತ್ತಮವಾದ ಹಾಗೂ ಅತ್ಯಂತ ಕಡಿಮೆ ಬಜೆಟ್‌ನಲ್ಲಿ ನಿರ್ಮಾಣಗೊಂಡು ಅತ್ಯುತ್ತಮ ಗುಣಮಟ್ಟದ ಸಿನಿಮಾ ಎಂಬ ಖ್ಯಾತಿ ಗಳಿಸಿಕೊಂಡಿದೆ. ಸಿನಿಮಾದ ನಾಯಕಿ ಕಲ್ಯಾಣಿಗಂತೂ ಹೊಗಳಿಕೆಗಳ ಸುರಿಮಳೆಯೇ ಆಗುತ್ತಿದೆ.

ಅಂದಹಾಗೆ ಈ ಸಿನಿಮಾದ ನಾಯಕಿ ಕಲ್ಯಾಣಿ ಪ್ರಿಯದರ್ಶನ್ ನಟಿಯಾಗಲು ಚಿತ್ರರಂಗಕ್ಕೆ ಬಂದವರಲ್ಲ. ಅವರ ಆಸೆ ಬೇರೆಯೇ ಇತ್ತು. ಕಲ್ಯಾಣಿ ಪ್ರಿಯದರ್ಶನ್, ಲೆಜೆಂಡರಿ ಸಿನಿಮಾ ನಿರ್ದೇಶಕ ಪ್ರಿಯದರ್ಶನ್ ಹಾಗೂ ಖ್ಯಾತ ಮಲಯಾಳಂ ನಟಿ ಲಿಸ್ಸಿ ಅವರ ಪುತ್ರಿ. ಕಲ್ಯಾಣಿ ಜನಿಸಿದ್ದು ಚೆನ್ನೈನಲ್ಲಿ.




# 27 ವರ್ಷಗಳ ನಂತರ ಏಕದಿನ ಸರಣಿ ಗೆದ್ದ ದಕ್ಷಿಣ ಆಫ್ರಿಕಾ

**ಆಂಗ್ಲರಿಗೆ ಭಾರೀ ಮುಖಭಂಗ**

ಲಾರ್ಡ್ಸ್‌ನಲ್ಲಿ ನಡೆದ ಎರಡನೇ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ ಇಂಗ್ಲೆಂಡ್ ವಿರುದ್ಧ 5 ರನ್‌ಗಳ ಜಯ ಸಾಧಿಸುವ ಮೂಲಕ ಏಕದಿನ ಸರಣಿಯನ್ನು ತನ್ನದಾಗಿಸಿಕೊಂಡಿತು. ಮ್ಯಾಥ್ಯೂ ಬ್ರೀಟ್ಜ್ಕೆ ಅವರ ಐತಿಹಾಸಿಕ 85 ರನ್‌ಗಳ ಇನ್ನಿಂಗ್ಸ್ ಈ ಗೆಲುವಿಗೆ ಕಾರಣವಾಯಿತು. ಈ ಮೂಲಕ 27 ವರ್ಷಗಳ ನಂತರ ಆಂಗ್ಲರ ನೆಲದಲ್ಲಿ




ಸರಣಿ ವಶಪಡಿಸಿಕೊಂಡಿದೆ.

ಇಂಗ್ಲೆಂಡ್ ಮತ್ತು ದಕ್ಷಿಣ ಆಫ್ರಿಕಾ ನಡುವೆ 3 ಪಂದ್ಯಗಳ ಏಕದಿನ ಸರಣಿ ನಡೆಯುತ್ತಿದೆ. ಸದ್ಯ ಮೊದಲ ಎರಡು ಏಕದಿನ ಪಂದ್ಯಗಳನ್ನು ಗೆಲ್ಲುವ ಮೂಲಕ ದಕ್ಷಿಣ ಆಫ್ರಿಕಾ ಸರಣಿಯನ್ನು ಗೆದ್ದಿದೆ.

1998 ರ ನಂತರ ಮೊದಲ ಬಾರಿಗೆ ದಕ್ಷಿಣ ಆಫ್ರಿಕಾ ಇಂಗ್ಲೆಂಡ್‌ನಲ್ಲಿ ಏಕದಿನ ಸರಣಿಯನ್ನು ಗೆದ್ದಿತು. 2017 ರಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಇಂಗ್ಲೆಂಡ್ ತನ್ನ ಕೊನೆಯ ದ್ವಿಪಕ್ಷೀಯ ಏಕದಿನ ಸರಣಿಯನ್ನು ಗೆದ್ದುಕೊಂಡಿತು. ಸರಣಿಯ ಎರಡನೇ ಏಕದಿನ ಪಂದ್ಯವನ್ನು ಸೆಪ್ಟೆಂಬರ್ 4 ರಂದು ಲಾರ್ಡ್ಸ್‌ನಲ್ಲಿ ನಡೆಸಲಾಯಿತು, ಇದರಲ್ಲಿ ದಕ್ಷಿಣ ಆಫ್ರಿಕಾ 5 ರನ್‌ಗಳ ಜಯ ಸಾಧಿಸಿತು. ಎರಡೂ ತಂಡಗಳ ನಡುವೆ ಹೈ ಸ್ಕೋರಿಂಗ್ ಪಂದ್ಯ ನಡೆದಿದ್ದು, ಕೊನೆಯ ಓವರ್ ವರೆಗೂ ರೋಚಕತೆ ಸೃಷ್ಟಿಸಿತ್ತು.

ಲಾರ್ಡ್ಸ್ ಕ್ರಿಕೆಟ್ ಮೈದಾನದಲ್ಲಿ ನಡೆದ ಎರಡನೇ ಪಂದ್ಯದಲ್ಲಿ, ಇಂಗ್ಲೆಂಡ್ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿತು. ಅಂತಹ ಪರಿಸ್ಥಿತಿಯಲ್ಲಿ, ದಕ್ಷಿಣ ಆಫ್ರಿಕಾ 50 ಓವರ್‌ಗಳಲ್ಲಿ 8 ವಿಕೆಟ್‌ಗಳ ನಷ್ಟಕ್ಕೆ 330 ರನ್ ಗಳಿಸಿತು. ಪ್ರವಾಸಿ ತಂಡದ ಪರ ಮ್ಯಾಥ್ಯೂ ಬ್ರೀಟ್ಜ್ಕೆ ಅತ್ಯಧಿಕ 85 ರನ್ ಗಳಿಸಿದರು. ಇದರ ಹೊರತಾಗಿ, ಟ್ರಿಸ್ಟಾನ್ ಸ್ಟಬ್ಸ್ ಕೂಡ 58 ರನ್‌ಗಳ ಇನ್ನಿಂಗ್ಸ್ ಆಡಿದರು. ಐಡೆನ್ ಮಾರ್ಕ್ರಾಮ್ (49), ಡೆವಾಲ್ಡ್ ಬ್ರೆವಿಸ್ (42), ರಯಾನ್ ರಿಕಲ್ಟನ್ (35) ಮತ್ತು ಕಾರ್ಬಿನ್ ಬಾಷ್ (32★) ಕೂಡ ಉತ್ತಮ ಇನ್ನಿಂಗ್ಸ್ ಆಡಿದರು. ಇಂಗ್ಲೆಂಡ್ ಪರ ಜೋಫ್ರಾ ಆರ್ಚರ್ 4 ವಿಕೆಟ್ ಪಡೆದರು. ಆದಿಲ್ ರಶೀದ್ 2 ವಿಕೆಟ್ ಪಡೆದರೆ, ಜಾಕೋಬ್ ಬೆಥೆಲ್ 1 ವಿಕೆಟ್ ಪಡೆದರು. 331 ರನ್‌ಗಳ ಗುರಿಯನ್ನು ಬೆನ್ನಟ್ಟಲು ಇಂಗ್ಲೆಂಡ್ ಕೂಡ ಉತ್ತಮವಾಗಿ ಬ್ಯಾಟಿಂಗ್ ಮಾಡಿತು. ಜೋ ರೂಟ್ 61 ರನ್ ಗಳಿಸಿದರು ಮತ್ತು ಜೋಸ್ ಬಟ್ಲರ್ ಕೂಡ 61 ರನ್ ಸಿಡಿಸಿದರು. ಜಾಕೋಬ್ ಬೆಥೆಲ್ 58 ರನ್ ಚಚ್ಚಿದರು. ವಿಲ್ ಜಾಕ್ಸ್ (39) ಮತ್ತು ನಾಯಕ ಹ್ಯಾರಿ ಬ್ರೂಕ್ (33) ಸಹ ಕೊಡುಗೆ ನೀಡಿದರು. ಕೊನೆಯಲ್ಲಿ, ಜೋಫ್ರಾ ಆರ್ಚರ್ ಕೂಡ ವೇಗದಲ್ಲಿ 27 ರನ್ ಗಳಿಸಿ ಅಜೇಯರಾಗಿ ಉಳಿದರು. ಇದರ ಹೊರತಾಗಿಯೂ, ಕೊನೆಯ ಓವರ್‌ನಲ್ಲಿ ಇಂಗ್ಲೆಂಡ್ ಕೇವಲ 5 ರನ್ ಗಳಿಂದ ಪಂದ್ಯವನ್ನು ಸೋತಿತು.

# ಏಷ್ಯಾ ಕಪ್‌ನಲ್ಲಿ ಭಾರತದ ಮೊದಲ ಪಂದ್ಯ ಯಾವಾಗ




ಮುಂದಿನ ವರ್ಷ ನಡೆಯಲಿರುವ ಟಿ20 ವಿಶ್ವಕಪ್‌ಗೆ ಸಿದ್ಧತೆಗಳನ್ನು ಗಮನದಲ್ಲಿಟ್ಟುಕೊಂಡು ಸೂರ್ಯಕುಮಾರ್ ಯಾದವ್ ನಾಯಕತ್ವದಲ್ಲಿ ನಡೆಯಲಿರುವ ಏಷ್ಯಾ ಕಪ್ ಭಾರತಕ್ಕೆ ಬಹಳ ಮುಖ್ಯವಾಗಲಿದೆ. ಭಾರತ ತಂಡವು ಸೆಪ್ಟೆಂಬರ್ 10 ರಂದು ದುಬೈ ಮೈದಾನದಲ್ಲಿ ಯುಎಇ ವಿರುದ್ಧ ಆಡುವ ಮೂಲಕ ತನ್ನ ಅಭಿಯಾನವನ್ನು ಆರಂಭಿಸಲಿದೆ.

ಯುಎಇಯಲ್ಲಿ ಸೆಪ್ಟೆಂಬರ್ 9 ರಿಂದ ಸೂರ್ಯಕುಮಾರ್ ಯಾದವ್ ನಾಯಕತ್ವದಲ್ಲಿ ಆರಂಭವಾಗುವ ಟಿ20 ಏಷ್ಯಾ ಕಪ್‌ನಲ್ಲಿ ಭಾರತ ತಂಡ ಭಾಗವಹಿಸಲಿದೆ.

ಟೀಮ್ ಇಂಡಿಯಾದ ಎಲ್ಲಾ ಆಟಗಾರರು ಸೆಪ್ಟೆಂಬರ್ 4 ರೊಳಗೆ ದುಬೈ ತಲುಪಲು ಬಿಸಿಸಿಐನಿಂದ ಆದೇಶ ಪಡೆದಿದ್ದರು. ಸೆಪ್ಟೆಂಬರ್ 5 ರಂದು ಅಂದರೆ ಇಂದಿನಿಂದ ಐಸಿಸಿ ಅಕಾಡೆಮಿಯಲ್ಲಿ ತಂಡದ ಮೊದಲ ಅಭ್ಯಾಸ ಅವಧಿ ನಡೆಯಲಿದೆ. ಭಾರತ ತಂಡವು ಏಷ್ಯಾ ಕಪ್ 2025 ರಲ್ಲಿ ಪೂಲ್ ಎ ನಲ್ಲಿ ಸ್ಥಾನ ಪಡೆದಿದೆ, ಇದರಲ್ಲಿ ಯುಎಇ, ಓಮನ್ ಮತ್ತು ಪಾಕಿಸ್ತಾನ ತಂಡ ಕೂಡ ಇದೆ. ಸೆಪ್ಟೆಂಬರ್ 10 ರಂದು ನಡೆಯಲಿರುವ ಯುಎಇ ತಂಡದ ವಿರುದ್ಧ ಭಾರತ ತಂಡವು ಟೂರ್ನಿಯಲ್ಲಿ ತನ್ನ ಮೊದಲ ಪಂದ್ಯವನ್ನು ಆಡಬೇಕಾಗಿದೆ.

ಮುಂದಿನ ವರ್ಷ ನಡೆಯಲಿರುವ ಟಿ20 ವಿಶ್ವಕಪ್‌ಗೆ ಸಿದ್ಧತೆಗಳನ್ನು ಗಮನದಲ್ಲಿಟ್ಟುಕೊಂಡು ಸೂರ್ಯಕುಮಾರ್ ಯಾದವ್ ನಾಯಕತ್ವದಲ್ಲಿ ನಡೆಯಲಿರುವ ಏಷ್ಯಾ ಕಪ್ ಭಾರತಕ್ಕೆ ಬಹಳ ಮುಖ್ಯವಾಗಲಿದೆ. ಭಾರತ ತಂಡವು ಸೆಪ್ಟೆಂಬರ್ 10 ರಂದು ದುಬೈ ಮೈದಾನದಲ್ಲಿ ಯುಎಇ ವಿರುದ್ಧ ಆಡುವ ಮೂಲಕ ತನ್ನ ಅಭಿಯಾನವನ್ನು ಆರಂಭಿಸಲಿದೆ. ಈ ಮೈದಾನದಲ್ಲಿ ಭಾರತೀಯ ತಂಡದ ದಾಖಲೆಯು ಟಿ20 ಅಂತರರಾಷ್ಟ್ರೀಯ ಮಟ್ಟದಲ್ಲಿ ಬಹುತೇಕ ಸಮಾನವಾಗಿದೆ, ಇಲ್ಲಿ ಈವರೆಗೆ 9 ಪಂದ್ಯಗಳನ್ನು ಆಡಲಾಗಿದೆ, ಅದರಲ್ಲಿ 5 ಪಂದ್ಯಗಳನ್ನು ಟೀಮ್ ಇಂಡಿಯಾ ಗೆದ್ದರೆ, 4 ಪಂದ್ಯಗಳಲ್ಲಿ ಸೋಲನ್ನು ಎದುರಿಸಿದೆ. 2025 ರ ಏಷ್ಯಾ ಕಪ್ ವೇಳಾಪಟ್ಟಿಯನ್ನು ಘೋಷಿಸಿದಾಗ, ಎಲ್ಲಾ ಪಂದ್ಯಗಳು ಭಾರತೀಯ ಸಮಯ ಸಂಜೆ 7:30 ಕ್ಕೆ ಪ್ರಾರಂಭವಾಗಬೇಕಿತ್ತು, ಆದರೆ ಯುಎಇಯಲ್ಲಿ ಬಿಸಿಲಿನ ಬೇಗೆಯನ್ನು ಗಮನದಲ್ಲಿಟ್ಟುಕೊಂಡು, ಆಯೋಜನಾ ಸಮಿತಿಯು ಪಂದ್ಯಗಳ ಪ್ರಾರಂಭದ ಸಮಯವನ್ನು ಅರ್ಧ ಗಂಟೆ ಮುಂದಕ್ಕೆ ಹಾಕಲು ನಿರ್ಧರಿಸಿತು.

ಹೀಗಾಗಿ, ಈಗ ಭಾರತ ಮತ್ತು ಯುಎಇ ನಡುವಿನ ಈ ಪಂದ್ಯವು ಭಾರತೀಯ ಸಮಯದ ಪ್ರಕಾರ ರಾತ್ರಿ 8 ಗಂಟೆಗೆ ಪ್ರಾರಂಭವಾಗಲಿದ್ದು, ಟಾಸ್ ಸಂಜೆ 7:30 ಕ್ಕೆ ನಡೆಯಲಿದೆ. ಭಾರತದಲ್ಲಿ 2025 ರ ಏಷ್ಯಾ ಕಪ್ ಪಂದ್ಯಗಳನ್ನು ನೇರ ಪ್ರಸಾರ ಮಾಡುವ ಹಕ್ಕನ್ನು ಸೋನಿ ಸ್ಪೋರ್ಟ್ಸ್ ನೆಟ್‌ವರ್ಕ್ ಹೊಂದಿದೆ. ಭಾರತ v/s ಯುಎಇ ಪಂದ್ಯದ ನೇರ ಪ್ರಸಾರವನ್ನು ಸೋನಿ ಟೆನ್ 1 ಮತ್ತು ಸೋನಿ ಟೆನ್ 3 ಚಾನೆಲ್‌ಗಳಲ್ಲಿ ಮಾಡಲಾಗುತ್ತದೆ. ಪಂದ್ಯದ ಲೈವ್ ಸ್ಟ್ರೀಮ್ ಕುರಿತು ಹೇಳುವುದಾದರೆ, ಅಭಿಮಾನಿಗಳು ಸೋನಿ ಲಿವ್ ಅಪ್ಲಿಕೇಶನ್‌ನಲ್ಲಿ ಭಾರತ v/s ಯುಎಇ ಪಂದ್ಯವನ್ನು ಆನ್‌ಲೈನ್‌ನಲ್ಲಿ ವೀಕ್ಷಿಸಬಹುದು. ಇದಲ್ಲದೆ, ಅಭಿಮಾನಿಗಳು ತಮ್ಮ ಸ್ಮಾರ್ಟ್ ಟಿವಿಯಲ್ಲಿ ಸೋನಿ ಲಿವ್ ಅಪ್ಲಿಕೇಶನ್‌ಗೆ ಲಾಗಿನ್ ಆಗುವ ಮೂಲಕ ಪಂದ್ಯವನ್ನು ವೀಕ್ಷಿಸಬಹುದು.

# ಹೇರ್ ಸ್ಟೈಲ್ ಬದಲಿಸಿದ ಹಾರ್ದಿಕ್ ಪಾಂಡ್ಯ

ಏಷ್ಯಾಕಪ್ 2025ರಲ್ಲಿ ಭಾಗವಹಿಸಲು ಟೀಂ ಇಂಡಿಯಾ ದುಬೈ ತಲುಪಿದೆ. ಮುಂಬೈನಿಂದ ದುಬೈಗೆ ಪ್ರಯಾಣಿಸಿದ ಹಾರ್ದಿಕ್ ಪಾಂಡ್ಯ ಅವರ ಹೊಸ ಹೇರ್‌ಸ್ಟೈಲ್ ಸಾಮಾಜಿಕ ಮಾಧ್ಯಮದಲ್ಲಿ ಚರ್ಚೆಯಾಗುತ್ತಿದೆ. ಅವರ ಹೊಸ ಲುಕ್ ಅನ್ನು ಬೆನ್ ಸ್ಟೋಕ್ಸ್ ಮತ್ತು ನಿಕೋಲಸ್ ಪೂರನ್ ಅವರೊಂದಿಗೆ ಹೋಲಿಸಲಾಗುತ್ತಿದೆ.

2025 ರ ಏಷ್ಯಾಕಪ್‌ನಲ್ಲಿ ಭಾಗವಹಿಸಲು ಟೀಂ ಇಂಡಿಯಾ ದುಬೈ ತಲುಪಿದೆ. ಭಾರತ ತಂಡದ ಮೊದಲ ಪಂದ್ಯ ಸೆಪ್ಟೆಂಬರ್ 10 ರಂದು ಯುನೈಟೆಡ್ ಅರಬ್ ಎಮಿರೇಟ್ಸ್ ವಿರುದ್ಧ ನಡೆಯಲಿದೆ. ಇದಕ್ಕೂ ಮೊದಲು ತಂಡ ದುಬೈನಲ್ಲಿ ಅಭ್ಯಾಸ ನಡೆಸಲಿದೆ. ಆದರೆ ಅದಕ್ಕೂ ಮುನ್ನ ನಿನ್ನೆ ತಾನೆ ಮುಂಬೈನಿಂದ ದುಬೈಗೆ ಪ್ರಯಾಣ ಬೆಳೆಸಿದ್ದ ಹಾರ್ದಿಕ್ ಪಾಂಡ್ಯ ದುಬೈ ತಲುಪಿದ ಕೂಡಲೇ ಗುರುತೇ ಸಿಗದಷ್ಟು ಬದಲಾಗಿದ್ದಾರೆ. ಇದಕ್ಕೆ ಕಾರಣ ಅವರ ಹೊಸ ಹೇರ್ ಸ್ಟೈಲ್. ನಿನ್ನೆ ಮುಂಬೈ ವಿಮಾನ ನಿಲ್ದಾಣದಲ್ಲಿ ಪಾಂಡ್ಯ ಕಾಣಿಸಿಕೊಂಡಾಗ ಅವರ ತಲೆಯ ತುಂಬ ಕರಿಯ ಕೂದಲುಗಳು ಕಂಗೊಳಿಸುತ್ತಿದ್ದವು. ಆದರೆ ದುಬೈ ತಲುಪಿದ ಕೂಡಲೇ ಪಾಂಡ್ಯ ತಲೆಯಲ್ಲಿ ಕರಿ ಕೂದಲುಗಳು ನಾಪತ್ತೆಯಾಗಿರುವುದಲ್ಲದೆ ಅವರ ಹೇರ್ ಸ್ಟೈಲ್ ಕೂಡ ಬದಲಾಗಿದೆ.

**ಹಾರ್ದಿಕ್ ಹೊಸ ಹೇರ್ ಸ್ಟೈಲ್:** ಮೇಲೆ ಹೇಳಿದಂತೆ ಹಾರ್ದಿಕ್ ಪಾಂಡ್ಯ ಏಷ್ಯಾಕಪ್‌ಗೂ ಮುನ್ನ ತಮ್ಮ ಕೇಶವಿನ್ಯಾಸವನ್ನು ಬದಲಾಯಿಸಿಕೊಂಡಿದ್ದಾರೆ. ಅದರ ಫೋಟೋವನ್ನು ತಮ್ಮ ಇನ್‌ಸ್ಟಾಗ್ರಾಮ್ ಪುಟದಲ್ಲಿ ಪೋಸ್ಟ್ ಮಾಡಿರುವ ಹಾರ್ದಿಕ್, 'ನ್ಯೂ ಮಿ' ಎಂಬ ಶೀರ್ಷಿಕೆಯನ್ನು ಸಹ ನೀಡಿದ್ದಾರೆ.

ಇದೀಗ ಹಾರ್ದಿಕ್ ಅವರ ನೂತನ ಕೇಶವಿನ್ಯಾಸ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಯ ವಿಷಯವಾಗಿದೆ. ಅಭಿಮಾನಿಗಳು ಈ ಕೇಶವಿನ್ಯಾಸವನ್ನು ಇಂಗ್ಲೆಂಡ್‌ನ ಟೆಸ್ಟ್ ತಂಡದ ನಾಯಕ ಬೆನ್ ಸ್ಟೋಕ್ಸ್ ಮತ್ತು ವೆಸ್ಟ್ ಇಂಡೀಸ್‌ನ ಮಾಜಿ ಕ್ರಿಕೆಟಿಗ ನಿಕೋಲಸ್ ಪೂರನ್ ಅವರೊಂದಿಗೆ ಹೋಲಿಸುತ್ತಿದ್ದಾರೆ. ಹಾರ್ದಿಕ್ ಪಾಂಡ್ಯ ಕೊನೆಯ ಬಾರಿಗೆ 2025ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಅಂತರರಾಷ್ಟ್ರೀಯ ಪಂದ್ಯವನ್ನು ಆಡಿದ್ದರು. ಅಂದಿನಿಂದ ಅವರು ಯಾವುದೇ ಅಂತರರಾಷ್ಟ್ರೀಯ ಪಂದ್ಯವನ್ನು ಆಡಿಲ್ಲ. ಹೀಗಾಗಿ ಸೆಪ್ಟೆಂಬರ್ 9 ರಂದು ಯುಎಇ ವಿರುದ್ಧ ಪಂದ್ಯವನ್ನಾಡಲಿರುವ ಹಾರ್ದಿಕ್ ಅವರಿಂದ ತಂಡವು ಉತ್ತಮ ಪ್ರದರ್ಶನವನ್ನು ನಿರೀಕ್ಷಿಸುತ್ತಿದೆ.



# ಏಕದಿನ ವಿಶ್ವಕಪ್ ಆರಂಭಕ್ಕೂ ಮುನ್ನ ಭಾರತ ತಂಡದಲ್ಲಿ ಮಹತ್ವದ ಬದಲಾವಣೆ

**ತಿಂಗಳುಗಳ ನಂತರ ಕಣಕ್ಕೆ**



ಭಾರತೀಯ ಮಹಿಳಾ ಕ್ರಿಕೆಟ್ ತಂಡದ ಸ್ಟಾರ್ ವಿಕೆಟ್ ಕೀಪರ್ ಬ್ಯಾಟರ್ ಯಾಸ್ತಿಕಾ ಭಾಟಿಯಾ ಅವರು ಮೊಣಕಾಲಿನ ಗಾಯದಿಂದಾಗಿ 2025ರ ಮಹಿಳಾ ವಿಶ್ವಕಪ್‌ನಿಂದ ಹೊರಗುಳಿದಿದ್ದಾರೆ. ಅವರ ಸ್ಥಾನದಲ್ಲಿ ಉಮಾ ಛೆತ್ರಿ ಅವರನ್ನು ತಂಡಕ್ಕೆ ಸೇರಿಸಿಕೊಳ್ಳಲಾಗಿದೆ. ಈ ಗಾಯದಿಂದಾಗಿ ಭಾರತ ತಂಡಕ್ಕೆ ಭಾರಿ ಹಿನ್ನಡೆಯಾಗಿದೆ. ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿ ಮತ್ತು ವಿಶ್ವಕಪ್‌ಗೂ ಮುನ್ನ ಈ ಬದಲಾವಣೆ ಭಾರತಕ್ಕೆ ಸವಾಲಾಗಿದೆ. ಉಮಾ ಛೆತ್ರಿಗೆ ಇದು ಅತ್ಯುತ್ತಮ ಅವಕಾಶವಾಗಿದೆ.

2025 ರ ಮಹಿಳಾ ಏಕದಿನ ವಿಶ್ವಕಪ್ ಸೆಪ್ಟೆಂಬರ್ 30 ರಿಂದ ಪ್ರಾರಂಭವಾಗಲಿದೆ. ಈ ಪಂದ್ಯಾವಳಿ ಭಾರತ ಮತ್ತು ಶ್ರೀಲಂಕಾದ ಆತಿಥ್ಯದಲ್ಲಿ ನಡೆಯಲಿದೆ. ಆದರೆ ಈ ಟೂರ್ನಿ ಆರಂಭಕ್ಕೂ ಮೊದಲು, ಟೀಂ ಇಂಡಿಯಾ ಆಸ್ಟ್ರೇಲಿಯಾ ವಿರುದ್ಧ ಏಕದಿನ ಸರಣಿಯನ್ನು ಸಹ ಆಡಬೇಕಾಗಿದೆ. ಹೀಗಾಗಿ ನೀತು ಡೇವಿಡ್ ನೇತೃತ್ವದ ಮಹಿಳಾ ಆಯ್ಕೆ ಸಮಿತಿಯು ಆಗಸ್ಟ್ 19 ರಂದು ಭಾರತೀಯ ಮಹಿಳಾ ತಂಡದ ತಂಡವನ್ನು ಘೋಷಿಸಿತ್ತು. ಆದರೆ ಈಗ ತಂಡದಲ್ಲಿ ದೊಡ್ಡ ಬದಲಾವಣೆಯಾಗಿದೆ. ಗಾಯದ ಕಾರಣದಿಂದಾಗಿ ಸ್ಟಾರ್ ವಿಕೆಟ್ ಕೀಪರ್ ಬ್ಯಾಟರ್ ಯಾಸ್ತಿಕಾ ಭಾಟಿಯಾ ತಂಡದಿಂದ ಹೊರಗುಳಿದಿದ್ದಾರೆ. ಹೀಗಾಗಿ ಅವರ ಬದಲಿಯಾಗಿ ಉಮಾ ಛೆತ್ರಿ ಅವರನ್ನು ತಂಡಕ್ಕೆ ಆಯ್ಕೆ ಮಾಡಲಾಗಿದೆ. ಏಕದಿನ ವಿಶ್ವಕಪ್ ಆರಂಭಕ್ಕೆ ಕೆಲವೇ ದಿನಗಳು ಬಾಕಿ ಉಳಿದಿರುವಾಗ ಭಾರತೀಯ ಮಹಿಳಾ ತಂಡವು ಭಾರಿ ಹಿನ್ನಡೆ ಅನುಭವಿಸಿದೆ. ಮುಂಬರುವ ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿ ಮತ್ತು ಈ ತಿಂಗಳ ಕೊನೆಯಲ್ಲಿ ಪ್ರಾರಂಭವಾಗುವ ಐಸಿಸಿ ಮಹಿಳಾ ವಿಶ್ವಕಪ್ 2025 ರಿಂದ ಯಸ್ತಿಕಾ ಭಾಟಿಯಾ ಹೊರಗುಳಿದಿದ್ದಾರೆ. ವಿಶಾಖಪಟ್ಟಣದಲ್ಲಿ ನಡೆಯುತ್ತಿರುವ ಭಾರತೀಯ ಮಹಿಳಾ ತಂಡದ ತಯಾರಿ ಶಿಬಿರದ ಸಮಯದಲ್ಲಿ ಮೊಣಕಾಲಿನ ಗಾಯಕ್ಕೆ ಯಾಸ್ತಿಕಾ ತುತ್ತಾಗಿದ್ದು, ಅವರನ್ನು ತಂಡದಿಂದ ಕೈಬಿಡಲಾಗಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**